# ಆಯವ್ಯಯ

## 2018-2019

05ನೇ ಜುಲೈ 2018



ಮಂಡಿಸಿದವರು
**ಶ್ರೀ ಹೆಚ್.ಡಿ. ಕುಮಾರಸ್ವಾಮಿ**
ಮಾನ್ಯ ಮುಖ್ಯಮಂತ್ರಿಗಳು

**ಸನ್ಮಾನ್ಯ ಸಭಾಧ್ಯಕ್ಷರೇ,**

1. ನಾನು 2018–19ನೇ ಸಾಲಿನ ಆಯವ್ಯಯ ಪತ್ರವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

2. ಇದು ನಮ್ಮ ಮೈತ್ರಿ ಸರ್ಕಾರದ ಪ್ರಥಮ ಮುಂಗಡ ಪತ್ರ. ಮೈತ್ರಿ ಸರ್ಕಾರದ ಒಲವು–ನಿಲುವುಗಳು; ಕನಸು ನನಸುಗಳು; ಸಂಕಷ್ಟ–ಸವಾಲುಗಳು; ಇದರಲ್ಲಿ ಪ್ರತಿಬಿಂಬಿತವಾಗಿವೆ.

3. ಮೇ 12, 2018ರಂದು ನಡೆದ 15ನೇ ವಿಧಾನಸಭಾ ಚುನಾವಣೆಯು ಕರ್ನಾಟಕದ ದಿಕ್ಸೂಚಿಯನ್ನೇ ಬದಲಿಸಿದೆ. ಚುನಾವಣೆಗೆ ಮುನ್ನ ಪರಸ್ಪರ ಸೆಣಸಾಡಿದ ಎರಡು ರಾಜಕೀಯ ಪಕ್ಷಗಳು, ಫಲಿತಾಂಶದ ನಂತರ ಮೈತ್ರಿ ಸಾಧಿಸಿ, ಸರ್ಕಾರ ರಚಿಸಿರುವುದು ಪ್ರಜಾಪ್ರಭುತ್ವದ ಒಂದು ಸೊಬಗು.

4. ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಯಲ್ಲಿ ರಾಷ್ಟ್ರಮಟ್ಟದಲ್ಲಿ ಹಾಗೂ ರಾಜ್ಯಗಳಲ್ಲಿ ಮೈತ್ರಿ ಸರ್ಕಾರಗಳು ಅನಿವಾರ್ಯವಾಗುತ್ತಿವೆ. ಈ ಹಿನ್ನೆಲೆಯಲ್ಲಿ ನಾವು ರಾಜ್ಯದ ಮೈತ್ರಿ ಸರ್ಕಾರದ ಅನಿವಾರ್ಯತೆ ಮತ್ತು ಅಗತ್ಯದ ವಾಸ್ತವತೆಯನ್ನು ಒಪ್ಪಿಕೊಂಡಿದ್ದೇವೆ. ಸಮನ್ವಯ ಸಮಿತಿಯ ಆಶಯದಂತೆ ಎರಡೂ ಪಕ್ಷಗಳ ಪ್ರಣಾಳಿಕೆಗಳ ಪ್ರಮುಖ ಅಂಶಗಳನ್ನು ಆಧರಿಸಿ ಸಾಮಾನ್ಯ ಕನಿಷ್ಠ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಿದ್ದೇವೆ.

5. ಮೈತ್ರಿ ಸರ್ಕಾರದ ಸುಲಲಿತ ಚಾಲನೆಗಾಗಿ ನಾವು ರೂಪಿಸಿಕೊಂಡಿರುವ ಮೈತ್ರಿ ಧರ್ಮಕ್ಕೆ ಅನುಗುಣವಾಗಿ ಮುನ್ನಡೆದು ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಯನ್ನು ಸಾಧಿಸುತ್ತೇವೆ.

6. ಹೊಸ ಸರ್ಕಾರ ರಚನೆಯಾದಾಗ ಜನರು ಸಹಜವಾಗಿ ಸರ್ಕಾರದಿಂದ ಸಾಕಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿರುತ್ತಾರೆ. ನಾವು ಜನರ ನಿರೀಕ್ಷೆಗಳನ್ನು ಹುಸಿಗೊಳಿಸದೆ ಅವರ ಆಶಯಗಳನ್ನು ಈಡೇರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇವೆ.

7. ಈಗ ನಮ್ಮ ಮೈತ್ರಿ ಸರ್ಕಾರದ ಮುಂದೆ ರೈತರ ಸಾಲ ಮನ್ನಾ ಭರವಸೆಯಂತಹ ಬೃಹತ್ ಸವಾಲಿದೆ. ಇದನ್ನು ಈಡೇರಿಸಲು ಅಗತ್ಯವಿರುವ ಸಂಪನ್ಮೂಲ ಸಂಗ್ರಹಣೆ ನಮ್ಮ ಸರ್ಕಾರದ ಪ್ರಥಮ ಆದ್ಯತೆಯಾಗಿದೆ. ಇದಕ್ಕಾಗಿ ನಾವು ಲಭ್ಯವಿರುವ ಸಂಪನ್ಮೂಲಗಳನ್ನು ಒಗ್ಗೂಡಿಸಲು ಈಗಾಗಲೇ ಕಾರ್ಯಪ್ರವೃತ್ತರಾಗಿದ್ದೇವೆ. ಈ ನಿಟ್ಟಿನಲ್ಲಿ ಸರ್ಕಾರದ ಅನಗತ್ಯ ದುಂದು ವೆಚ್ಚಗಳಿಗೆ ಕಡಿವಾಣ ಹಾಕಲು ನಾನು ಮುಖ್ಯಮಂತ್ರಿಗಳ ಸಚಿವಾಲಯದಿಂದಲೇ ಮಿತವ್ಯಯದ ನಡೆಗಳನ್ನು ಆರಂಭಿಸಿದ್ದೇನೆ. ನನ್ನ ಸಹೋದ್ಯೋಗಿ ಸಚಿವರುಗಳು ಸಹ ಮಿತವ್ಯಯದ ವಿಷಯದಲ್ಲಿ ನನ್ನ ನಡೆಗಳನ್ನು ಅನುಸರಿಸುತ್ತಾರೆ ಎನ್ನುವ ವಿಶ್ವಾಸ ನನಗಿದೆ.

8. ಕರ್ನಾಟಕವು ಹಲವಾರು ಕ್ಷೇತ್ರಗಳಲ್ಲಿ ರಾಷ್ಟ್ರದಲ್ಲಿಯೇ ಮುಂಚೂಣಿ ರಾಜ್ಯವಾಗಿದೆ. ಆದರೆ ನಾವು ಇಷ್ಟಕ್ಕೆ ಸಂತೃಪ್ತರಾಗದೆ ಇನ್ನು ಹಲವಾರು ವಲಯಗಳಲ್ಲಿ ಮುಂಚೂಣಿ ರಾಜ್ಯವಾಗಲು ಪ್ರಯತ್ನಿಸಬೇಕಾಗಿದೆ. ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲಾ ವಲಯಗಳಲ್ಲೂ ಸಮಾನ ಬೆಳವಣಿಗೆ ಹಾಗೂ ಸಮಗ್ರ ಪ್ರಗತಿಯಾಗಬೇಕು. ಈ ದಿಕ್ಕಿನಲ್ಲಿ ನಾವು ಕೃಷಿ ಮತ್ತು ಕೈಗಾರಿಕಾ ವಲಯದ ಬೆಳವಣಿಗೆಗೆ ಮತ್ತಷ್ಟು ಚೈತನ್ಯವನ್ನು ತುಂಬುತ್ತೇವೆ. ಇತ್ತೀಚಿನ ವರ್ಷಗಳಲ್ಲಿ ರಾಜ್ಯದ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ

ನೀಡುತ್ತಿರುವ ಸೇವಾ ವಲಯಕ್ಕೆ ಕೂಡ ವಿಶೇಷ ಉತ್ತೇಜನ ನೀಡುತ್ತೇವೆ.

9. ಕರ್ನಾಟಕ ಬಹಳ ಹಿಂದಿನಿಂದಿಲೂ ಆರ್ಥಿಕ ಶಿಸ್ತನ್ನು ಕಾಪಾಡಿಕೊಂಡು ಬಂದಿರುವ ರಾಜ್ಯ. ಈ ಹಿನ್ನೆಲೆಯಲ್ಲಿ ರೈತರ ಸಾಲ ಮನ್ನಾದಂತಹ ಕಠಿಣ ಸವಾಲನ್ನು ಎದುರಿಸುವ ಸಂದರ್ಭದಲ್ಲಿಯೂ ಸಹ ನಮ್ಮ ಮೈತ್ರಿ ಸರ್ಕಾರ ಆರ್ಥಿಕ ಶಿಸ್ತಿಗೆ ಬದ್ಧವಾಗಿ ನಡೆಯುತ್ತದೆ ಎನ್ನುವ ಭರವಸೆಯನ್ನು ನಾನು ಈ ಗೌರವಾನ್ವಿತ ಸದನಕ್ಕೆ ನೀಡಬಯಸುತ್ತೇನೆ.

10. ಯಾವುದೇ ಸರ್ಕಾರ ತಾಯಿ ಹೃದಯ ಹೊಂದಿರಬೇಕು ಎನ್ನುವುದು ನನ್ನ ನಂಬಿಕೆ. ಹೀಗಾಗಿ ಮೈತ್ರಿ ಸರ್ಕಾರದ ಎಲ್ಲಾ ಕಾರ್ಯಕ್ರಮಗಳನ್ನು ಮಾತೃ ಮಮತೆಯಿಂದ ರೂಪಿಸಿ ಅನುಷ್ಠಾನಗೊಳಿಸುವ ಆಶಯ ನಮ್ಮದು. ಈ ಹಿಂದಿನ ಸರ್ಕಾರದ ಜನಪರ ಯೋಜನೆಗಳು ಮತ್ತು ಕಾರ್ಯಕ್ರಮಗಳಿಗೆ ಮತ್ತಷ್ಟು ಚೈತನ್ಯ ತುಂಬಿ ಮುಂದುವರಿಸುವುದು ಮೈತ್ರಿ ಸರ್ಕಾರದ ಪ್ರಮುಖ ಧ್ಯೇಯವಾಗಿದೆ.

11. ಗ್ರಾಮೀಣ ಕರ್ನಾಟಕದಲ್ಲಿ ಹೊಸ ಕನಸುಗಳನ್ನು ಬಿತ್ತಿ ಬೆಳೆಯುವುದು ನಮ್ಮ ಬಯಕೆ. ಯುವ ಸಮುದಾಯದಲ್ಲಿ ಚೈತನ್ಯ ಚಿಮ್ಮಿಸುವುದು ನಮ್ಮ ಆಸೆ. ಮಹಿಳೆಯರ ಅಂಗಳದಲ್ಲಿ ತಂಗಾಳಿ ತರುವುದು ನಮ್ಮ ಆಕಾಂಕ್ಷೆ. ರೈತಾಪಿ ಜನರ ಬದುಕಿನಲ್ಲಿ ನೆಮ್ಮದಿ ಮೂಡಿಸುವುದು ನಮ್ಮ ಸಂಕಲ್ಪ.

ನಿನ್ನದೆ ನೆಲ! ನಿನ್ನದೆ ಹೊಲ!
ನಿನ್ನದೆ ಕಾನ್! ನಿನ್ನದೆ ಬಾನ್!
ನಿನ್ನದೆ ನುಡಿ! ನಿನ್ನದೆ ಗುಡಿ!
ನಿನ್ನದೆ ಹೊಳೆ! ನಿನ್ನದೆ ಬೆಳೆ!
ನಿನಗಾಗಿಯೇ ನಿನ್ನೊಲವಿಗೆ
ಇನ್ ಮೀಸಲ್ ನೀ ಬೆಳೆವ ಬೆಳೆ!

**–ಕುವೆಂಪು**

ಕುವೆಂಪುರವರ ಈ ಶ್ರೀಸಾಮಾನ್ಯರ ದೀಕ್ಷಾಗೀತೆಯು ನಮ್ಮ ನಾಡಿನ ಬಗ್ಗೆ ಮೈತ್ರಿ ಸರ್ಕಾರದ ಮುನ್ನೋಟವಾಗಲಿದೆ. ಸರ್ಕಾರದ ನಡೆ–ನುಡಿಯೆಲ್ಲವೂ "ಕರ್ನಾಟಕ" ಕೇಂದ್ರೀಕೃತವಾಗಲಿದೆ.

## ರಾಜ್ಯದ ಅರ್ಥ ವ್ಯವಸ್ಥೆ

12. ರಾಜ್ಯದ ಒಟ್ಟಾರೆ ಆಂತರಿಕ ಉತ್ಪನ್ನವು 2016–17ರಲ್ಲಿದ್ದ ಶೇ.7.5ಕ್ಕೆ ಪ್ರತಿಯಾಗಿ 2017–18ರಲ್ಲಿ ಶೇ.8.5ರಷ್ಟು ಬೆಳವಣಿಗೆ ಯಾಗಿದೆ. ಕೃಷಿ ವಲಯವು ಶೇ.4.9 ರಷ್ಟು ಬೆಳವಣಿಗೆ ಹೊಂದುವ ನಿರೀಕ್ಷೆಯಿದೆ. ಕಳೆದ ಸಾಲಿನ ಶೇ.3.7ಕ್ಕೆ ಹೋಲಿಸಿದಲ್ಲಿ, ಈ ಸಾಲಿನಲ್ಲಿ ಕೈಗಾರಿಕಾ ವಲಯವು ಶೇ.4.9ರ ಬೆಳವಣಿಗೆಯನ್ನು ಹಾಗೂ ಕಳೆದ ಸಾಲಿನ ಶೇ.8.9ರ ಎದುರಾಗಿ ಸೇವಾ ವಲಯವು ಶೇ.10.4ರಷ್ಟು ಬೆಳವಣಿಗೆ ದರ ದಾಖಲಿಸುವ ನಿರೀಕ್ಷೆ ಇದೆ.

## 4ನೇ ರಾಜ್ಯ ಹಣಕಾಸು ಆಯೋಗ

13. ರಾಜ್ಯವು 4ನೇ ಹಣಕಾಸು ಆಯೋಗವನ್ನು 2015 ರಲ್ಲಿ ರಚಿಸಿತ್ತು. ಈ ಆಯೋಗವು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಭೇಟಿ ನೀಡಿ,

ಪಂಚಾಯತ್ ರಾಜ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಜನ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಜನ ಸಾಮಾನ್ಯರ ಅಭಿಪ್ರಾಯಗಳನ್ನು ಪಡೆದು ಅದನ್ನು ಪರಿಶೀಲಿಸಿ ತನ್ನ ಅಂತಿಮ ವರದಿಯನ್ನು ನೀಡಿರುತ್ತದೆ.

14. ಆಯೋಗವು ತನ್ನ ಶಿಫಾರಸ್ಸನ್ನು 2018-19 ರಿಂದ 2022-23 ರವರೆಗೆ 5 ವರ್ಷಗಳ ಅವಧಿಗೆ ಸಲ್ಲಿಸಿದೆ. 4ನೇ ರಾಜ್ಯ ಹಣಕಾಸು ಆಯೋಗವು ಮುಖ್ಯವಾಗಿ ಈ ಕೆಳಕಂಡ ಅಂಶಗಳನ್ನು ತನ್ನ ವರದಿಯಲ್ಲಿ ಶಿಫಾರಸ್ಸು ಮಾಡಿದೆ. ರಾಜ್ಯದ ಸ್ವಂತ ತೆರಿಗೆಯಲ್ಲಿ ಸ್ಥಳೀಯ ಸಂಸ್ಥೆಗಳ ಪಾಲನ್ನು, ರಾಜ್ಯದ ಸಾಲ ರಹಿತ ಸ್ವಂತ ರಾಜಸ್ವ ಸ್ವೀಕೃತಿಗಳ (Non Loan Net Own Revenue Receipt) ಆಧಾರದ ಮೇಲೆ ನಿರ್ಧರಿಸಲಾಗುತ್ತದೆ. ಅದರಂತೆ, ಆಯೋಗವು ರಾಜ್ಯದ ಸ್ವಂತ ತೆರಿಗೆಯಲ್ಲಿ ಸ್ಥಳೀಯ ಸಂಸ್ಥೆಗಳ ಪಾಲನ್ನು, ಶೇ.42 ರಿಂದ ಶೇ.48 ಕ್ಕೆ ಹೆಚ್ಚಿಸಲು ಶಿಫಾರಸ್ಸು ಮಾಡಿದೆ. ಅಂದರೆ 5 ವರ್ಷಗಳ ಅವಧಿಗೆ ಪಂಚಾಯತ್ ರಾಜ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಒಟ್ಟು ರಾಜಸ್ವ ಪಾಲು ಶೇ.48 ರಷ್ಟಾಗಿರುತ್ತದೆ. ಈ ಶಿಫಾರಸ್ಸನ್ನು 2018-19 ರಿಂದ 2022-23 ರವರೆಗೆ 5 ವರ್ಷಗಳ ಅವಧಿಗೆ ಹಂತ ಹಂತವಾಗಿ ಅನುಷ್ಠಾನಗೊಳಿಸಲು ನಮ್ಮ ಸರ್ಕಾರವು ನಿರ್ಧರಿಸಿದೆ.

## ರಾಜ್ಯದ ಹಣಕಾಸು ಪರಿಸ್ಥಿತಿ

15. ರೈತರ ಕೃಷಿ ಸಾಲ ಮನ್ನಾ ಮತ್ತು ಸರ್ಕಾರಿ ನೌಕರರ ವೇತನ ಪರಿಷ್ಕರಣೆಯಿಂದಾಗಿ ಉಂಟಾಗಿರುವ ಆರ್ಥಿಕ ಹೊರೆಯ ನಡುವೆಯೂ ಕೂಡ ನಮ್ಮ ಸರ್ಕಾರವು ರಾಜ್ಯ ಅಭಿವೃದ್ಧಿ ಯೋಜನೆಗಳಿಗೆ ಸಂಪನ್ಮೂಲ ಕೊರತೆ ಉಂಟಾಗದಂತೆ ಆರ್ಥಿಕ

ನಿರ್ವಹಣೆ ಮಾಡಲು ಹಾಗೂ ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮ, 2002ರಲ್ಲಿ ಸೂಚಿಸಿರುವ ವಿತ್ತೀಯ ಸೂಚ್ಯಂಕಗಳ ಮಿತಿಯೊಳಗೆ ಆಯವ್ಯಯವನ್ನು ಮಂಡಿಸಲು ಪ್ರಯತ್ನ ಮಾಡಿದೆ.

## ಪ್ರಗತಿಯ ಹಿನ್ನೋಟ

- ನಮ್ಮ ಮೈತ್ರಿ ಸರ್ಕಾರದ ನಿಕಟಪೂರ್ವ ಸರ್ಕಾರವು ರಾಜ್ಯದ ಪ್ರಗತಿಗಾಗಿ ಹಲವಾರು ಜನಪರ ಕಾರ್ಯಕ್ರಮಗಳನ್ನು ರೂಪಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ಇದನ್ನು ನಾನು ಇಲ್ಲಿ ಸ್ಮರಿಸಿಕೊಳ್ಳುತ್ತಾ ಈ ಹಿಂದೆ 16ನೇ ಫೆಬ್ರವರಿ 2018ರಲ್ಲಿ ಸದನದಲ್ಲಿ ಮಂಡಿಸಿದ್ದ ಆಯವ್ಯಯದಲ್ಲಿ ಘೋಷಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಮುಂದುವರೆಸುತ್ತೇನೆ.

- ಕರ್ನಾಟಕವನ್ನು ಹಸಿವು ಮುಕ್ತಗೊಳಿಸುವ ಆಶಯದ "ಅನ್ನಭಾಗ್ಯ" ಯೋಜನೆಯು ಬಡತನ ರೇಖೆಗಿಂತ ಕೆಳಗಿರುವ 3.85 ಕೋಟಿ ಜನರಿಗೆ ಆಹಾರ ಧಾನ್ಯವನ್ನು ಉಚಿತವಾಗಿ ವಿತರಿಸಿ ಬಡವರ ಹಸಿವನ್ನು ನೀಗಿಸಿದೆ. ಬಡಜನರು ಅನ್ನಕ್ಕಾಗಿ ಯಾರ ಮುಂದೆಯೂ ಕೈಚಾಚದೆ ಸ್ವಾಭಿಮಾನದಿಂದ ಬದುಕಬೇಕು ಎನ್ನುವ ಉದಾತ್ತ ಧ್ಯೇಯದ ಯೋಜನೆಯನ್ನು ಜಾರಿಗೊಳಿಸಿದ ಏಕೈಕ ರಾಜ್ಯ ಕರ್ನಾಟಕ ಎನ್ನುವುದು ನಮ್ಮ ಹೆಗ್ಗಳಿಕೆ. ಶಾಲಾ ಮಕ್ಕಳ ಅಪೌಷ್ಠಿಕತೆಯನ್ನು ನಿವಾರಿಸುವ ಉದ್ದೇಶದ ಕ್ಷೀರಭಾಗ್ಯ ಯೋಜನೆಯು ಅಂಗನವಾಡಿ ಮತ್ತು ಶಾಲಾ ಮಕ್ಕಳಿಗೆ ವಾರದಲ್ಲಿ ಐದು ದಿನ ಉಚಿತವಾಗಿ ಬಿಸಿಹಾಲು ವಿತರಿಸಿ ರಾಷ್ಟ್ರದ ಗಮನ ಸೆಳೆದಿದೆ. ಇದರಿಂದ ಶಾಲಾ ಮಕ್ಕಳಲ್ಲಿ ಪೌಷ್ಟಿಕತೆ ವೃದ್ಧಿಯಾಗುತ್ತಿದ್ದು, ಅವರು ಆಟ ಪಾಠಗಳಲ್ಲಿ ಹೆಚ್ಚು

ಉತ್ಸಾಹದಿಂದ ತೊಡಗಿಸಿಕೊಳ್ಳುತ್ತಿದ್ದಾರೆ. ಕಳೆದ ಐದು ವರ್ಷಗಳಲ್ಲಿ ಕ್ಷೀರ ಭಾಗ್ಯ ಯೋಜನೆಗಾಗಿ 2067 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ.

- ಕರ್ನಾಟಕವು ರಾಜಸ್ಥಾನದ ನಂತರ ಅತಿ ಹೆಚ್ಚು ಒಣಭೂಮಿಯನ್ನು ಹೊಂದಿರುವ ರಾಜ್ಯ. ಹೀಗಾಗಿ ಇಲ್ಲಿನ ಒಣಭೂಮಿ ಬೇಸಾಯದ ಸುಧಾರಣೆಗಾಗಿ 'ಕೃಷಿಭಾಗ್ಯ' ಯೋಜನೆಯನ್ನು ರೂಪಿಸಲಾಗಿದೆ. ಮಳೆಗಾಲದಲ್ಲಿ ನೀರನ್ನು ಸಂಗ್ರಹಿಸಿ ಬೇಸಿಗೆ ದಿನಗಳಲ್ಲಿ ಬೇಸಾಯಕ್ಕೆ ಬಳಸಿಕೊಳ್ಳಲು ಅನುಕೂಲವಾಗುವಂತೆ ರಾಜ್ಯದಾದ್ಯಂತ 1.9 ಲಕ್ಷ ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ. ಇವು ಭೂಮಿಯ ಅಂತರ್ಜಲವನ್ನು ವೃದ್ಧಿಸುವ ಜೊತೆಗೆ ಸುತ್ತಮುತ್ತಲಿನ ಪರಿಸರವನ್ನು ಹಸಿರುಗೊಳಿಸಿವೆ. ಕೃಷಿ ಭಾಗ್ಯ ಯೋಜನೆಯಡಿ ಎರಡು ಲಕ್ಷ ರೈತರಿಗೆ ಪಂಪ್‌ಸೆಟ್ ಖರೀದಿ, ಪಾಲಿಹೌಸ್ ನಿರ್ಮಾಣಕ್ಕಾಗಿ ಸುಮಾರು 1898 ಕೋಟಿ ರೂ.ಗಳ ಆರ್ಥಿಕ ನೆರವು ಕಲ್ಪಿಸಲಾಗಿದೆ.

- ರಾಜ್ಯದಲ್ಲಿ ತೋಟಗಾರಿಕೆಗೆ ಕೂಡ ಹೆಚ್ಚಿನ ಉತ್ತೇಜನ ನೀಡಲಾಗಿದ್ದು, ಕಳೆದ ಐದು ವರ್ಷಗಳಲ್ಲಿ ತೋಟಗಾರಿಕಾ ಕ್ಷೇತ್ರವು 19.22 ಲಕ್ಷ ಹೆಕ್ಟೇರ್‌ಗಳಿಂದ 21.36 ಲಕ್ಷ ಹೆಕ್ಟೇರವರೆಗೆ ಹೆಚ್ಚಳವಾಗಿದೆ. ಉತ್ಪಾದನೆ ಕೂಡ 162 ಲಕ್ಷ ಟನ್ ನಿಂದ 191 ಲಕ್ಷ ಟನ್‌ಗೆ ಏರಿಕೆಯಾಗಿದೆ. ಹನಿ ನೀರಾವರಿಗೆ ಶೇ.90ರಷ್ಟು ಸಹಾಯಧನ ನೀಡುವ ಮೂಲಕ ಬೇಸಾಯದಲ್ಲಿ ನೀರಿನ ಮಿತಬಳಕೆಗೆ ಉತ್ತೇಜನ ನೀಡಲಾಗಿದೆ. ತೋಟಗಾರಿಕೆ

ಉತ್ಪನ್ನಗಳ ಸಂಸ್ಕರಣಾ ಘಟಕಗಳಿಗೆ ಮತ್ತು ಕೊಯ್ಲಿನ ನಂತರದ ನಿರ್ವಹಣಾ ಘಟಕಗಳ ಸ್ಥಾಪನೆಗೆ ಹೆಚ್ಚಿನ ಧನಸಹಾಯವನ್ನು ಒದಗಿಸಲಾಗುತ್ತಿದೆ.

- ಸರ್ವರಿಗೂ ಆರೋಗ್ಯ ಕಲ್ಪಿಸುವ ಆಶಯದ ಕರ್ನಾಟಕ ಸಮಗ್ರ ಸುಧಾರಿತ ಆರೋಗ್ಯ ನೀತಿ-2017 ರಾಜ್ಯದ ಆರೋಗ್ಯ ವಲಯಕ್ಕೆ ಹೆಮ್ಮೆಯ ಕೊಡುಗೆ. ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ಆಸ್ಪತ್ರೆಯ ಸೇವೆಗಳು ಸಾಕಷ್ಟು ಸುಧಾರಣೆಗೊಂಡಿವೆ. ಸರ್ಕಾರಿ ಆಸ್ಪತ್ರೆಗಳ ಹಾಸಿಗೆ ಸಂಖ್ಯೆಯನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸಲಾಗಿದೆ. 949 ಹೊಸ ಆಸ್ಪತ್ರೆ ಕಟ್ಟಡಗಳ ನಿರ್ಮಾಣಕ್ಕೆ ಮತ್ತು 306 ಆಸ್ಪತ್ರೆ ಕಟ್ಟಡಗಳ ನವೀಕರಣಕ್ಕಾಗಿ 1429 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ. ಹೊಸದಾಗಿ 20 ಎಂಸಿಎಚ್ ಆಸ್ಪತ್ರೆಗಳನ್ನು 150 ಪ್ರಾಥಮಿಕ ಆರೋಗ್ಯ ವಿಸ್ತರಣಾ ಚಿಕಿತ್ಸಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ನೇರ ನೇಮಕಾತಿ ಮತ್ತು ಗುತ್ತಿಗೆ ಆಧಾರದಲ್ಲಿ 2316 ತಜ್ಞ ವೈದ್ಯರು ಮತ್ತು 2805 ಸಾಮಾನ್ಯ ವೈದ್ಯರ ನೇಮಕಾತಿ ಮಾಡಲಾಗಿದೆ. ಆಶಾ ಕಾರ್ಯಕರ್ತರ ಸಂಖ್ಯೆಯನ್ನು 30,000 ದಿಂದ 39,000ಕ್ಕೆ ಹೆಚ್ಚಿಸಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ 171 ಡಯಾಲಿಸಿಸ್ ಘಟಕಗಳನ್ನು ಸ್ಥಾಪಿಸಲಾಗಿದೆ. 30 ಜಿಲ್ಲಾ ಆಸ್ಪತ್ರೆಗಳಲ್ಲಿ ಸಿಟಿ ಸ್ಕ್ಯಾನ್ ಮತ್ತು ಎಂಆರ್ಐ ಸೌಲಭ್ಯ ಒದಗಿಸಲಾಗಿದೆ.

- ರಾಜ್ಯದ ಜನತೆಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಹಂತದ ಚಿಕಿತ್ಸಾ ಸೌಲಭ್ಯ ಒದಗಿಸುವ ಉದ್ದೇಶದಿಂದ 'ಆರೋಗ್ಯ ಕರ್ನಾಟಕ' ಯೋಜನೆಯನ್ನು ಜಾರಿಗೊಳಿಸಲಾಗಿದೆ. ಎಲ್ಲರಿಗೂ

ಆರೋಗ್ಯ (Universal Health Coverage) ಒದಗಿಸುವುದು ಈ ಯೋಜನೆಯ ಪ್ರಮುಖ ಧ್ಯೇಯವಾಗಿದೆ.

- ಪಶುಸಂಗೋಪನಾ ವಲಯದಲ್ಲಿ ಕರ್ನಾಟಕದ ಸಾಧನೆ ರಾಷ್ಟ್ರದ ಗಮನ ಸೆಳೆದಿದೆ. ರಾಜ್ಯದ ವಾರ್ಷಿಕ ಹಾಲಿನ ಉತ್ಪಾದನೆ ಶೇ.25ರಷ್ಟು ; ಮೊಟ್ಟೆಯ ಉತ್ಪಾದನೆ ಶೇ.29ರಷ್ಟು ಮತ್ತು ಮಾಂಸದ ಉತ್ಪಾದನೆ ಶೇ.26ರಷ್ಟು ಹೆಚ್ಚಳವಾಗಿದೆ.

- ರಾಷ್ಟ್ರದ ರೇಷ್ಮೆ ಉತ್ಪಾದನೆಯ ಶೇ.49ರಷ್ಟು ಪಾಲು ಕರ್ನಾಟಕದ್ದೇ ಆಗಿದೆ. ಸುಮಾರು 1.30 ಲಕ್ಷ ರೇಷ್ಮೆ ಕುಟುಂಬಗಳು ಮತ್ತು 7000ದಷ್ಟು ರೇಷ್ಮೆ ನೂಲು ಬಿಚ್ಚಾಣಿಕೆದಾರರು ರೇಷ್ಮೆ ಉದ್ಯಮವನ್ನು ಅವಲಂಬಿಸಿದ್ದು ಅವರ ನೆರವಿಗೆ ಸರ್ಕಾರ ನಿಂತಿದೆ.

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಆಯವ್ಯಯದಲ್ಲಿ ಅನುದಾನ ಒದಗಿಸಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿ ಕಾಯಿದೆಯನ್ನು ಜಾರಿಗೆ ತಂದ ರಾಷ್ಟ್ರದ ಎರಡನೆ ರಾಜ್ಯ-ಕರ್ನಾಟಕ. ಕಳೆದ ಐದು ವರ್ಷಗಳಲ್ಲಿ ಈ ಕಾಯಿದೆಯ ಬಲದಿಂದಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ 88,395 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ.

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ "ಹೋಬಳಿಗೊಂದು ವಸತಿ ಶಾಲೆ"ಯ

ಪರಿಕಲ್ಪನೆಯಲ್ಲಿ 270 ಹೊಸ ವಸತಿ ಶಾಲೆಗಳನ್ನು ಆರಂಭಿಸಲಾಗಿದೆ. 200 ಹೊಸ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಿ 74,000 ವಿದ್ಯಾರ್ಥಿಗಳಿಗೆ ಹೆಚ್ಚುವರಿಯಾಗಿ ಪ್ರವೇಶ ಕಲ್ಪಿಸಲಾಗಿದೆ.

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಿಮೆದಾರರಿಗೆ ಕರ್ನಾಟಕ ರಾಜ್ಯ ಹಣಕಾಸು ನಿಗಮವು ನೀಡುವ ಬಡ್ಡಿ ಸಹಾಯಧನ ಸೌಲಭ್ಯಕ್ಕಾಗಿ ಸಾಲದ ಗರಿಷ್ಠ ಮಿತಿಯನ್ನು 10 ಕೋಟಿ ರೂ.ಗಳವರೆಗೆ ಹೆಚ್ಚಿಸಿ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಕೂಡ ಇದನ್ನು ವಿಸ್ತರಿಸಲಾಗಿದೆ. ಇದರಿಂದ 1600 ಉದ್ದಿಮೆದಾರರಿಗೆ 908 ಕೋಟಿ ರೂ.ಗಳ ಸಾಲ ವಿತರಣೆಯಾಗಿ 121 ಕೋಟಿ ರೂ.ಗಳ ಬಡ್ಡಿ ಸಹಾಯಧನ ದೊರೆತಿದೆ.

- ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಪುಷ್ಟಿದಾಯಕ ಬಿಸಿಯೂಟ ನೀಡುವ ಮಹದಾಶಯದ "ಮಾತೃ ಪೂರ್ಣ" ಯೋಜನೆಯಡಿ ರಾಜ್ಯದಾದ್ಯಂತ 8.31 ಲಕ್ಷ ತಾಯಂದಿರು ಪ್ರಯೋಜನ ಪಡೆಯುತ್ತಿದ್ದಾರೆ.

- ದೇಶದಲ್ಲಿಯೇ ಪ್ರಥಮ ಬಾರಿಗೆ "ಪರಿಹಾರ" ಎಂಬ ಹೊಸ ತಂತ್ರಾಂಶದ ಮೂಲಕ 2450 ಕೋಟಿ ರೂ.ಗಳ ಇನ್‌ಪುಟ್ ಸಬ್ಸಿಡಿಯನ್ನು 35 ಲಕ್ಷ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಆಧಾರ್ ವ್ಯವಸ್ಥೆಯ ಮೂಲಕ ಜಮಾ ಮಾಡಿದ ಹಿರಿಮೆ ನಮ್ಮ ರಾಜ್ಯಕ್ಕಿದೆ.

- ಪಾರಂಪರಿಕ ಇಂಧನ ಮೂಲಗಳ ಜೊತೆಗೆ ನವೀಕರಿಸಬಹುದಾದ ಇಂಧನಗಳ ಮೂಲಕ ಕೂಡ ರಾಜ್ಯದಲ್ಲಿ ಹೆಚ್ಚಿನ ವಿದ್ಯುತ್ ಉತ್ಪಾದನೆಗೆ ಕರ್ನಾಟಕವು ಉತ್ತೇಜನ ನೀಡುತ್ತಿದೆ. ಇದಕ್ಕಾಗಿ 'ಸೌರಶಕ್ತಿ ನೀತಿ'ಯನ್ನು ರೂಪಿಸಲಾಗಿದ್ದು, 2300 ಮೆ.ವ್ಯಾ. ಸೌರವಿದ್ಯುತ್ ಉತ್ಪಾದನೆಯಾಗುತ್ತಿದೆ. ಏಷ್ಯಾ ಖಂಡದಲ್ಲಿಯೇ ಅತಿ ದೊಡ್ಡದಾದ ಸೌರಶಕ್ತಿ ಉತ್ಪಾದನಾ ಘಟಕ ಪಾವಗಡದಲ್ಲಿದ್ದು, ಇಲ್ಲಿ ಸುಮಾರು 600 ಮೆ.ವ್ಯಾ. ವಿದ್ಯುತ್ ಉತ್ಪಾದನೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ಇದರ ಸಾಮರ್ಥ್ಯ ಒಟ್ಟು 2000 ಮೆ.ವ್ಯಾ.ಗೆ ಏರಲಿದೆ.

- ಆಡಳಿತ ಸುಧಾರಣೆಯಲ್ಲಿ ಕರ್ನಾಟಕ ರಾಜ್ಯವು ರಾಷ್ಟ್ರಕ್ಕೇ ಮಾದರಿಯಾಗಿದೆ. ಆಧುನಿಕ ತಂತ್ರಜ್ಞಾನವನ್ನು ಆಡಳಿತ ವ್ಯವಸ್ಥೆಗೆ ಅಳವಡಿಸಿಕೊಳ್ಳುವಲ್ಲಿ ಕರ್ನಾಟಕವೇ ಮುಂಚೂಣಿ ರಾಜ್ಯವಾಗಿದ್ದು, ಕೆ–ಸ್ವಾನ್ 2.0 ಜಾಲದ ಮೂಲಕ ರಾಜ್ಯದ 10,000 ಸರ್ಕಾರಿ ಕಛೇರಿಗಳನ್ನು ಇ–ಆಡಳಿತ ವ್ಯಾಪ್ತಿಗೆ ತಂದಿದೆ. ಖಜಾನೆ–2ರ ಮೂಲಕ ಸರ್ಕಾರಿ ಹಣ ಪಾವತಿ ವ್ಯವಸ್ಥೆಯನ್ನು ಸರಳೀಕರಿಸಿ, ಪಾರದರ್ಶಕ ಮಾಡಿ ಹಣಕಾಸು ನಿರ್ವಹಣೆಯ ದಕ್ಷತೆಯನ್ನು ಹೆಚ್ಚಿಸಲಾಗಿದೆ.

- ಆರನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಒಪ್ಪಿ ಜಾರಿಗೊಳಿಸುವ ಮೂಲಕ ಸರ್ಕಾರಿ ಸಿಬ್ಬಂದಿಗೆ ನ್ಯಾಯಯುತ ವೇತನ ನೀಡಲಾಗುತ್ತಿದೆ.

- ನವ ಉದ್ಯಮಗಳ (ಸ್ಟಾರ್ಟ್ ಅಪ್ ಕಂಪನಿಗಳು) ವಿಷಯದಲ್ಲಿ ಬೆಂಗಳೂರು ಭಾರತದ ನವ ಉದ್ಯಮಗಳ ರಾಜಧಾನಿ ಎನ್ನುವ ಖ್ಯಾತಿ ಗಳಿಸಿದೆ. ಈವರೆಗೆ ಸುಮಾರು 150 ನವಉದ್ಯಮಗಳಿಗೆ ಸರ್ಕಾರದ ಧನ ಸಹಾಯ ದೊರೆತಿದ್ದು, ಇವು ಪ್ರವರ್ಧಮಾನಗೊಂಡಿವೆ.

- ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳ ಸುಸ್ಥಿರ ಅಭಿವೃದ್ಧಿ ಇಂದು ಅತ್ಯಂತ ಕಠಿಣ ಸವಾಲಾಗಿದೆ. ನಗರದ ಜಲ ಮೂಲಗಳ ಸಂರಕ್ಷಣೆ, ಹಸಿರು ಹೊದಿಕೆಯ ವಿಸ್ತರಣೆ, ನೀರು ಸರಬರಾಜು, ಮಳೆನೀರು ಕಾಲುವೆ, ಸಾರಿಗೆ, ವಸತಿ, ರಸ್ತೆ ಮತ್ತಿತರ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಆದ್ಯತೆಯ ಮೇರೆಗೆ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿದೆ.

- ಬೆಂಗಳೂರಿನ 'ನಮ್ಮ ಮೆಟ್ರೋ' ರೈಲು ಯೋಜನೆ ರಾಷ್ಟ್ರದಲ್ಲಿಯೇ ಅತ್ಯುತ್ತಮವಾಗಿದ್ದು, ಮೊದಲ ಹಂತದಲ್ಲಿ 42.3 ಕಿ.ಮೀ. ಲೋಕಾರ್ಪಣೆಗೊಂಡಿದೆ. ಬೆಂಗಳೂರು ನಗರದ ಸಂಚಾರ ವ್ಯವಸ್ಥೆಯಲ್ಲಿ ಕ್ರಾಂತಿಕಾರಕ ಬದಲಾವಣೆ ಮಾಡಿರುವ 'ನಮ್ಮ ಮೆಟ್ರೋ'ದಲ್ಲಿ ಲಕ್ಷಾಂತರ ಪ್ರಯಾಣಿಕರು ಪ್ರತಿ ದಿನ ಸಂತಸದಿಂದ ಸಂಚರಿಸುತ್ತಿದ್ದಾರೆ. ಮೆಟ್ರೋ ರೈಲಿನಿಂದಾಗಿ ಬೆಂಗಳೂರು ನಗರದ ವಾಹನ ದಟ್ಟಣೆ ಸಾಕಷ್ಟು ಸುಧಾರಿಸಿದೆ.

- ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 5000 ನಿವೇಶನ ಹಂಚಲಾಗಿದ್ದು, ಇನ್ನೂ 5000 ನಿವೇಶನ ಹಂಚಿಕೆ

ಪ್ರಗತಿಯಲ್ಲಿದೆ. ಇದುವರೆಗೆ 29 ಯೋಜನೆಗಳ ಮೂಲಕ 13,000 ಮನೆಗಳ ನಿರ್ಮಾಣ ಕೈಗೊಳ್ಳಲಾಗಿದೆ. 16 ಯೋಜನೆಗಳು ಪೂರ್ಣಗೊಂಡಿದ್ದು 6830 ಮನೆಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿದ್ದು, ನಗರ ವಾಸಿಗಳ ಸ್ವಂತ ಸೂರು ಹೊಂದುವ ಕನಸು ನನಸಾಗಿದೆ.

- ನಗರ ಪ್ರದೇಶದ ಬಡಜನರಿಗೆ ಕೈಗೆಟುಕುವ ದರದಲ್ಲಿ ಆಹಾರ ಒದಗಿಸಲು ಬೆಂಗಳೂರಿನಲ್ಲಿ ಪ್ರತಿ ವಾರ್ಡಿಗೊಂದರಂತೆ ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲು ಉದ್ದೇಶಿಸಿ 198 ವಾರ್ಡ್‌ಗಳ ಪೈಕಿ 163 ವಾರ್ಡ್‌ಗಳಲ್ಲಿ ಕ್ಯಾಂಟೀನ್ ಆರಂಭವಾಗಿದ್ದು, ಸ್ಥಳ ಲಭ್ಯವಿರದ 24 ವಾರ್ಡ್‌ಗಳಲ್ಲಿ ಮೊಬೈಲ್ ಕ್ಯಾಂಟೀನ್‌ಗಳ ಮೂಲಕ ಆಹಾರ ಒದಗಿಸಲಾಗುತ್ತಿದೆ.

- ಬೆಂಗಳೂರು ನಗರದಲ್ಲಿ ಇಂದಿರಾ ಕ್ಯಾಂಟೀನ್‌ನ ಜನಪ್ರಿಯತೆಯನ್ನು ಗಮನಿಸಿ, ರಾಜ್ಯದಾದ್ಯಂತ ಎಲ್ಲಾ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 247 ಇಂದಿರಾ ಕ್ಯಾಂಟೀನ್‌ಗಳನ್ನು 211 ಕೋಟಿ ರೂ. ವೆಚ್ಚದಲ್ಲಿ ತೆರೆಯಲು ಕ್ರಮ ವಹಿಸಲಾಗಿದೆ.

- ತೀವ್ರ ನಗರೀಕರಣದಿಂದ ಬೆಂಗಳೂರಿನ ಕೆರೆಗಳು ಕಲುಷಿತಗೊಳ್ಳುತ್ತಿವೆ. ಇವುಗಳನ್ನು ಶುದ್ಧೀಕರಿಸಿ ಸಂರಕ್ಷಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಬೆಂಗಳೂರು ಜಲ ಮಂಡಳಿಯು ವಿವಿಧ ಯೋಜನೆಗಳಡಿ ನಗರದಲ್ಲಿ ತ್ಯಾಜ್ಯ ನೀರಿನ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಮುಂದಾಗಿದೆ. ಜಪಾನ್ ಅಂತರರಾಷ್ಟ್ರೀಯ ಸಹಕಾರ ಸಂಸ್ಥೆ (ಜೈಕಾ)ಯ ಆರ್ಥಿಕ

ನೆರವಿನ ಕಾವೇರಿ ನೀರು ಸರಬರಾಜು ಯೋಜನೆ 4 ನೇ ಘಟ್ಟದ 2ನೇ ಹಂತ; ಮೆಗಾಸಿಟಿ ಯೋಜನೆಯಡಿ ಹಾಗೂ ಅಮೃತ್ ಯೋಜನೆಯಡಿ ಒಟ್ಟು 1572 ದಶಲಕ್ಷ ಲೀಟರ್ ಸಾಮರ್ಥ್ಯದ ತ್ಯಾಜ್ಯ ನೀರಿನ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ.

- ರಾಜ್ಯದ 27 ನಗರಗಳಲ್ಲಿ ಕೇಂದ್ರ ಪುರಸ್ಕೃತ ಅಮೃತ್ ಅಭಿಯಾನದಡಿಯಲ್ಲಿ 4952.82 ಕೋಟಿ ರೂ. ವೆಚ್ಚದಲ್ಲಿ ನೀರು ಸರಬರಾಜು, ಒಳಚರಂಡಿ, ಮಳೆನೀರು ಕಾಲುವೆ ಕಾಮಗಾರಿಗಳು, ನಗರ ಸಾರಿಗೆ ಸೌಲಭ್ಯ ಮತ್ತು ಉದ್ಯಾನ ವನಗಳನ್ನು ಅಭಿವೃದ್ಧಿ ಪಡಿಸಲಾಗಿದೆ.

- ರಾಜ್ಯದ 208 ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಬಿ.ಬಿ.ಎಂ.ಪಿ ಒಳಗೊಂಡಂತೆ) ತ್ಯಾಜ್ಯ ಸಂಸ್ಕರಣೆ ಮತ್ತು ವಿಲೇವಾರಿ ಜಾಗಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, 229 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮನೆ-ಮನೆಯಿಂದ ತ್ಯಾಜ್ಯ ಸಂಗ್ರಹಣೆಯನ್ನು ಪ್ರಾರಂಭಿಸಲಾಗಿದೆ. 98 ನಗರ ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ಸಂಸ್ಕರಣಾ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, ಒಟ್ಟು 3775 ಟನ್‌ಗಳಷ್ಟು ತ್ಯಾಜ್ಯವನ್ನು (ಬಿಬಿಎಂಪಿ ಒಳಗೊಂಡಂತೆ) ಪ್ರತಿದಿನ ಸಂಸ್ಕರಣೆ ಮಾಡಲಾಗುತ್ತಿದೆ.

- ನಗರದ ಸ್ವಚ್ಛತೆ ಕಾಪಾಡುವ ಪೌರ ಕಾರ್ಮಿಕರಿಗೆ ಅಗತ್ಯ ಸೌಲಭ್ಯ ಒದಗಿಸುವ ಕಾಳಜಿಯಿಂದ ಪೌರ ಕಾರ್ಮಿಕ ವಸತಿ ಗೃಹಭಾಗ್ಯ ಯೋಜನೆಯಡಿಯಲ್ಲಿ ಈವರೆಗೆ 3165 ಫಲಾನುಭವಿಗಳಿಗೆ ವಸತಿ ಗೃಹ ನಿರ್ಮಿಸಲು ಕ್ರಮವಹಿಸಲಾಗಿದೆ.

## 2018–19ನೇ ಸಾಲಿನ ಹೊಸ ಘೋಷಣೆಗಳು

### ಕೃಷಿ

16. ಹಿಂದಿನ ಸರ್ಕಾರಗಳು ರೈತರ ಬದುಕನ್ನು ಹಸನು ಮಾಡುವ ಉದ್ದೇಶದಿಂದ ಅನೇಕ ಪ್ರಯತ್ನಗಳನ್ನು ಮಾಡಿವೆ. ಇದನ್ನು ನಾವು ಮತ್ತಷ್ಟು ಚುರುಕುಗೊಳಿಸಿ ರೈತರ ಬಾಳಿನಲ್ಲಿ ಆರ್ಥಿಕ ಚೈತನ್ಯದ ಚಿಲುಮೆ ಚಿಮ್ಮಿಸಲು ಸರ್ವ ಪ್ರಯತ್ನಗಳನ್ನು ಮಾಡುತ್ತೇವೆ. ಈ ನಿಟ್ಟಿನಲ್ಲಿ ಸರ್ಕಾರವು ಕೃಷಿ ವಲಯದ ಚಟುವಟಿಕೆಗಳಲ್ಲಿ ರೈತರ ಸಹಭಾಗಿತ್ವವನ್ನು ಹೆಚ್ಚಿನ ಪ್ರಮಾಣದಲ್ಲಿ ತೊಡಗಿಸಿ ಕೊಳ್ಳಬೇಕೆಂಬುದು ನನ್ನ ಅನಿಸಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ನಾನು ಕರ್ನಾಟಕ ರಾಜ್ಯ ರೈತರ ಸಲಹಾ ಸಮಿತಿಯನ್ನು ರಚನೆ ಮಾಡಲು ಯೋಜಿಸಿರುತ್ತೇನೆ. ರಾಜ್ಯದ ಪ್ರತಿ ಜಿಲ್ಲೆಯಿಂದ ಇಬ್ಬರು ಪ್ರಗತಿಪರ ರೈತರನ್ನು ಒಳಗೊಂಡಿರುವ ಈ ಸಲಹಾ ಸಮಿತಿಯ ಜೊತೆ ನಾನು ಪ್ರತಿ ಎರಡು ತಿಂಗಳಿಗೊಮ್ಮೆ ಚರ್ಚೆ ನಡೆಸಿ ರೈತರ ಸಮಸ್ಯೆಗಳಿಗೆ ಪರಿಹಾರ ನೀಡಲು ಪ್ರಯತ್ನಿಸುತ್ತೇನೆ.

17. ನಾನು ಕಳೆದ ವರ್ಷ ಇಸ್ರೇಲಿಗೆ ಭೇಟಿ ನೀಡಿ ಅಲ್ಲಿನ ಕೃಷಿ ಪದ್ಧತಿಯನ್ನು ಸ್ವತ: ಅಧ್ಯಯನ ಮಾಡಿರುತ್ತೇನೆ. ಇಸ್ರೇಲ್ ಮಾದರಿ ನೀರಾವರಿ ವ್ಯವಸ್ಥೆ ನಮ್ಮ ರೈತರ ಬೆಳೆಗಳನ್ನು ಕಾಪಾಡಿ ಅವರ ಜೀವನ ಹಸನು ಮಾಡುವುದರಲ್ಲಿ ನನಗೆ ಸಂಶಯವಿಲ್ಲ. ಈ ನಂಬಿಕೆಯಿಂದ ನಾನು ಕೋಲಾರ, ಚಿತ್ರದುರ್ಗ, ಕೊಪ್ಪಳ ಮತ್ತು ಗದಗ ಜಿಲ್ಲೆಗಳಲ್ಲಿ ಮೊದಲ ಹಂತದಲ್ಲಿ ತಲಾ 5000 ಹೆಕ್ಟೇರ್ ಖುಷ್ಕಿ ಜಮೀನಿನಲ್ಲಿ ಇಸ್ರೇಲ್ ಮಾದರಿ ನೀರಾವರಿ ಸೌಲಭ್ಯ ಒದಗಿಸಲು 150 ಕೋಟಿ ರೂ.ಗಳನ್ನು ಒದಗಿಸಲಾಗುವುದು.

18. “ಬೇಸಾಯ ನೀ ಸಾಯಾ” ಎನ್ನುವ ಒಂದು ವ್ಯಂಗ್ಯ ನುಡಿಗಟ್ಟಿದೆ. ಏರುತ್ತಿರುವ ಕೃಷಿ ಪರಿಕರಗಳ ಬೆಲೆ ಹಾಗೂ ಅನಿಶ್ಚಿತ ಮಳೆ ಮತ್ತು ಕೃಷಿ ಉತ್ಪನ್ನಗಳ ಬೆಲೆ ಕುಸಿತ ರೈತರನ್ನು ಸಾಲಗಾರರನ್ನಾಗಿ ಮಾಡಿದೆ. ಈ ದುಸ್ಥಿತಿಯಿಂದ ರೈತರನ್ನು ಕಾಪಾಡುವುದು ಹೇಗೆ ಎಂದು ನಾನು ಗಂಭೀರವಾಗಿ ಚಿಂತಿಸುತ್ತಿದ್ದೇನೆ. ರೈತರಿಗೆ ಕೃಷಿ ಲಾಭದಾಯಕವಾಗಿರಬೇಕು ಹಾಗೂ ಜನರಿಗೆ ಆರೋಗ್ಯಕರ ಆಹಾರ ದೊರೆಯಬೇಕು ಎನ್ನುವುದು ನನ್ನ ಆಶಯ. ಈ ನಿಟ್ಟಿನಲ್ಲಿ ಆಂಧ್ರ ಪ್ರದೇಶ ಸರ್ಕಾರವು ಜಾರಿಗೊಳಿಸುತ್ತಿರುವ ಶೂನ್ಯ ಬಂಡವಾಳ ಸಹಜ ಕೃಷಿ (Zero Budget Natural Farming) ಪದ್ಧತಿ ರೈತರಿಗೆ ಉಪಯೋಗವಾಗುತ್ತದೆ ಎನ್ನುವುದು ನನ್ನ ನಂಬಿಕೆಯಾಗಿದೆ. ಶೂನ್ಯ ಬಂಡವಾಳ ಕೃಷಿ ಪದ್ಧತಿಯಲ್ಲಿ ರೈತರು ಮಾರುಕಟ್ಟೆಯಿಂದ ಕೊಂಡು ತಂದ ಕೃಷಿ ಪರಿಕರಗಳನ್ನು ಬಳಸುವುದಿಲ್ಲ. ನೆರೆಯ ಆಂಧ್ರ ಪ್ರದೇಶದಲ್ಲಿ ಈ ಕೃಷಿ ಪದ್ಧತಿ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ನಮ್ಮ ರಾಜ್ಯದಲ್ಲಿ ಸಹ ಕೃಷಿ ಮತ್ತು ತೋಟಗಾರಿಕೆ ಇಲಾಖೆಯಲ್ಲಿ ಶೂನ್ಯ ಬಂಡವಾಳ ಸಹಜ ಕೃಷಿ ಅಳವಡಿಸಿಕೊಳ್ಳಲು ಪ್ರಯತ್ನ ಮಾಡಬೇಕಾಗಿರುತ್ತದೆ. ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ UNEP ನವರು Sustainable India Finance Facility ಮುಖಾಂತರ ತಾಂತ್ರಿಕ ಸಹಾಯವನ್ನು ನೀಡಲು ಮುಂದೆ ಬಂದಿದ್ದಾರೆ. ಈ ಯೋಜನೆಗಾಗಿ ನಾನು 50 ಕೋಟಿ ರೂ. ನಿಗದಿಪಡಿಸಲಾಗುವುದು.

19. ರಾಜ್ಯದ ರೈತರ ಸಂಕಷ್ಟವನ್ನು ನಿವಾರಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳ ಸಚಿವರನ್ನೊಳಗೊಂಡ ಕೃಷಿ ಸಮನ್ವಯ ಉನ್ನತ ಸಮಿತಿಯನ್ನು

ರಚಿಸಲಾಗುವುದು. ಈ ಸಮಿತಿಯು ಮೂರು ತಿಂಗಳಿಗೊಮ್ಮೆ ಸಭೆ ಸೇರಿ ಇಲಾಖೆಗಳ ಕಾರ್ಯಕ್ರಮಗಳು ಸಮನ್ವಯತೆಯಿಂದ ನಡೆದಿರುವ ಬಗ್ಗೆ ಹಾಗೂ ಬೀಜದಿಂದ ಮಾರುಕಟ್ಟೆವರೆಗೆ ಉಂಟಾಗಿರುವ ಪರಿಣಾಮಗಳ ಮೌಲ್ಯಮಾಪನ ಮಾಡುತ್ತದೆ.

20. ರಾಜ್ಯದಲ್ಲಿ ಒಟ್ಟು 10 ಕೃಷಿ ಹವಾಮಾನ ವಲಯಗಳಿದ್ದು, ಐದು ಬಗೆಯ ಮಣ್ಣುಗಳು ವಿಭಿನ್ನವಾದ ಮಳೆ ಹಂಚಿಕೆ ಹಾಗೂ ಭೂಮೇಲ್ಮೈ ಲಕ್ಷಣಗಳಿಂದ ಕೂಡಿರುತ್ತದೆ. ಈ ವಲಯಗಳಲ್ಲಿ ಬೆಳೆ ಪದ್ಧತಿ ವೈವಿಧ್ಯತೆಯಿಂದ ಕೂಡಿದ್ದು, ವಿವಿಧ ಆಹಾರ ಮತ್ತು ತೋಟಗಾರಿಕೆ ಬೆಳೆಗಳ ಬೇಸಾಯಕ್ಕೆ ಉತ್ತಮ ವಾತಾವರಣವಿದೆ. ಅದಕ್ಕೆ ತಕ್ಕಂತೆ ಬೆಳೆ ಯೋಜನೆಯನ್ನು ರೂಪಿಸಿ, ಕೃಷಿ ಉತ್ಪಾದನೆ ಮತ್ತು ಮಾರುಕಟ್ಟೆಯಲ್ಲಿ ಬೆಲೆ ಸುಸ್ಥಿರತೆ ಕಾಪಾಡುವ ಮೂಲಕ ಕೃಷಿಯನ್ನು ಲಾಭದಾಯಕ ಉದ್ದಿಮೆಯನ್ನಾಗಿ ಮಾಡಲಾಗುವುದು.

21. ರೈತರನ್ನು ಸಂಘಟಿಸಿ ಅವರ ಉತ್ಪಾದಕತೆಯನ್ನು ಹೆಚ್ಚಿಸುವುದಲ್ಲದೇ ಅವರು ಬೆಳೆದಂತಹ ಕೃಷಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ರೈತ ಉತ್ಪಾದಕ ಸಂಸ್ಥೆಗಳನ್ನು ರಚಿಸುವ ಅವಶ್ಯಕತೆ ಇದೆ. ರೈತರ ಈ ಉತ್ಪಾದಕ ಸಂಸ್ಥೆಗಳ ಮೂಲಕ ಗುಣಮಟ್ಟದ ಪರಿಕರ, ಕೃಷಿ ಯಂತ್ರಧಾರೆ, ಕೊಯ್ಲಿನ ನಂತರದ ನಿರ್ವಹಣೆಗಾಗಿ ಮೂಲಭೂತ ಸೌಕರ್ಯಗಳನ್ನು ಸ್ಥಾಪಿಸಬಹುದಾಗಿದೆ. ಇದಲ್ಲದೆ, ಉತ್ಪಾದನಾ ವ್ಯವಹಾರಗಳ ಮೂಲಕ ರೈತರು ಉತ್ಪಾದಿಸುವ ಬೆಳೆಗಳಿಗೆ ಸೂಕ್ತ ಬೆಲೆ ದೊರಕಿಸಿ ರೈತರ ಆದಾಯ ಹೆಚ್ಚಿಸಬಹುದಾಗಿದೆ. ರೈತರ ಸಂಘಟನೆ ಹಾಗೂ ಸಾಮರ್ಥ್ಯ

ಬಲವರ್ಧನೆ ಮಾಡಲು ರಾಜ್ಯದ ರೈತ ಉತ್ಪಾದಕ ಸಂಸ್ಥೆ (FPO) ನೀತಿಯನ್ನು ಜಾರಿಗೆ ತರಲಾಗುವುದು.

22. ಖಾಸಗಿ ಕಂಪನಿಗಳ ಸಹಭಾಗಿತ್ವದಲ್ಲಿ ರೈತರ ಬೆಳೆಗಳ ಉತ್ಪಾದಕತೆ ಹೆಚ್ಚಿಸಲು, ಹೊಸ ತಾಂತ್ರಿಕತೆಗಳನ್ನು ಪರಿಚಯಿಸಲು / ಮೌಲ್ಯವರ್ಧನೆ ಮಾಡಲು ಕೃಷಿಯಲ್ಲಿ ಸರಬರಾಜು ಸರಪಳಿಯನ್ನು ಕಲ್ಪಿಸಲಾಗುವುದು. ಈ ಉದ್ದೇಶದಿಂದ ಕೇಂದ್ರ ಸರ್ಕಾರದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಮಾರ್ಗಸೂಚಿಯಂತೆ ಪ್ರತಿ ಜಿಲ್ಲೆಗಳಲ್ಲಿ ಸೂಕ್ತ ಯೋಜನೆಗಳಿಗೆ ಮಂಜೂರಾತಿ ನೀಡಲಾಗುವುದು. ಈ ಯೋಜನೆಯಲ್ಲಿ ಸಿರಿಧಾನ್ಯ, ಬೇಳೆಕಾಳು, ಎಣ್ಣೆಕಾಳು, ಮುಸುಕಿನ ಜೋಳ ಇತ್ಯಾದಿ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸಲು ವಿಶೇಷ ಒತ್ತು ನೀಡಲಾಗುವುದು.

23. ಇತ್ತೀಚಿನ ವರ್ಷಗಳಲ್ಲಿ ಕೃಷಿ ವಲಯದಲ್ಲಿ ಗಂಭೀರ ಸಮಸ್ಯೆಗಳು ತಲೆದೋರಿವೆ. ನೀರಾವರಿ ಪ್ರದೇಶವಾದ ಮಂಡ್ಯ ಜಿಲ್ಲೆಯಲ್ಲಿಯೇ ಬೆಳೆಯ ಇಳುವರಿ ಕುಂಠಿತವಾಗಿರುವುದು ಕಂಡು ಬಂದಿದೆ. ರೈತರು ಒಂದೇ ಮಾದರಿಯ ಬೆಳೆ ಬೆಳೆಯುತ್ತಿರುವುದು ಇದಕ್ಕೆ ಪ್ರಮುಖ ಕಾರಣ. ಹೀಗಾಗಿ ರೈತರು ಕೇವಲ ಬೇಳೆಕಾಳುಗಳು, ಆಹಾರ ಧಾನ್ಯಗಳು, ಎಣ್ಣೆಕಾಳುಗಳು, ಹತ್ತಿ ಬೆಳೆ ಬೇಸಾಯವನ್ನು ಕೈಬಿಟ್ಟು ಇತರೆ ರೀತಿಯ ಬೆಳೆಗಳನ್ನು ಬೆಳೆದಲ್ಲಿ ರೈತರಿಗೆ ಅನುಕೂಲವಾಗಲಿದೆ.

24. ಬೆಂಗಳೂರಿನ ಬೆಳ್ಳಂದೂರು ಕೆರೆ, ಬೈರಮಂಗಲ ಕೆರೆಗಳಲ್ಲಿ ನೀರು ಅತ್ಯಂತ ಕಲುಷಿತವಾಗಿದ್ದು, ಬೀದಿಗಳಲ್ಲಿ ನೊರೆ ಹಾರಾಡುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಬೆಳ್ಳಂದೂರು ಕೆರೆಯ

ಸುತ್ತಮುತ್ತಲಿನ ಮನೆಗಳಿಂದ ಸೋಪು ಮತ್ತು ಡಿಟರ್ಜೆಂಟ್ ಇರುವ ನೀರು ಹರಿದು ಬೆಳ್ಳಂದೂರು ಕೆರೆಗೆ ಬರುತ್ತಿರುವುದೇ ಇದಕ್ಕೆ ಕಾರಣವೆಂದು ತಿಳಿದುಬಂದಿದೆ. ಈ ಹಿಂದೆ ನಾವು ಮನೆ ಬಳಕೆಯ ಶುಭ್ರತೆಗಾಗಿ ಪ್ರಕೃತಿಯಲ್ಲಿ ದೊರೆಯುವ ಅಂಟುವಾಳ ಕಾಯಿಯನ್ನು ಬಳಸುತ್ತಿದ್ದೆವು. ಈಗ ಇದು ಮರೆಯಾಗಿ ಪರಿಸರಕ್ಕೆ ಹಾನಿಕಾರಿಯಾದ ಪೌಡರ್‌ಗಳು/ ಡಿಟರ್ಜೆಂಟ್‌ಗಳು ಬಳಕೆಗೆ ಬಂದಿವೆ. ಆದರೆ ಇದಕ್ಕೆ ವ್ಯತಿರಿಕ್ತವಾಗಿ ಮುಂದುವರಿದ ದೇಶಗಳಲ್ಲಿ ಪರಿಸರ ಸ್ನೇಹಿಯಾದ ಅಂಟುವಾಳದ ಡಿಷ್‌ವಾಷ್ ಸೋಪು, ವಾಶಿಂಗ್ ಮೆಷಿನ್ ಸೋಪುಗಳು ವ್ಯಾಪಕವಾಗಿ ಬಳಕೆಗೆ ಬಂದಿವೆ. ವಿದೇಶಗಳಲ್ಲಿ ಜನಪ್ರಿಯವಾಗುತ್ತಿರುವ ಪರಿಸರ ಸ್ನೇಹಿ ಡಿಟರ್ಜಂಟ್ ಉದ್ಯಮದ ಅವಕಾಶವನ್ನು ನಮ್ಮ ರೈತರಿಗೆ ಒದಗಿಸಿದರೆ ಅನುಕೂಲವಾಗಲಿದೆ. ಆದ್ದರಿಂದ ಅಂಟುವಾಳ ಕಾಯಿ ಆಧಾರಿತ ಸೋಪು ಮತ್ತು ಡಿಟರ್ಜೆಂಟ್‌ಗಳ ಉತ್ಪಾದನೆಗೆ ಅನುಕೂಲವಾಗುವಂತೆ ಅಂಟುವಾಳ ಕಾಯಿ ಮರಗಳ ವ್ಯಾಪಕ ಬೇಸಾಯಕ್ಕಾಗಿ ಒಂದು ಕಾರ್ಯಕ್ರಮವನ್ನು ರೂಪಿಸುವ ಉದ್ದೇಶಕ್ಕಾಗಿ 10 ಕೋಟಿ ರೂ.ಗಳನ್ನು ಮೀಸಲಿರಿಸಲಾಗುವುದು.

25. ಕರ್ನಾಟಕದಲ್ಲಿ ಶೇಂಗಾ ಮತ್ತು ಸೂರ್ಯಕಾಂತಿ ಅತ್ಯಂತ ಮುಖ್ಯ ಎಣ್ಣೆಕಾಳು ಬೆಳೆ. ಇತ್ತೀಚಿನ ದಿನಗಳಲ್ಲಿ ಗ್ರಾಹಕರು ಪರಿಶುದ್ಧ ಮತ್ತು ಆರೋಗ್ಯಪೂರ್ಣ ಸಾವಯವ ಆಧಾರಿತ ವಸ್ತುಗಳ ಬಗ್ಗೆ ಆಕರ್ಷಿತರಾಗಿದ್ದು, ಎಣ್ಣೆ ಕೂಡ ಈ ಪಟ್ಟಿಯಲ್ಲಿರುತ್ತದೆ. ಈ ಹಿನ್ನೆಲೆಯಲ್ಲಿ ಬೃಹತ್ ಎಣ್ಣೆ ತಯಾರಿಕಾ ಕಂಪನಿಗಳಿಗೆ ಪರ್ಯಾಯವಾಗಿ ರೈತರಿಗೆ ಸಣ್ಣ ಸಣ್ಣ ಯಂತ್ರಚಾಲಿತ ಎಣ್ಣೆ ಗಾಣಗಳನ್ನು ನೀಡಿ ಪರಿಶುದ್ಧ ಹಾಗೂ ಆರೋಗ್ಯಪೂರ್ಣ ಎಣ್ಣೆ ಉತ್ಪಾದನೆ ಮಾಡಲು

ಪ್ರೋತ್ಸಾಹ ನೀಡಲಾಗುವುದು. ಈ ಪರಿಶುದ್ಧ ಎಣ್ಣೆಯ ಮಾರಾಟಕ್ಕಾಗಿ ನಂದಿನಿ ಮತ್ತು ಇ–ಮಾರ್ಕೆಟಿಂಗ್ ಯೋಜನೆಗಳನ್ನು ಅನುಷ್ಠಾನಗೊಳಿಸಲು 5 ಕೋಟಿ ರೂ.ಗಳನ್ನು ಒದಗಿಸಲಾಗುವುದು.

26. ಬಂಪರ್ ಬೆಳೆಗಳು ಬಂದಾಗ ಕೃಷಿ ಉತ್ಪನ್ನಗಳ ಬೆಲೆ ಕುಸಿಯುವುದು ಸರ್ವೇ ಸಾಮಾನ್ಯ. ಈ ಬೆಲೆ ಕುಸಿತವನ್ನು ತಪ್ಪಿಸಿ ರೈತರಿಗೆ ನೆರವಾಗಲು ಕೆಲವು ಬೆಳೆಗಳನ್ನು ಸರ್ಕಾರವೇ ಮಾರುಕಟ್ಟೆಯಲ್ಲಿ ಖರೀದಿಸುವ ವ್ಯವಸ್ಥೆಯಿದೆ. ಆದರೆ ಈ ವ್ಯವಸ್ಥೆಯಲ್ಲಿ ಮೆಣಸಿನಕಾಯಿ, ಕಾಳುಮೆಣಸು, ಗೋಡಂಬಿ, ಜೀರಿಗೆ, ಕೊತ್ತಂಬರಿ, ಮೆಂತ್ಯೆ ಈ ರೀತಿಯ ಬೆಳೆಗಳನ್ನು ಖರೀದಿಸುತ್ತಿಲ್ಲ. ಧಾರವಾಡದ ಕೃಷಿ ವಿಶ್ವವಿದ್ಯಾನಿಲಯವು ಮೇಲೆ ಹೇಳಿದ ಬೆಳೆಗಳನ್ನು ದೀರ್ಘಕಾಲ ದಾಸ್ತಾನು ಮಾಡಲು ನಿರ್ವಾತ ತಂತ್ರಜ್ಞಾನವನ್ನು ಅಭಿವೃದ್ಧಿ ಪಡಿಸಿರುತ್ತದೆ. ಈ ತಂತ್ರಜ್ಞಾನವನ್ನು ರೈತರ ಹಂತದಲ್ಲಿ ಪ್ರಚುರಪಡಿಸಲು ಧಾರವಾಡ ಕೃಷಿ ವಿಶ್ವವಿದ್ಯಾನಿಲಯಕ್ಕೆ 3 ಕೋಟಿ ರೂ.ಗಳನ್ನು ಒದಗಿಸಲಾಗುವುದು.

27. ಕರ್ನಾಟಕದ ಮಾಹಿತಿ ತಂತ್ರಜ್ಞಾನ ಇಲಾಖೆಯ ನೆರವು ಪಡೆದು ಹಲವು ನವೋದ್ಯಮಗಳು ಹೊಸ ಆವಿಷ್ಕಾರಗಳನ್ನು ಮಾಡಿರುತ್ತವೆ. ಉದಾಹರಣೆಗೆ, ಡ್ರೋಣ್‌ಗಳನ್ನು ಉಪಯೋಗಿಸಿ ಬೆಳೆ ಪರಿಸ್ಥಿತಿಯನ್ನು ತಿಳಿದುಕೊಳ್ಳುವುದು; ನೀರಾವರಿಯಲ್ಲಿ ಸೆನ್ಸರ್ (sensor) ಉಪಯೋಗಿಸಿ ನೀರಿನ ಅವಶ್ಯಕತೆ ತಿಳಿಯುವುದು; ರೋಬೋಟ್‌ಗಳನ್ನು ಉಪಯೋಗಿಸಿ ಹೊಲಗಳಲ್ಲಿ ಹತ್ತಿಯನ್ನು ಹೆಕ್ಕುವುದು ಮುಂತಾದ ಆವಿಷ್ಕಾರಗಳನ್ನು ಮಾಡಿರುತ್ತಾರೆ. ಇವುಗಳನ್ನು ಇನ್ನೂ ಉತ್ತಮಪಡಿಸಿ ರೈತರ ಹೊಲಗಳಲ್ಲಿ

ಅಳವಡಿಸಬಹುದಾಗಿರುತ್ತದೆ. ಈ ಕಾರ್ಯಕ್ರಮಕ್ಕೆ 5 ಕೋಟಿ ರೂ.ಗಳನ್ನು ಮೀಸಲಿರಿಸಲಾಗುವುದು.

28. ಕರ್ನಾಟಕ ಅಂತರಗಂಗ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಸಂಸ್ಥೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಹಾಗೂ ಮೂಲಭೂತ ಸೌಕರ್ಯಗಳಿಗಾಗಿ 2 ಕೋಟಿ ರೂ.ಗಳನ್ನು ಒದಗಿಸಲಾಗುವುದು.

29. ಯಾವುದೇ ಬೇಸಾಯದಲ್ಲಿ ನಾವು ಬಿತ್ತುವ ಬೀಜವೇ ಬಹಳ ಪ್ರಮುಖ. ಉತ್ತಮ ಬೀಜ ಬಿತ್ತಿದರೆ, ಉತ್ತಮ ಬೆಳೆ ಬರುತ್ತದೆ. ಇದಕ್ಕಾಗಿ ನಾವು ಬಿತ್ತುವ ಬೀಜವನ್ನು ಮೂಲದಲ್ಲಿ ಪ್ರಮಾಣೀಕರಿಸುವ ಒಂದು ಅತ್ಯುತ್ತಮ ಗುಣಮಟ್ಟದ ಬೀಜ ದೃಢೀಕರಣ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದ್ದೇವೆ. ಇದಕ್ಕಾಗಿ ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ದೃಢೀಕರಣ ಸಂಸ್ಥೆಗೆ, 5 ಕೋಟಿ ರೂ.ಗಳ ಅನುದಾನ ಒದಗಿಸಲು ಉದ್ದೇಶಿಸಲಾಗಿದೆ.

## ತೋಟಗಾರಿಕೆ

30. ತೋಟಗಾರಿಕಾ ವಲಯದಲ್ಲಿ ಇಸ್ರೇಲ್ ಮಾದರಿ ನೀರಾವರಿ ಕ್ರಮಗಳನ್ನು ಅಳವಡಿಸಲು ಸಾಧ್ಯವಿರುತ್ತದೆ. ಈ ಹಿನ್ನೆಲೆಯಲ್ಲಿ ಕಾರವಾರ, ತುಮಕೂರು, ಯಾದಗಿರಿ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಯಲ್ಲಿ 5000 ಹೆಕ್ಟೇರ್ ಪ್ರದೇಶದಲ್ಲಿ ಇಸ್ರೇಲ್ ಮಾದರಿ ನೀರಾವರಿ ಒದಗಿಸಲು 150 ಕೋಟಿ ರೂ.ಗಳನ್ನು ನಿಗದಿಪಡಿಸಲಾಗುವುದು.

31. ರಾಜ್ಯದ ಪ್ರಮುಖ ನಗರಗಳನ್ನು ಸಂಪರ್ಕಿಸುವ ಹೆದ್ದಾರಿ/ರಸ್ತೆಗಳಲ್ಲಿ ಗುರುತಿಸಲಾಗುವ 10 ಸ್ಥಳಗಳಲ್ಲಿ ಎ.ಪಿ.ಎಂ.ಸಿ.

ವತಿಯಿಂದ ಅಥವಾ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಮಾರುಕಟ್ಟೆ ಶುಲ್ಕ ಆದಾಯ ಹಂಚಿಕೆ ಮಾದರಿಯಲ್ಲಿ (Revenue Sharing) ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಸುಸಜ್ಜಿತವಾದ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ರೈತರು ತಾವು ಬೆಳೆದ ಸಿರಿಧಾನ್ಯಗಳು, ಸಾವಯವ ಉತ್ಪನ್ನಗಳು ಅಧಿಸೂಚಿತ ಮಾರಾಟ ಉತ್ಪನ್ನಗಳು (ಪ್ರಮುಖವಾಗಿ ಹಣ್ಣು ಮತ್ತು ತರಕಾರಿಗಳು) ನೇರವಾಗಿ ಗ್ರಾಹಕರಿಗೆ / ಮಾರಾಟಗಾರರಿಗೆ ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗುವುದು.

32. ಟೊಮೆಟೋ ಮತ್ತು ಮಾವಿನ ಹಣ್ಣಿನಂತಹ ಬೇಗನೆ ಕೊಳೆಯುವ ತೋಟಗಾರಿಕೆ ಬೆಳೆಗಳ ಮತ್ತು ಅವುಗಳ ಉಪ ಉತ್ಪನ್ನಗಳ ಸಂಸ್ಕರಣೆ ಮತ್ತು ದಾಸ್ತಾನು ಮಾಡುವ ಬಗ್ಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

33. ರಾಜ್ಯದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿಯಲ್ಲಿ ಇಂಡೋ–ಇಸ್ರೇಲ್ ಸಹಭಾಗಿತ್ವದಲ್ಲಿ ಆರು ಉತ್ಕೃಷ್ಟ ಕೇಂದ್ರಗಳನ್ನು (Centres of Excellence) ಸ್ಥಾಪಿಸಲಾಗಿದೆ. ಇವುಗಳನ್ನು ಕೇಂದ್ರೀಕರಿಸಿ ಹೆಚ್ಚಿನ ಅಭಿವೃದ್ಧಿಗಾಗಿ ಕ್ರಮ ಕೈಗೊಳ್ಳಲಾಗುವುದು.

34. ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದ ಮಳೆ ಪ್ರಮಾಣ ತೀವ್ರತರವಾಗಿ ಕುಂಠಿತವಾಗಿದ್ದು, ತೆಂಗಿನ ಮರಗಳು ಒಣಗಿ ಹೋಗುತ್ತಿದ್ದು, ಅನುತ್ಪಾದಕವಾಗಿವೆ. ಅದರಲ್ಲೂ 2017ನೇ ಸಾಲಿನ ಬೇಸಿಗೆಯಲ್ಲಿ ಬರಗಾಲದಿಂದ 44 ಲಕ್ಷಕ್ಕೂ ಹೆಚ್ಚು ತೆಂಗಿನ ಮರಗಳು ಸಂಪೂರ್ಣವಾಗಿ ಒಣಗಿ ಅನುತ್ಪಾದಕವಾಗಿವೆ. ಈ ಕಾರಣದಿಂದಾಗಿ

ತೆಂಗು ಬೆಳೆಗಾರರ ಹಿತರಕ್ಷಣೆಗಾಗಿ ಒಂದು ಯೋಜನೆಯನ್ನು ರೂಪಿಸಲಾಗುತ್ತಿದೆ. ಈ ಉದ್ದೇಶಕ್ಕೆ 190 ಕೋಟಿ ರೂ.ಗಳನ್ನು ಒದಗಿಸಲಾಗುವುದು.

35. ಸಂಪೂರ್ಣವಾಗಿ ಒಣಗಿರುವ ತೆಂಗಿನ ತೋಟಗಳಲ್ಲಿ ಪರ್ಯಾಯ ಬೆಳೆಗಳಾದ ಮಾವು, ಗೋಡಂಬಿ, ಹುಣಸೆ, ಸೀತಾಫಲ, ನೇರಳೆ ಇತ್ಯಾದಿ ಬೆಳೆಗಳನ್ನು ಇಲಾಖೆಯ ವಿವಿಧ ಯೋಜನೆಯಡಿ ಬೆಳೆಯಲು ಪ್ರೋತ್ಸಾಹಿಸಲಾಗುವುದು.

## ರೇಷ್ಮೆ

36. ಮೈಸೂರು ಜಿಲ್ಲೆಯ ರೇಷ್ಮೆ ಬೆಳೆಗಾರರು ಮತ್ತು ರೀಲರುಗಳಿಗೆ ಅನುಕೂಲವಾಗುವಂತೆ ಜಿಲ್ಲೆಯಲ್ಲಿ ಉತ್ಪಾದಿಸುವ ರೇಷ್ಮೆ ಗೂಡಿಗೆ ಸ್ಥಳೀಯವಾಗಿ ಮಾರಾಟ ವ್ಯವಸ್ಥೆ ಕಲ್ಪಿಸಲು ಒಟ್ಟು 3 ಕೋಟಿ ರೂ. ವೆಚ್ಚದಲ್ಲಿ ಮೈಸೂರು ಜಿಲ್ಲೆಯಲ್ಲಿ ರೇಷ್ಮೆ ಗೂಡು ಮಾರುಕಟ್ಟೆ ಸ್ಥಾಪಿಸಲಾಗುವುದು. ಇದಕ್ಕಾಗಿ 2018–19ನೇ ಸಾಲಿಗೆ ಒಂದು ಕೋಟಿ ರೂ. ಒದಗಿಸಲಾಗುವುದು.

37. ಕರ್ನಾಟಕ ರೇಷ್ಮೆಯ ನಾಡು. ವಿಶ್ವಬ್ಯಾಂಕ್ ನೆರವಿನೊಂದಿಗೆ 70ರ ದಶಕದಲ್ಲಿ ರೇಷ್ಮೆ ಕೃಷಿಗೆ ಪೂರಕವಾಗಲೆಂದು ಬೆಂಗಳೂರು ಸಮೀಪದ ತಲಘಟ್ಟಪುರದಲ್ಲಿ ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸಲಾಗಿತ್ತು. ಈ ಸಂಸ್ಥೆಯ ಪೂರ್ಣ ಪ್ರಮಾಣದ ಅನುಕೂಲ ಪಡೆಯಲು ತಜ್ಞರಿಂದ ಸಂಪೂರ್ಣ ಅಧ್ಯಯನ ನಡೆಸಿ ವರದಿ ಪಡೆದು ಈ ಸಂಸ್ಥೆಯ ಪುನಶ್ಚೇತನ ಮಾಡುವ ಉದ್ದೇಶಕ್ಕಾಗಿ 5 ಕೋಟಿ ರೂ.ಗಳನ್ನು ನೀಡಲಾಗುವುದು.

38. ಸಾಂಪ್ರದಾಯಿಕ ರೇಷ್ಮೆ ವಸ್ತ್ರ ಉತ್ಪಾದನೆಯ ಜೊತೆಗೆ ರೇಷ್ಮೆ ಉಪ ಉತ್ಪನ್ನಗಳಾದ ಉಗುರು ಪಾಲಿಷ್, ಲಿಪ್‌ಸ್ಟಿಕ್ ಹಾಗೂ ರೇಷ್ಮೆ ಬಣ್ಣಗಳಿಗೆ ವಿಶ್ವವ್ಯಾಪಿ ಬೇಡಿಕೆಯಿದೆ. ಈ ಮಾರುಕಟ್ಟೆಯ ಅವಕಾಶವನ್ನು ಬಳಸಿಕೊಳ್ಳಲು ಅನುವಾಗುವಂತೆ ಕಾರ್ಯತಂತ್ರ ರೂಪಿಸಲು ಎರಡು ಕೋಟಿ ರೂ. ಗಳನ್ನು ನೀಡಲಾಗುವುದು.

39. ಚನ್ನಪಟ್ಟಣದಲ್ಲಿರುವ ಕರ್ನಾಟಕ ರೇಷ್ಮೆ ಕೈಗಾರಿಕಾ ನಿಗಮದ (ಕೆ.ಎಸ್.ಐ.ಸಿ.) ಘಟಕದ ಪುನಶ್ಚೇತನಕ್ಕಾಗಿ 5 ಕೋಟಿ ರೂ.ಗಳನ್ನು ಒದಗಿಸಲಾಗುವುದು.

**ಪಶು ಸಂಗೋಪನೆ**

40. ರಾಜ್ಯದ ವಿಭಾಗ ಮಟ್ಟದಲ್ಲಿ ಧಾರವಾಡ, ಕಲಬುರಗಿ ಮತ್ತು ಮೈಸೂರುಗಳಲ್ಲಿ ಮೂರು ಘನೀಕೃತ ವೀರ್ಯನಳಿಕೆಗಳ ವಿತರಣಾ ಕೇಂದ್ರಗಳನ್ನು 2.25 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

41. ರಾಜ್ಯದಲ್ಲಿ ಪ್ರಾಯೋಗಿಕವಾಗಿ ಈ ಸಾಲಿನಲ್ಲಿ ಜಲಕೃಷಿ (hydroponics) ವಿಧಾನದಿಂದ ಹಸಿರು ಮೇವು ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಈ ಯೋಜನೆಗೆ 3 ಕೋಟಿ ರೂ.ಗಳನ್ನು ಒದಗಿಸಲಾಗುವುದು.

42. ಹಾಸನ ಹಾಲು ಒಕ್ಕೂಟದಲ್ಲಿ ಹಾಲಿನ ಶೇಖರಣೆ ಹೆಚ್ಚಳವಾಗುತ್ತಿದ್ದು, ಲಾಭದಾಯಕ ರೀತಿಯಲ್ಲಿ ಸಂಸ್ಕರಣೆ ಮಾಡಲು 10 ಲಕ್ಷ ಲೀಟರ್‌ಗಳಿಂದ 15 ಲಕ್ಷ ಲೀಟರ್ ಸಾಮರ್ಥ್ಯದ ಮೆಗಾ ಡೈರಿ ಸ್ಥಾಪನೆ ಮತ್ತು ಮೂಲಭೂತ ಸೌಕರ್ಯಗಳಿಗಾಗಿ 50 ಕೋಟಿ ರೂ. ಅನುದಾನ ನೀಡಲಾಗುವುದು.

## ಮೀನುಗಾರಿಕೆ

43. ರಾಜ್ಯದ 20,000 ಹೆಕ್ಟೇರ್ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ 4 ಕೋಟಿ ರೂ. ವೆಚ್ಚದಲ್ಲಿ 4 ಕೋಟಿ ಮೀನು ಮರಿಗಳನ್ನು ಬಿತ್ತನೆ ಮಾಡಲಾಗುವುದು.

## ಸಹಕಾರ

44. ಸ್ವ ಸಹಾಯ ಗುಂಪುಗಳಲ್ಲಿ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಯನ್ನು ವೃದ್ಧಿಗೊಳಿಸಲು ಉದ್ದೇಶಿಸಲಾಗಿದೆ. ಸ್ವ-ಉದ್ಯೋಗವನ್ನು ಪ್ರೋತ್ಸಾಹಿಸಿ, ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪ್ರಸ್ತಕ ಸಾಲಿನಲ್ಲಿ **"ಕಾಯಕ"** ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಈ ಯೋಜನೆಯಡಿ ಸ್ವ-ಸಹಾಯ ಗುಂಪುಗಳು ಸಮೂಹ ಮಾದರಿಯಲ್ಲಿ ಅಥವಾ ವೈಯಕ್ತಿಕವಾಗಿ ಸ್ವಂತ ಉದ್ಯೋಗ ಕೈಗೊಳ್ಳಲು ಸಹಕಾರ ಸಂಸ್ಥೆಗಳ ಮೂಲಕ ಪ್ರತಿ ಗುಂಪಿಗೆ ಗರಿಷ್ಠ 10 ಲಕ್ಷ ರೂ. ಗಳವರೆಗೆ ಸಾಲವನ್ನು ಒದಗಿಸಲಾಗುವುದು. "ಕಾಯಕ" ಯೋಜನೆಯಡಿ 5 ಲಕ್ಷ ರೂ. ವರೆಗಿನ ಸಾಲಕ್ಕೆ ಶೂನ್ಯ ಬಡ್ಡಿ ಮತ್ತು 5 ಲಕ್ಷದಿಂದ 10 ಲಕ್ಷ ರೂ.ಗಳ ವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ದರ ನಿಗದಿಪಡಿಸಲಾಗುವುದು. ಈ ಯೋಜನೆಯಡಿ ಪ್ರಾರಂಭಿಕವಾಗಿ ಒಟ್ಟು 3000 ಸ್ವ-ಸಹಾಯ ಗುಂಪುಗಳಿಗೆ ಸಾಲ ಒದಗಿಸಲು 5 ಕೋಟಿ ರೂ. ಅನುದಾನ ನೀಡಲಾಗುವುದು.

45. ಬೀದಿ ವ್ಯಾಪಾರಿಗಳು / ಸಣ್ಣ ವ್ಯಾಪಾರಿಗಳು ಆರ್ಥಿಕ ವ್ಯವಸ್ಥೆಯಲ್ಲಿ ಅತ್ಯಂತ ಕೆಳಸ್ತರದಲ್ಲಿದ್ದು, ಇವರಿಗೆ ಸಾಂಸ್ಥಿಕ ಹಣಕಾಸು ವ್ಯವಸ್ಥೆ ಇಲ್ಲದೇ ಶೋಷಣೆಗೆ ಒಳಗಾಗುತ್ತಿದ್ದಾರೆ. ಇವರ ಕಷ್ಟಗಳಿಗೆ ಸರ್ಕಾರವು ಸ್ಪಂದಿಸಿದ್ದು, ರಾಜ್ಯದ 5 ನಗರ ಪ್ರದೇಶಗಳಲ್ಲಿ ಬೀದಿ ವ್ಯಾಪಾರಿಗಳು / ಸಣ್ಣ ವ್ಯಾಪಾರಿಗಳಿಗೆ ಕಿರು ಹಣಕಾಸು ಸಾಲ (Micro Finance) ಸೌಲಭ್ಯ ಒದಗಿಸಲು 'ಬಡವರ ಬಂಧು' ಸಂಚಾರಿ ಸೇವೆಯನ್ನು ಪ್ರಾರಂಭಿಸಲಾಗುವುದು.

## ಕೌಶಲ್ಯಾಭಿವೃದ್ಧಿ

46. ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರವು (ಸಿಡಾಕ್) 2017–18ನೇ ಸಾಲಿನಲ್ಲಿ ಯು.ಎನ್.ಡಿ.ಪಿ. ಸಹಯೋಗದೊಂದಿಗೆ 16 ಜಿಲ್ಲೆಗಳಲ್ಲಿ ಸಂಭಾವ್ಯ ಉದ್ದಿಮೆದಾರರಿಗೆ ತರಬೇತಿ ನೀಡಲು "ದಿಶಾ" ಯೋಜನೆಯನ್ನು ಜಾರಿಗೊಳಿಸಿದೆ. ಈ ಯೋಜನೆಯಡಿ 32,000 ಜನರಿಗೆ ತರಬೇತಿ ನೀಡಲಾಗಿದೆ. 2018–19ನೇ ಸಾಲಿನಲ್ಲಿ ಕರ್ನಾಟಕದ ಎಲ್ಲಾ ಜಿಲ್ಲೆಗಳಿಗೆ ಯೋಜನೆಯನ್ನು ವಿಸ್ತರಿಸಿ 2 ಕೋಟಿ ರೂ. ಅನುದಾನದಲ್ಲಿ 1 ಲಕ್ಷ ಜನರಿಗೆ ದಿಶಾ ಯೋಜನೆಯಡಿ ತರಬೇತಿ ನೀಡಲಾಗುವುದು.

47. ವಿದೇಶಗಳಲ್ಲಿ ಉದ್ಯೋಗ ಮತ್ತು ಜೀವನೋಪಾಯವನ್ನು ಹೊಂದಲು ಹಾಗೂ ಕರ್ನಾಟಕವನ್ನು ವಿದೇಶಿ ಉದ್ಯೋಗಕ್ಕೆ ಆದ್ಯತಾ ರಾಜ್ಯವನ್ನಾಗಿ ರೂಪಿಸಲು ರಾಜ್ಯದ ಯುವ ಜನತೆಗೆ ಅಗತ್ಯ ತರಬೇತಿ ಮತ್ತು ಪ್ರೋತ್ಸಾಹವನ್ನು ನೀಡಲಾಗುವುದು. ಇದಕ್ಕಾಗಿ ಕರ್ನಾಟಕ ಅಂತರಾಷ್ಟ್ರೀಯ ವಲಸಿಗ ಕೇಂದ್ರಕ್ಕೆ 2 ಕೋಟಿ ರೂ. ಒದಗಿಸಲಾಗುವುದು.

## ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ

48. ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಕಟ್ಟಡಗಳ ದುರಸ್ತಿಗಾಗಿ ವಿಶೇಷ ಪ್ಯಾಕೇಜ್ ಮೂಲಕ 150 ಕೋಟಿ ರೂ.ಗಳನ್ನು ಒದಗಿಸಲಾಗುವುದು.

49. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ರಾಜ್ಯ ತರಬೇತಿ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ, ತರಬೇತಿ ಕೇಂದ್ರಗಳನ್ನು ಬಲವರ್ಧಿಸುವ ಉದ್ದೇಶಕ್ಕಾಗಿ 5 ಕೋಟಿ ರೂ. ಅನುದಾನ ಒದಗಿಸಲಾಗುವುದು.

50. ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮ ತರಗತಿಗಳ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಆರಂಭಿಸಲಾಗುವುದು. ಇದರಿಂದ, ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಆಕರ್ಷಿಸಬಹುದಾಗಿದೆ. ಆರಂಭಿಕವಾಗಿ 1000 ಶಾಲೆಗಳಲ್ಲಿ ಇಂತಹ ಪ್ರಯೋಗ ನಡೆಸಲಾಗುವುದು.

51. ರಾಜ್ಯದ 48 ಸಾವಿರ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಮತ್ತು ಮಕ್ಕಳ ಹಾಜರಾತಿಯ ನಿಗಾವಹಿಸಲು ಬಯೋಮೆಟ್ರಿಕ್ ಸಾಧನಗಳನ್ನು ಅಳವಡಿಸಲಾಗುವುದು. ಈ ಯೋಜನೆಯನ್ನು ಮುಂದಿನ 3 ವರ್ಷಗಳಲ್ಲಿ ಜಾರಿಗೊಳಿಸಲಾಗುವುದು. ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನಲ್ಲಿ 5 ಕೋಟಿ ರೂ. ಒದಗಿಸಲಾಗುವುದು.

52. ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಆಯ್ದ 4100 ಸರ್ಕಾರಿ ಪ್ರಾಥಮಿಕ ಶಾಲೆಗಳ ಆವರಣಕ್ಕೆ ಸ್ಥಳಾಂತರಿಸಿ 'ಬಾಲಸ್ನೇಹಿ ಕೇಂದ್ರ'

ಗಳನ್ನಾಗಿ ಬಲವರ್ಧಿಸಲಾಗುವುದು. ಹಂತಹಂತವಾಗಿ ಕಾರ್ಯಸಾಧ್ಯತೆಯನುಸಾರ ಬೇರೆ ಸರ್ಕಾರಿ ಶಾಲೆಗಳಲ್ಲಿ ಸಹ LKG/UKG ತರಗತಿಗಳನ್ನು ಪ್ರಾರಂಭಿಸಲಾಗುವುದು. ಇದರಿಂದ ಸರ್ಕಾರಿ ಶಾಲೆಗಳಲ್ಲಿನ ದಾಖಲಾತಿ ಪ್ರಮಾಣವು ಹೆಚ್ಚಾಗುವುದರೊಂದಿಗೆ ಮಕ್ಕಳ ಕಲಿಕೆಯ ಗುಣಮಟ್ಟವನ್ನು ವೃದ್ಧಿಸಬಹುದಾಗಿದೆ.

53. ಒಂದು ಕಿಲೋ ಮೀಟರ್ ವ್ಯಾಪ್ತಿಯಲ್ಲಿರುವ ಮತ್ತು ದಾಖಲಾತಿ ಕಡಿಮೆ ಇರುವ ಸರ್ಕಾರಿ ಮತ್ತು ಅನುದಾನಿತ ಶಾಲೆಗಳನ್ನು ಹತ್ತಿರದ ಶಾಲೆಯೊಂದಿಗೆ ವಿಲೀನಗೊಳಿಸಲಾಗುವುದು. ಒಂದು ಕಿ.ಮೀ ವ್ಯಾಪ್ತಿಯಲ್ಲಿ ಕಡಿಮೆ ದಾಖಲಾತಿ ಹೊಂದಿರುವ 28847 ಸರ್ಕಾರಿ ಮತ್ತು ಅನುದಾನಿತ ಶಾಲೆಗಳನ್ನು ಗುರುತಿಸಲಾಗಿದ್ದು, ಈ ಶಾಲೆಗಳನ್ನು ಹತ್ತಿರದ 8530 ಸರ್ಕಾರಿ ಶಾಲೆಗಳೊಂದಿಗೆ ವಿಲೀನಗೊಳಿಸಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲಾಗುವುದು.

**ಉನ್ನತ ಶಿಕ್ಷಣ**

54. ರಾಜ್ಯದ ಸರ್ಕಾರಿ ಪದವಿ ಹಾಗೂ ಸ್ನಾತಕೋತ್ತರ ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಅಭಿವೃದ್ಧಿ ಹಾಗೂ ಇತರೆ ದುರಸ್ತಿ ಕಾರ್ಯಗಳಿಗೆ ವಿಶೇಷ ಪ್ಯಾಕೇಜ್ ಮುಖಾಂತರ 250 ಕೋಟಿ ರೂ.ಗಳನ್ನು ಒದಗಿಸಲಾಗುವುದು.

55. ನಮ್ಮ ರಾಜ್ಯದಲ್ಲಿರುವ ವಿಶ್ವವಿದ್ಯಾನಿಲಯಗಳು ವೃತ್ತಿ ಪೂರಕ ಶಿಕ್ಷಣಗಳನ್ನು ನೀಡುತ್ತಿಲ್ಲವಾಗಿ ಪದವೀಧರರನ್ನು ನೇರವಾಗಿ ಉದ್ಯೋಗಕ್ಕೆ ತೆಗೆದುಕೊಳ್ಳಲು ತೊಂದರೆಯಾಗಿದೆ ಎಂದು ಪರಿಣಿತರು ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸಾಂಪ್ರದಾಯಿಕ ಶಿಕ್ಷಣ ವ್ಯವಸ್ಥೆಯಿಂದ

ಹೊರತಾದ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ಜಾರಿಗೆ ತರಲು ಉದ್ದೇಶಿಸಿ ಕೌಶಲ್ಯವೇ ಬುನಾದಿಯಾದ ಹೊಸ ವಿಶ್ವವಿದ್ಯಾನಿಲಯಗಳನ್ನು ಕೆಳಕಂಡ ಕ್ಷೇತ್ರಗಳಲ್ಲಿ ತೆರೆಯಲು ತೀರ್ಮಾನ ಮಾಡಿದ್ದೇವೆ.

56. ನಮ್ಮ ರಾಜ್ಯದಲ್ಲಿ ಪ್ರಾಥಮಿಕ ಶಾಲಾ ಹಂತದಲ್ಲೇ ಕ್ರೀಡೆಯನ್ನು ಪಠ್ಯಕ್ರಮದಲ್ಲಿ ಸೇರಿಸಲಾಗಿದೆ. ಆದರೆ, ಉನ್ನತ ಶಿಕ್ಷಣದಲ್ಲಿ ಸಾಂಪ್ರದಾಯಿಕ ವ್ಯವಸ್ಥೆಯ ಪದವಿ ಇದ್ದರೆ ಒಳ್ಳೆಯದು ಎಂಬ ಭಾವನೆಯಿಂದ ಬಹುತೇಕ ವಿದ್ಯಾರ್ಥಿಗಳು ಕ್ರೀಡೆ ಮತ್ತು ಅಂಗಸಾಧನೆಯನ್ನು ಒಂದು ವಿಷಯವಾಗಿ ಕಲಿಯಲು ಮುಂದೆ ಬರುತ್ತಿಲ್ಲ. ಈ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲೆಯಲ್ಲಿ ಕ್ರೀಡೆ ಮತ್ತು ಅಂಗಸಾಧನೆಗೆ ಸಂಬಂಧಿಸಿದ ವಿಶ್ವವಿದ್ಯಾನಿಲಯವನ್ನು ಖಾಸಗಿ ಸಹಭಾಗಿತ್ವದಲ್ಲಿ ತೆರೆಯಲು ಯೋಜಿಸಿದೆ. ಇದಕ್ಕೆ ಪೂರಕವಾಗಿ ತುಮಕೂರು ಜಿಲ್ಲೆಯಲ್ಲಿ ಕ್ರೀಡೆ ಮತ್ತು ಅಂಗಸಾಧನೆಗಳಿಗೆ ಬೇಕಾದಂತಹ ಉಪಕರಣ ಮತ್ತು ಇತರೆ ವಸ್ತುಗಳನ್ನು ತಯಾರು ಮಾಡುವ ಕ್ಲಸ್ಟರ್‌ನ್ನು ಸಹ ಸೇರಿಸಲಾಗಿದೆ. ಇದರ ಪ್ರಾಥಮಿಕ ಕಾರ್ಯಗಳಿಗಾಗಿ 3 ಕೋಟಿ ರೂ. ಹಣವನ್ನು ಮೀಸಲಿರಿಸಲಾಗುವುದು.

57. ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಲಕ್ಷಾಂತರ ಭದ್ರತಾ ಸಿಬ್ಬಂದಿಗಳು ದುಡಿಯುತ್ತಿದ್ದಾರೆ. ಆದರೆ, ಸರ್ಕಾರದಲ್ಲಿ ನೇಮಕವಾಗುವ ಹಾಗೂ ಖಾಸಗಿ ಕ್ಷೇತ್ರದಲ್ಲಿ ಸೇವೆ ಒದಗಿಸುವ ಭದ್ರತಾ ಸಿಬ್ಬಂದಿಗಳಿಗೆ ಅಗತ್ಯವಾದ ತರಬೇತಿಯನ್ನು ನೀಡುತ್ತಿರುವುದಿಲ್ಲ. ಇದೀಗ ಭದ್ರತೆಯ ಪರಿಕಲ್ಪನೆಯಲ್ಲಿ ಅನೇಕ ಬದಲಾವಣೆಗಳಾಗಿದ್ದು, ಸೈಬರ್ ಕ್ರೈಂ ಇದರಲ್ಲಿ ಪ್ರಮುಖವಾಗಿದೆ. ಈ ಹಿನ್ನೆಲೆಯಲ್ಲಿ ತಾಯಿನಾಡು ಭದ್ರತಾ ವಿಶ್ವವಿದ್ಯಾನಿಲಯವನ್ನು

(Homeland Security University) ಖಾಸಗಿ ಸಹಭಾಗಿತ್ವದೊಂದಿಗೆ ಶಿವಮೊಗ್ಗ ಜಿಲ್ಲೆಯಲ್ಲಿ ಆರಂಭಿಸಲು ಉದ್ದೇಶಿಸಿದ್ದು, ಇದಕ್ಕಾಗಿ 3 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

58. ನಮ್ಮ ಈಗಿನ ಪ್ರವಾಸೋದ್ಯಮವು ಸಂಘಟಿತವಾಗಿ ಒಂದು ಉದ್ಯಮದ ರೂಪದಲ್ಲಿರುವುದಿಲ್ಲ. ಅಲ್ಲದೆ, ಅಗತ್ಯವಿರುವಷ್ಟು ಉದ್ಯೋಗವನ್ನು ನಿರೀಕ್ಷಿತ ಮಟ್ಟದಲ್ಲಿ ಕಲ್ಪಿಸಿರುವುದಿಲ್ಲ. ಪ್ರವಾಸೋದ್ಯಮ ಎಂದರೆ ಉತ್ತಮವಾಗಿ ತರಬೇತಿ ಹೊಂದಿದ, ವಿವಿಧ ಭಾಷೆಯಲ್ಲಿ ಪ್ರವಾಸಿ ಸ್ಥಳದ ಬಗ್ಗೆ ವಿವರವಾದ ಮಾಹಿತಿ ನೀಡುವ ಉತ್ತಮ ಮಾರ್ಗದರ್ಶಿಗಳು ಇರಬೇಕು. ಪ್ರವಾಸಿ ವಾಹನಗಳನ್ನು ನಿರ್ವಹಿಸುವ ವ್ಯವಸ್ಥೆ ಇರಬೇಕು. ಪ್ರವಾಸಿಗರೊಂದಿಗೆ ಸೌಜನ್ಯದಿಂದ ವರ್ತಿಸುವ ಸಿಬ್ಬಂದಿಗಳಿರಬೇಕು. ಪ್ರವಾಸೋದ್ಯಮವನ್ನು ಲಾಭದಾಯಕವಾಗಿ ನಡೆಸುವ ವ್ಯವಹಾರಿಕ ಜ್ಞಾನ ಇರಬೇಕು. ಸರ್ಕಾರವು ಪ್ರವಾಸಿ ತಾಣಗಳಲ್ಲಿ ರಸ್ತೆ, ಶೌಚಾಲಯ ಇತ್ಯಾದಿ ಮೂಲಸೌಕರ್ಯಗಳನ್ನು ಒದಗಿಸಬಹುದು. ಆದರೆ, ಪ್ರವಾಸಿ ಸ್ಥಳ ಮತ್ತು ಪ್ರವಾಸಿಗರ ಮಧ್ಯೆ ಇರುವ ಮುಖ್ಯ ಕೊಂಡಿಯಾದ ಭಾವನಾತ್ಮಕವಾಗಿ ಬೆಸೆಯುವ ಮಾನವ ಸಂಪನ್ಮೂಲವನ್ನು ಸೃಜಿಸಲಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಮಾನವ ಸಂಪನ್ಮೂಲವನ್ನು ನಿರಂತರವಾಗಿ ತರಬೇತಿಯ ಮುಖಾಂತರ ಉತ್ತೇಜಿಸಲು ಖಾಸಗಿ ಸಹಭಾಗಿತ್ವದಲ್ಲಿ ಒಂದು ಪ್ರವಾಸೋದ್ಯಮ ವಿಶ್ವವಿದ್ಯಾನಿಲಯವನ್ನು ಐತಿಹಾಸಿಕ ಸ್ಥಳವಾದ ಹಂಪಿಯಲ್ಲಿ ಆರಂಭಿಸಲು ಉದ್ದೇಶಿಸಿ 3 ಕೋಟಿ ರೂ. ಒದಗಿಸಲಾಗುವುದು.

59. ಪದವಿ ಪೂರ್ವ ಮತ್ತು ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮತ್ತು

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ NEET/JEE ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ, ಉನ್ನತ ವ್ಯಾಸಂಗಕ್ಕೆ ಮತ್ತು ಉದ್ಯೋಗ ಪಡೆಯಲು ಅಗತ್ಯವಾದ ತರಬೇತಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಮಾಹಿತಿ ಸಂವಹನ ತಂತ್ರಜ್ಞಾನ (ಐ.ಸಿ.ಟಿ) ಬಳಸಿ ನೀಡಲಾಗುವುದು.

60. ಉತ್ತಮ ಶಿಕ್ಷಣ ಪಡೆದು ಜೀವನದಲ್ಲಿ ಮುಂದೆ ಬರುವ ಎಲ್ಲರೂ ಶಿಕ್ಷಣ ಕಲಿಸಿದ ಗುರು ಮತ್ತು ಸ್ಥಳದ ಬಗ್ಗೆ ಚಿರಋಣಿಗಳಾಗಿರುತ್ತಾರೆ. ಆದರೆ, ನಂತರ ತಮ್ಮ ಜೀವನ ಜಂಜಾಟದಲ್ಲಿ ತಾವು ಕಲಿತ ಶಾಲೆಗಳ ಬಗ್ಗೆ ತಮ್ಮ ಬಾಂಧವ್ಯವನ್ನು ಮರೆತು ಹೋಗುತ್ತಾರೆ. ಈ ಬಾಂಧವ್ಯವನ್ನು ಶಾಲಾ ಮತ್ತು ಕಾಲೇಜುಗಳ ಉನ್ನತೀಕರಣಕ್ಕೆ ಉಪಯೋಗಪಡಿಸಿಕೊಳ್ಳಲು ನಾವು ಪ್ರಯತ್ನ ಪಡಲಿದ್ದೇವೆ. ಕರ್ನಾಟಕದಲ್ಲಿನ ಎಲ್ಲಾ ಶಾಲೆ ಮತ್ತು ಕಾಲೇಜುಗಳ ಒಂದು ಪೋರ್ಟಲ್ ತೆಗೆದು, ಅದರಲ್ಲಿ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಶಾಲೆಯ ಅವಶ್ಯಕತೆಗಳನ್ನು ವಿವರಿಸಲಾಗಿರುತ್ತದೆ. ಈ ಪೋರ್ಟಲ್ ಮುಖಾಂತರ ಯಾವುದಾದರೂ ಶಾಲೆಗೆ ಹಳೆಯ ವಿದ್ಯಾರ್ಥಿ ಹಣ ಕೊಡಲು ಇಷ್ಟಪಟ್ಟಲ್ಲಿ ಹಣಪಾವತಿ ದ್ವಾರವನ್ನು ತೆರೆಯಲಾಗುವುದು. ಇದೇ ಪೋರ್ಟಲ್‌ನಲ್ಲಿ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿ ಕಾರ್ಯಕ್ರಮದಲ್ಲಿ ಯಾರಾದರೂ ಸಹಾಯ ಮಾಡಲು ಇಷ್ಟಪಟ್ಟಲ್ಲಿ ಅವರಿಗೆ ಅನುಕೂಲವಾಗುವಂತೆ ಸಿದ್ಧಪಡಿಸಿದ ಪ್ರಾಜೆಕ್ಟ್ ವಿವರಗಳನ್ನು ಇಡಲಾಗುವುದು. ಈ ಕಾರ್ಯಗಳಿಗೆ 3 ಕೋಟಿ ರೂ. ಹಣವನ್ನು ಆರಂಭಿಕವಾಗಿ ಒದಗಿಸಲಾಗುವುದು.

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ

61. ಪ್ರಸ್ತುತ ಜಾರಿಯಲ್ಲಿರುವ ಕರೆ ಸಂಖ್ಯೆ: 108 ಮತ್ತು 104 ರಲ್ಲಿ ಲಭ್ಯವಿರುವ ತುರ್ತು ಪ್ರತಿಕ್ರಿಯೆ ವ್ಯವಸ್ಥೆ (Emergency Response Services) ಮತ್ತು ವೈದ್ಯಕೀಯ ಸಹಾಯವಾಣಿ ಸೇವೆಗಳ ವ್ಯಾಪ್ತಿಯನ್ನು ವಿಸ್ತರಿಸಲಾಗುವುದು. ಇವುಗಳ ಲಭ್ಯತೆ ಮತ್ತು ಗುಣಮಟ್ಟವನ್ನು ಹೆಚ್ಚಿಸಲು ಅನುಕೂಲವಾಗುವಂತೆ ಸೇವೆಗಳನ್ನು ಪುನರ್ರಚಿಸಲಾಗುವುದು. ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆಗಳು ಮತ್ತು ಮಾನಸಿಕ ಆರೋಗ್ಯ ರಕ್ಷಣಾ ಸೇವೆಗಳನ್ನು ಸಹ ಇದರಲ್ಲಿ ಸಂಯೋಜಿಸಲಾಗುವುದು.

62. ಔಷಧ ನಿಯಂತ್ರಣ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶದಿಂದ 40 ಕೋಟಿ ರೂ.ಗಳ ವೆಚ್ಚದಲ್ಲಿ ಒಂದು ಯೋಜನೆಯನ್ನು ಮುಂದಿನ ಎರಡು ವರ್ಷಗಳಲ್ಲಿ ಜಾರಿಗೊಳಿಸಲಾಗುವುದು. ಈ ವರ್ಷದಲ್ಲಿ ಈ ಉದ್ದೇಶಕ್ಕೆ 10 ಕೋಟಿ ರೂ. ಅನುದಾನ ಒದಗಿಸಲಾಗುವುದು.

63. ಹೃದಯ, ಮೂತ್ರಪಿಂಡ, ಯಕೃತ್ತು ಇತ್ಯಾದಿ ಅಂಗಾಂಗ ಕಸಿಗಾಗಿ ಬಡ ರೋಗಿಗಳಿಗೆ ಪ್ರತ್ಯೇಕ ಯೋಜನೆಗೆ 30 ಕೋಟಿ ರೂ. ಅನುದಾನ ನೀಡಲಾಗುವುದು.

64. ವಿಜಯಪುರ ಜಿಲ್ಲಾ ಆಸ್ಪತ್ರೆಯಲ್ಲಿ ಕಾರ್ಡಿಯಾಲಜಿ (Cardiology) ಮತ್ತು ಆಂಕಾಲಜಿಗೆ (Oncology) ಸಂಬಂಧಿಸಿದಂತೆ ಆರೋಗ್ಯ ಸೇವೆಗಳನ್ನು ಒದಗಿಸುವ ಘಟಕಗಳು ಮತ್ತು ಟ್ರಾಮಾ ಘಟಕಗಳನ್ನು ಸ್ಥಾಪಿಸಲಾಗುವುದು.

## ವೈದ್ಯಕೀಯ ಶಿಕ್ಷಣ

65. ರಾಮನಗರ ಜಿಲ್ಲೆಯ ಕನಕಪುರದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲಾಗುವುದು.

66. ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಸ್ಪತ್ರೆಯನ್ನು 800 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು 30 ಕೋಟಿ ರೂ.ಗಳನ್ನು ಮೀಸಲಿರಿಸಲಾಗುವುದು.

67. ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಮೊದಲ ಹಂತವಾಗಿ bone marrow transplant ಚಿಕಿತ್ಸೆಗಾಗಿ ಪ್ರತ್ಯೇಕ ಘಟಕ ಸ್ಥಾಪಿಸಲು 12 ಕೋಟಿ ರೂ. ಅನುದಾನ ನೀಡಲಾಗುವುದು.

68. ರಾಮನಗರವು ಶೀಘ್ರಗತಿಯಲ್ಲಿ ಬೆಳವಣಿಗೆ ಆಗುತ್ತಿರುವುದರಿಂದ ಇಲ್ಲಿ 300 ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಲು 40 ಕೋಟಿ ರೂ.ಗಳನ್ನು ಒದಗಿಸಲಾಗುವುದು.

69. ಬೆಳಗಾವಿ, ಕಲಬುರಗಿ ಮತ್ತು ಮೈಸೂರು ನಗರಗಳಲ್ಲಿ ಹೃದ್ರೋಗ ಮತ್ತು ಕ್ಯಾನ್ಸರ್ ಹಾಗೂ ಇತರೆ ರೋಗಗಳಿಗೆ ಸಂಬಂಧಿಸಿದ ತೃತೀಯ ಹಂತದ ಆರೋಗ್ಯ ಸೇವೆಗಳನ್ನು ಒದಗಿಸಲು ಹೊಸ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆಯಲಾಗುವುದು. ಗದಗ, ಕೊಪ್ಪಳ, ಚಾಮರಾಜನಗರ ಮತ್ತು ಹಾಸನ ನಗರಗಳ ವೈದ್ಯಕೀಯ ಕಾಲೇಜುಗಳಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು. ಇದಕ್ಕಾಗಿ 200 ಕೋಟಿ ರೂ.ಗಳನ್ನು ಒದಗಿಸಲಾಗುವುದು.

## ಪ್ರವಾಸೋದ್ಯಮ

70. ರಾಜ್ಯದಲ್ಲಿ ಪ್ರವಾಸೋದ್ಯಮದ ಮೂಲಕ ಉದ್ಯೋಗ ಸೃಷ್ಟಿ ಮಾಡಲು ವಿಫುಲವಾದ ಅವಕಾಶಗಳಿವೆ. ಈ ನಿಟ್ಟಿನಲ್ಲಿ ಪ್ರವಾಸೋದ್ಯಮದ ಸಮಗ್ರ ಅಭಿವೃದ್ಧಿಗಾಗಿ ನಮ್ಮ ಪ್ರವಾಸೋದ್ಯಮ ವ್ಯವಸ್ಥೆಯಲ್ಲಿ ಕೆಲವು ಅಂಶಗಳ ಬಗ್ಗೆ ಹೆಚ್ಚಿನ ಗಮನ ನೀಡಬೇಕಾಗಿದೆ.

- ಅನೇಕ ಪ್ರವಾಸಿ ಸ್ಥಳಗಳಲ್ಲಿ ಪ್ರವಾಸಿಗರಿಗೆ ಸ್ಥಳದ ವಿವರಣೆಯನ್ನು ನೀಡುವ ಮಾರ್ಗದರ್ಶಿಗಳು (guides) ಇರುವುದಿಲ್ಲ. ಕೆಲವೆಡೆ ಇರುವ ಪ್ರವಾಸಿ ಮಾರ್ಗದರ್ಶಿಗಳು ಕನ್ನಡ ಹೊರತುಪಡಿಸಿ ಇತರೆ ಭಾರತೀಯ ಭಾಷೆಗಳಲ್ಲಿ ಪ್ರವಾಸಿ ಸ್ಥಳಗಳ ಬಗ್ಗೆ ವಿವರಿಸುವ ಸಾಮರ್ಥ್ಯ ಹೊಂದಿರುವುದಿಲ್ಲ. ವಿದೇಶಿ ಪ್ರವಾಸಿಗಳಿಗೆ ಅವರ ಭಾಷೆಯಲ್ಲಿ ವಿವರಗಳನ್ನು ತಿಳಿಸಲು ಆಯಾ ಭಾಷೆಗಳಲ್ಲಿ ಪಾಂಡಿತ್ಯವಿರುವ ಮಾರ್ಗದರ್ಶಿಗಳು ಇರುವುದಿಲ್ಲ.
- ಅನೇಕ ಪ್ರವಾಸಿ ಸ್ಥಳಗಳಲ್ಲಿ ಸಂಜೆಯಾದ ನಂತರ ನೋಡುವಂತಹ ಹಾಗೂ ನಮ್ಮ ಸಂಸ್ಕೃತಿಯನ್ನು ಬಿಂಬಿಸುವಂತಹ ಯಾವುದೇ ಸಾಂಸ್ಕೃತಿಕ ಪ್ರದರ್ಶನಗಳು ಸಹ ಇರುವುದಿಲ್ಲ.
- ರಾಜ್ಯದ ಹಲವಾರು ಪ್ರವಾಸಿ ತಾಣಗಳಲ್ಲಿ ಮತ್ತಷ್ಟು ಉತ್ತಮ ಗುಣಮಟ್ಟದ ಹೊಟೇಲ್ ಒದಗಿಸುವ ಅವಕಾಶವಿದೆ.

71. ಈ ಹಿನ್ನೆಲೆಯಲ್ಲಿ ನಮ್ಮ ಸರ್ಕಾರವು ಈ ವರ್ಷ ಬೇಲೂರು, ಹಂಪಿ ಮತ್ತು ವಿಜಯಪುರದಲ್ಲಿ ವಿವಿಧ ಭಾಷೆಗಳಲ್ಲಿ ಪ್ರವಾಸಿ

ಮಾರ್ಗದರ್ಶಿಗಳಾಗಿ ಕೆಲಸ ಮಾಡಲು ಮುಂದೆ ಬರುವ ಯುವಕ-ಯುವತಿಯರಿಗೆ ತರಬೇತಿ ನೀಡಲು ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಕ್ರಮ ಕೈಗೊಳ್ಳಲಿದೆ. ಎರಡು ವರ್ಷದ ಡಿಪ್ಲೋಮಾ ತರಬೇತಿ ನೀಡಲು ಈ ಮೂರು ಸ್ಥಳಗಳಲ್ಲಿ ಮುಂದೆ ಬರುವ ಖಾಸಗಿ ತರಬೇತಿ ಸಂಸ್ಥೆಗಳಿಗೆ ತಲಾ 60 ಲಕ್ಷ ರೂ.ಗಳನ್ನು ಷೇರು ಬಂಡವಾಳದ ರೂಪದಲ್ಲಿ ನೀಡಲಾಗುವುದು. ಅಲ್ಲದೆ, ಪ್ರವಾಸೋದ್ಯಮಕ್ಕೆ ಸಂಬಂಧಪಟ್ಟಂತಹ ವಿಷಯಗಳಲ್ಲಿ ಎರಡು ವರ್ಷಗಳ ಡಿಪ್ಲೋಮಾವನ್ನು ಆರಂಭಿಸಲು ಉದ್ದೇಶಿಸಿರುತ್ತೇನೆ ಹಾಗೂ ಈ ಮೇಲೆ ಹೇಳಿದ ಮೂರು ಪ್ರವಾಸಿ ಕೇಂದ್ರಗಳಲ್ಲಿ ಪರಿಸರ ಹಾಗೂ ಆಹಾರದ ಶುದ್ಧತೆಯನ್ನು ಕಾಪಾಡುವ ಸಲುವಾಗಿ ಅಗತ್ಯ ಸರ್ಕಾರಿ ಸ್ಥಳೀಯ ಸಂಸ್ಥೆಗಳಿಗೆ ನೆರವಾಗಲು 20 ಕೋಟಿ ರೂ.ಗಳನ್ನು ನಿಗದಿಪಡಿಸಲಾಗುವುದು.

72. 500 ಕೊಠಡಿಗಳ ಸೌಲಭ್ಯವಿರುವ 3 ಸ್ಟಾರ್ ಹೋಟೆಲ್‌ಗಳನ್ನು ತೆರೆಯಲು ಮುಂದೆ ಬರುವ ಖಾಸಗಿ ಕಂಪನಿಗಳಿಗೆ 3 ಕೋಟಿ ರೂ.ಗಳ ಷೇರು ಬಂಡವಾಳವನ್ನು ಕೊಡಲಾಗುವುದು. ಸರ್ವಿಸ್ ಅಪಾರ್ಟ್‌ಮೆಂಟ್‌ಗಳನ್ನು ಕಟ್ಟಲು ಮುಂದೆ ಬಂದಲ್ಲಿ, ಆ ಸಂಸ್ಥೆಗಳಿಗೆ ಶೇ.30ರಷ್ಟು ಷೇರು ಬಂಡವಾಳವನ್ನು Term Sheet ಆಧಾರದ ಮೇಲೆ ನೀಡಲಾಗುವುದು. ಇದಲ್ಲದೆ, ಅಮ್ಯೂಸ್‌ಮೆಂಟ್ ಪಾರ್ಕ್, ಜಲಕ್ರೀಡೆ ರೀತಿಯ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಖಾಸಗಿ ಕಂಪನಿಗಳಲ್ಲಿ ಶೇ.30ರಷ್ಟು ಷೇರು ಬಂಡವಾಳ ಹೂಡಲಾಗುವುದು. ಪ್ರವಾಸಿ ಉದ್ಯಮಗಳಲ್ಲಿ ಹೂಡಿಕೆ ಮಾಡಲು ಈ ವರ್ಷ 80 ಕೋಟಿ ರೂ. ನಿಗದಿಪಡಿಸಿರುತ್ತೇನೆ. ಸರ್ಕಾರದ ಎಲ್ಲಾ ಹೂಡಿಕೆಗಳನ್ನು 4 ವರ್ಷದ

ನಂತರ ಹಿಂತೆಗೆದುಕೊಂಡು ಮತ್ತೆ ಸರ್ಕಾರಕ್ಕೆ ಜಮಾ ಮಾಡಲಾಗುವುದು.

73. ಈ ಪ್ರದೇಶದಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಹೂಡಿಕೆ ಮಾಡಲು ಮುಂದೆ ಬರುವ ಉದ್ದಿಮೆದಾರರು ಸ್ಥಳೀಯ ಕಾನೂನುಗಳು ಹಾಗೂ ಎಲ್ಲಾ ಪ್ರಾಧಿಕಾರಿಗಳ ಅನುಮೋದನೆ ಪಡೆಯುವುದು ಅವಶ್ಯಕ. ಕರ್ನಾಟಕ ಸರ್ಕಾರವು ಈಗಾಗಲೇ KITVEN ಫಂಡ್ ಮ್ಯಾನೇಜರ್‌ಗಳನ್ನು ಹೂಡಿಕೆಗೆ ನೆರವು ನೀಡಲು ನೇಮಕಾತಿ ಮಾಡಿರುವುದರಿಂದ ಅವುಗಳನ್ನು ಹೂಡಿಕೆದಾರರು ಉಪಯೋಗಿಸಿಕೊಳ್ಳಬಹುದು. ಹಾಗೇಯೇ, ಕೆ.ಎಸ್.ಟಿ.ಡಿ.ಸಿ ಸಂಸ್ಥೆಗೆ ಹೋಟೆಲ್ ಸೌಲಭ್ಯ ಕಲ್ಪಿಸಲು 80 ಕೋಟಿ ರೂ. ನೀಡಲು ಆಯೋಜಿಸಲಾಗಿದೆ.

74. ಪ್ರಮುಖ ಹೆದ್ದಾರಿಗಳಲ್ಲಿ ಪ್ರವಾಸಿಗರು ವಿಶ್ರಾಂತಿ ಪಡೆದು ಊಟ ತಿಂಡಿ ಮಾಡಿಕೊಂಡು ಪ್ರಯಾಣ ಮುಂದುವರಿಸಲು ಅನುಕೂಲವಾಗುವ ರೀತಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಮೂರು ಮಾದರಿ ರಸ್ತೆ ಬದಿ ಸೌಲಭ್ಯಗಳನ್ನು (Model way side Facilities) ನಿರ್ಮಿಸಲು ಉದ್ದೇಶಿಸಲಾಗಿದೆ.

75. ಪ್ರವಾಸೋದ್ಯಮ ವಲಯದ ಆತಿಥ್ಯ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳನ್ನು ಸೃಜಿಸಲು ಕೌಶಲ್ಯಾಭಿವೃದ್ಧಿ, ಪ್ರವಾಸಿ ಮಾರ್ಗದರ್ಶಿ ತರಬೇತಿ ಕಾರ್ಯಕ್ರಮ ಹಾಗೂ ಪ್ರವಾಸಿ ಟ್ಯಾಕ್ಸಿ ಚಾಲಕರಿಗೆ ರಿಫ್ರೆಷರ್ ಕೋರ್ಸ್‌ಗಳ ಮೂಲಕ ತರಬೇತಿ ನೀಡಲು ಉದ್ದೇಶಿಸಲಾಗಿದೆ.

76. ಚಾಮರಾಜನಗರ ಜಿಲ್ಲೆಯಲ್ಲಿರುವ ಭರಚುಕ್ಕಿ ಜಲಪಾತ ಮತ್ತು ಮಂಡ್ಯ ಜಿಲ್ಲೆಯಲ್ಲಿರುವ ಗಗನಚುಕ್ಕಿ ಜಲಪಾತಗಳು ಪ್ರವಾಸಿಗರ ಆಕರ್ಷಣೀಯ ತಾಣಗಳಾಗಿರುತ್ತವೆ. ಈ ತಾಣಗಳಿಗೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಭೇಟಿ ನೀಡುವರು. ಆದ್ದರಿಂದ, ಪ್ರವಾಸಿಗರಿಗೆ ಅನುಕೂಲವಾಗುವ ಹೆಚ್ಚುವರಿ ಪ್ರವಾಸಿ ಸೌಲಭ್ಯಗಳನ್ನು ಗಗನಚುಕ್ಕಿ ಮತ್ತು ಭರಚುಕ್ಕಿ ಪ್ರದೇಶಗಳಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ.

77. ರಾಮನಗರ ಜಿಲ್ಲೆಯಲ್ಲಿ ಪ್ರವಾಸಿ ಚಟುವಟಿಕೆಗಳನ್ನು ಮತ್ತಷ್ಟು ಸಧೃಡಗೊಳಿಸಲು ರಾಮನಗರದ ಬಳಿ ಆರ್ಟ್ಸ್ ಅಂಡ್ ಕ್ರಾಫ್ಟ್ ವಿಲೇಜ್ ಅನ್ನು ಮತ್ತು ಕಣ್ವ ಜಲಾಶಯದ ಪ್ರದೇಶದಲ್ಲಿ ಚಿಲ್ಡ್ರನ್ಸ್ ವರ್ಲ್ಡ್ ಯೋಜನೆಯನ್ನು ಖಾಸಗಿ ಸಹಭಾಗಿತ್ವದೊಂದಿಗೆ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

## ಸಮಾಜ ಕಲ್ಯಾಣ

78. ಗಂಗಾ ಕಲ್ಯಾಣ ಯೋಜನೆಯಡಿ ನಿಗದಿತ ಅವಧಿಯೊಳಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಫಲಾನುಭವಿಗಳಿಗೆ 3 ವರ್ಷಗಳಲ್ಲಿ ಹಂತ-ಹಂತವಾಗಿ ನೀರಾವರಿ ಸೌಲಭ್ಯವನ್ನು ಒದಗಿಸಲಾಗುವುದು ಮತ್ತು ಹಾಲಿ ಜಾರಿಯಲ್ಲಿರುವ ಸಹಾಯಧನ ಮಿತಿ 2.50 ಲಕ್ಷ ರೂ.ಗಳಿಂದ 3 ಲಕ್ಷ ರೂ.ಗಳಿಗೆ ಹಾಗೂ 3.50 ಲಕ್ಷ ರೂ.ಗಳಿಂದ 4 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

79. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ನಿರುದ್ಯೋಗಿ 5000 ಯುವಕ / ಯುವತಿಯರಿಗೆ "ಸಾಮಾಜಿಕ ಉದ್ಯಮಶೀಲತಾ ಯೋಜನೆ"ಯಡಿ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಡ್ ಸಂಸ್ಥೆಗಳ

ಸಹಯೋಗದೊಂದಿಗೆ ಆದಾಯ ತರುವ ಆರ್ಥಿಕ ಚಟುವಟಿಕೆಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಪ್ರಾರಂಭಿಸಲು ಸರ್ಕಾರದಿಂದ ಗರಿಷ್ಠ 10 ಲಕ್ಷ ರೂ. ಆರ್ಥಿಕ ನೆರವು ನೀಡಲಾಗುವುದು.

80. ವಿವಿಧ ಜಿಲ್ಲೆಗಳಲ್ಲಿ ಪ್ರಮುಖ ಕೈಗಾರಿಕಾ, ತಾಂತ್ರಿಕ ಮತ್ತು ಸೇವಾ ಕ್ಷೇತ್ರದ ಸಂಸ್ಥೆಗಳ ಸಹಯೋಗದೊಂದಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ 5,000 ನಿರುದ್ಯೋಗಿಗಳಿಗೆ 15 ಕೋಟಿ ರೂ. ವೆಚ್ಚದಲ್ಲಿ ಉದ್ಯೋಗಾಧಾರಿತ ತಾಂತ್ರಿಕ ತರಬೇತಿಗಳನ್ನು ನೀಡಲಾಗುವುದು.

81. ಹೈದ್ರಾಬಾದ್ ಕರ್ನಾಟಕ ಕಲಂ 371 (ಜೆ) ವ್ಯಾಪ್ತಿಗೆ ಬರುವ ಕಲಬುರಗಿ ನಗರದಲ್ಲಿ ಖಾಸಗಿ ತರಬೇತಿ ಕೇಂದ್ರಗಳ ಸಹಯೋಗದೊಂದಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಪದವೀಧರರಿಗೆ ಯು.ಪಿ.ಎಸ್.ಸಿ / ಕೆ.ಪಿ.ಎಸ್.ಸಿ / ಬ್ಯಾಂಕಿಂಗ್ ಇತ್ಯಾದಿ ಸಂಸ್ಥೆಗಳು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ನೆರವು ನೀಡಲಾಗುವುದು.

82. "ಪ್ರಗತಿ ಕಾಲೋನಿ" ಯೋಜನೆ ರೂಪಿಸಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿ/ ತಾಂಡಗಳನ್ನು ಹಂತ ಹಂತವಾಗಿ ಸಮಗ್ರ ಅಭಿವೃದ್ಧಿ ಪಡಿಸಲು ತಲಾ ಕನಿಷ್ಠ 1 ಕೋಟಿ ರೂ.ಗಳಿಂದ ಗರಿಷ್ಠ 5 ಕೋಟಿ ರೂ. ಗಳವರೆಗೆ ಅನುದಾನ ಒದಗಿಸಲಾಗುವುದು.

83. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಪ್ರತಿಭಾನ್ವಿತ ಕ್ರೀಡಾಪಟುಗಳು ಆಯಾ ಕ್ರೀಡೆಗಳಲ್ಲಿ ಹೆಚ್ಚಿನ ಪ್ರಾವೀಣ್ಯತೆ ಪಡೆಯಲು

ಪ್ರತಿಷ್ಠಿತ ಕ್ರೀಡಾ ತರಬೇತಿ ಸಂಸ್ಥೆಗಳಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ತರಬೇತಿ ನೀಡಲಾಗುವುದು.

84. ಆಯ್ದ ಜಿಲ್ಲೆಗಳಲ್ಲಿ ಪರಿಶಿಷ್ಟ ಪಂಗಡಗಳ ಮಾದರಿ/ ನವಗ್ರಾಮಗಳ ನಿರ್ಮಾಣ ಕೈಗೊಳ್ಳಲಾಗುವುದು. ಅದರಲ್ಲಿ ಆದಿವಾಸಿ ಸಮುದಾಯಗಳಿಗೆ ಆದ್ಯತೆ ನೀಡಲಾಗುವುದು.

85. ಪರಿಶಿಷ್ಟ ಪಂಗಡದ ಯುವಕರು ಹಾಗೂ ನಿರುದ್ಯೋಗಿಗಳಿಗೆ ನೆರವಾಗಲು ಪ್ರವಾಸೋದ್ಯಮ, ಸಾರಿಗೆ, ಕೆಎಂಎಫ್ ಇತ್ಯಾದಿ ಇಲಾಖೆಗಳ ಸಹಯೋಗದೊಂದಿಗೆ ಟ್ಯಾಕ್ಸಿ, ಹೋಂ ಸ್ಟೇ ಇತರೆ ಸ್ವಯಂ ಉದ್ಯೋಗ ಕೈಗೊಳ್ಳಲು ತರಬೇತಿ ನೀಡಲಾಗುವುದು.

86. ಭೂ ಒಡೆತನ ಯೋಜನೆಯಡಿ ಜಮೀನನ್ನು ಪಡೆದ ರೈತ ಮಹಿಳೆಯರ ಜಮೀನುಗಳಿಗೆ ಕೊಳವೆ ಬಾವಿ ಮತ್ತು ಕೃಷಿ ಯಂತ್ರೋಪಕರಣಗಳನ್ನು ವಿತರಿಸಲು ಉದ್ದೇಶಿಸಲಾಗಿದೆ.

87. ರಾಜ್ಯದಲ್ಲಿ ಹಲವು ದಶಕಗಳಿಂದ ಹಿಂದುಳಿದ ಹಾಗೂ ಶೋಷಿತಗೊಂಡ ಹಲವಾರು ಜಾತಿ / ಸಮುದಾಯಗಳಿದ್ದು, ಈ ವರ್ಗಗಳು ಸರ್ಕಾರದ ಹಲವಾರು ಯೋಜನೆಗಳಡಿಯಲ್ಲಿ ದೊರೆಯುವ ಯಾವುದೇ ಸೌಲಭ್ಯ / ಸವಲತ್ತುಗಳಿಂದ ವಂಚಿತವಾಗಿರುತ್ತವೆ. ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಅತಿ ಸೂಕ್ಷ್ಮ ಸಮುದಾಯಗಳಾಗಿರುತ್ತವೆ. ಆದುದರಿಂದ, ಶಿಳ್ಳೇಕ್ಯಾತ, ದೊಂಬಿದಾಸ, ಗೌಳಿ, ಹೆಳವ, ಶಿಕಾರಿಗಳು, ಹೂವಾಡಿಗ, ಕಂಚುಗಾರ, ಕಮ್ಮಾರ, ದರ್ಜಿ, ದೇವಾಡಿಗ, ಬುಡಬುಡಿಕೆ, ತಿಗಳ, ಬಡಿಗೆ, ಹಟ್ಗಾರ, ಕರೆಒಕ್ಕಲಿಗ ಇತ್ಯಾದಿ ಸಮಾಜಗಳ

ಅಭಿವೃದ್ಧಿಗಾಗಿ 10 ಕೋಟಿ ರೂ.ಗಳ ಅನುದಾನವನ್ನು ಮೀಸಲಿಡಲಾಗಿದೆ.

88. ಜಾತ್ಯಾತೀತವಾಗಿ ದಾಸೋಹ, ಶಿಕ್ಷಣ, ಸಾಮಾಜಿಕ ಸೇವೆ ಮತ್ತು ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಶ್ರೀ ಭಗೀರಥ ಪೀಠ, ಮಧುರೆ (ಉಪ್ಪಾರ); ಶ್ರೀ ಮಾದಾರ ಚೆನ್ನಯ್ಯ ಗುರುಪೀಠ, ಚಿತ್ರದುರ್ಗ; ಶ್ರೀ ಸಿದ್ದರಾಮೇಶ್ವರ ಬೋವಿ ಗುರುಪೀಠ, ಚಿತ್ರದುರ್ಗ; ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಕಾಗಿನೆಲೆ; ಶ್ರೀ ವಾಲ್ಮೀಕಿ ಗುರುಪೀಠ, ರಾಜನಹಳ್ಳಿ, ಹರಿಹರ ತಾಲ್ಲೂಕು; ಶ್ರೀ ಯಾದವ ಮಹಾಸಂಸ್ಥಾನ ಮಠ, ಚಿತ್ರದುರ್ಗ; ಶ್ರೀ ನಾರಾಯಣಗುರು ಮಹಾಸಂಸ್ಥಾನ ನಿಟ್ಟೂರು, ತೀರ್ಥಹಳ್ಳಿ ತಾಲ್ಲೂಕು; ಶ್ರೀ ಮಡಿವಾಳ ಗುರುಪೀಠ ಚಿತ್ರದುರ್ಗ; ಶ್ರೀ ದೇವಾಂಗ ಗುರುಪೀಠ ಹಂಪಿ; ಹಡಪದ ಅಪ್ಪಣ್ಣ ಗುರುಪೀಠ, ತಂಗಡಗಿ ಮುದ್ದೇಬಿಹಾಳ; ಶ್ರೀ ಕಂಬಾರ ಗುರುಪೀಠ, ತೇಲಸಂಗ, ಅಥಣಿ; ಶ್ರೀ ಛಲವಾದಿ ಜಗದ್ಗುರು ಪೀಠ, ಚನ್ನೇನಹಳ್ಳಿ, ಶಿರಾ ತಾಲ್ಲೂಕು; ಶ್ರೀ ವಿಜಯಸಂಗಮ (ಪ.ಜಾ/ಪ.ಪಂ) ವಿದ್ಯಾಪೀಠ, ಹೊಸದುರ್ಗ; ಶ್ರೀ ಶಿವಶಕ್ತಿ ಪೀಠ, ಇರಕಲ್ ಮಸ್ಕಿ; ಹೇಮವೇಮ ಸದ್ಬೋಧನ ಪೀಠ, ಎರೆಹೊಸಳ್ಳಿ, ಹರಿಹರ; ಕರ್ನಾಟಕ ರಾಜ್ಯ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು; ಗಂಗಾಮತಸ್ಥ/ಮೊಗವೀರ/ಬೆಸ್ತ/ಕೋಳಿ ಸಮಾಜ ಹಾಗೂ ಸವಿತಾ ಸಮಾಜ, ಬೆಂಗಳೂರು ಮೊದಲಾದ ಧಾರ್ಮಿಕ ಪೀಠಗಳು ಹಾಗೂ ಸಂಘ ಸಂಸ್ಥೆಗಳಿಗೆ ಒಟ್ಟು 25 ಕೋಟಿ ರೂ. ಅನುದಾನ ಒದಗಿಸಲಾಗುವುದು.

## ಆಹಾರ ಮತ್ತು ನಾಗರಿಕ ಸರಬರಾಜು

89. ಪ್ರಸ್ತುತ ಅನ್ನಭಾಗ್ಯ ಯೋಜನೆಯು ರಾಜ್ಯವನ್ನು "ಹಸಿವು ಮುಕ್ತ ರಾಜ್ಯವನ್ನಾಗಿ" ಮಾಡುವ ಆಶಯವನ್ನು ಹೊಂದಿದೆ. ನಾವು ಇದನ್ನು ಪೌಷ್ಠಿಕ ಹಾಗೂ ಆರೋಗ್ಯಕರ ಆಹಾರ ಧಾನ್ಯ ವಿತರಣೆಯ ಮೌಲ್ಯಯುತ ಕಾರ್ಯಕ್ರಮವನ್ನಾಗಿ ರೂಪಿಸಲಿದ್ದೇವೆ. ಈ ಹಿನ್ನೆಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ಪ್ರತಿ ಫಲಾನುಭವಿಗೆ 5 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಮತ್ತು ರಿಯಾಯಿತಿ ದರದಲ್ಲಿ ಅರ್ಧ ಕೆ.ಜಿ. ತೊಗರಿಬೇಳೆ ಹಾಗೂ ಪ್ರತಿ ಬಿಪಿಎಲ್ ಪಡಿತರ ಚೀಟಿಗೆ 1 ಕೆ.ಜಿ. ಪಾಮ್ ಎಣ್ಣೆ, 1 ಕೆ.ಜಿ. ಅಯೋಡಿನ್ ಮತ್ತು ಕಬ್ಬಿಣಾಂಶಯುಕ್ತ ಉಪ್ಪನ್ನು ಹಾಗೂ 1 ಕೆ.ಜಿ. ಸಕ್ಕರೆಯನ್ನು ನೀಡಲು ಉದ್ದೇಶಿಸಿದ್ದೇವೆ.

90. ವರ್ಷಕ್ಕೊಂದು ಬಾರಿ ಆಹಾರ ಸುರಕ್ಷಾ ಮಾಹೆಯನ್ನು ಏರ್ಪಡಿಸಲು ಉದ್ದೇಶಿಸಿದ್ದು, ಅದರಲ್ಲಿ ಪಡಿತರ ಚೀಟಿಗಳನ್ನು ಪರಿಶೀಲಿಸಿ, ಅರ್ಹತೆಯುಳ್ಳವರಿಗೆ ಪಡಿತರ ಚೀಟಿಗಳನ್ನು ವಿತರಿಸಲು ಹಾಗೂ ಅರ್ಹತೆ ಇಲ್ಲದಿರುವ ಫಲಾನುಭವಿಗಳನ್ನು ಕೈಬಿಡಲು ಕ್ರಮಕೈಗೊಳ್ಳಲಾಗುವುದು. ಈ ಕಾರ್ಯಕ್ರಮವನ್ನು ಸ್ಥಳೀಯ ಜಾಗೃತ ಸಮಿತಿಯ ಸದಸ್ಯರ ಸಹಕಾರದೊಂದಿಗೆ ಪ್ರತಿ ವರ್ಷವು ಕೈಗೊಳ್ಳಲಾಗುವುದು.

## ಮಹಿಳಾ ಮತ್ತು ಮಕ್ಕಳ ಕಲ್ಯಾಣ

91. ಬಡತನ ರೇಖೆಗಿಂತ ಕೆಳಗಿರುವ ಗರ್ಭಿಣಿ ಮಹಿಳೆಯರಿಗೆ ಮಾಸಿಕ 6 ಸಾವಿರ ರೂ.ಗಳ ಭತ್ಯೆ ನೀಡುವ ಬಗ್ಗೆ ನಾನು ಘೋಷಿಸಿದ್ದೆ. ಪ್ರಸ್ತುತ ರಾಜ್ಯ ಸರ್ಕಾರದ 'ಮಾತೃಪೂರ್ಣ' ಮತ್ತು ಕೇಂದ್ರ ಸರ್ಕಾರದ 'ಮಾತೃವಂದನಾ' ಕಾರ್ಯಕ್ರಮಗಳಲ್ಲಿ ಹಲವು

ಸೌಲಭ್ಯಗಳು ದೊರೆಯುತ್ತಿವೆ. ಈ ಸೌಲಭ್ಯಗಳ ಜೊತೆಗೆ ನಮ್ಮ ಸರ್ಕಾರವು "ಮುಖ್ಯಮಂತ್ರಿ ಮಾತೃಶ್ರೀ ಯೋಜನೆ" ಯನ್ನು ಹೊಸದಾಗಿ ರೂಪಿಸಿದೆ. ಈ ಹೊಸ ಯೋಜನೆಯಡಿ ಬಿಪಿಎಲ್ ಕುಟುಂಬದ ಗರ್ಭಿಣಿಯರಿಗೆ ಹೆರಿಗೆ ಪೂರ್ವದ 3 ತಿಂಗಳು ಹಾಗೂ ಬಾಣಂತಿಯರಿಗೆ ಹೆರಿಗೆ ನಂತರದ 3 ತಿಂಗಳ ಕಾಲ ಮಾಸಿಕ 1,000 ರೂ.ಗಳನ್ನು ಅವರ ಆಧಾರ್ ಲಿಂಕ್ಡ್ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಈ ಮೊತ್ತವನ್ನು ಮುಂದಿನ ಐದು ವರ್ಷಗಳಲ್ಲಿ ಹಂತ ಹಂತವಾಗಿ ಹೆಚ್ಚಿಸಲಾಗುವುದು. ಈ ಯೋಜನೆಯು ತಾಯಿಯ ಮೊದಲ ಎರಡು ಮಕ್ಕಳಿಗೆ ಅನ್ವಯವಾಗುತ್ತದೆ. ಈ ಯೋಜನೆಗೆ 350 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ. 2018ರ ನವೆಂಬರ್ 1 ರಿಂದ ಈ ಯೋಜನೆ ಅನುಷ್ಠಾನಗೊಳ್ಳಲಿದೆ.

92. 'ಆಧಾರ' ಸ್ವಯಂ ಉದ್ಯೋಗ ಯೋಜನೆಯ ಘಟಕ ವೆಚ್ಚವನ್ನು ಈಗಿರುವ 35,000 ರೂ.ಗಳಿಂದ 1 ಲಕ್ಷ ರೂ.ಗಳಿಗೆ ಹೆಚ್ಚಿಸಿ, ಇದರಲ್ಲಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲು ಉದ್ದೇಶಿಸಲಾಗಿದೆ.

93. 2016ರ ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಕಾಯ್ದೆಯು ಎಲ್ಲಾ 21 ವಿಧದ ವಿಕಲಚೇತನ ವ್ಯಕ್ತಿಗಳ ಸಮೀಕ್ಷೆಯನ್ನು ಕೈಗೊಳ್ಳಲು 5 ಕೋಟಿ ರೂ. ಅನುದಾನ ಒದಗಿಸಲಾಗಿದೆ.

94. ಪ್ರಸ್ತುತ ಜಿಲ್ಲೆಗೊಂದರಂತೆ ಇರುವ ವೃದ್ಧಾಶ್ರಮವನ್ನು ರಾಜ್ಯದ ಎಲ್ಲಾ ಉಪವಿಭಾಗಗಳಲ್ಲಿ ತಲಾ ಒಂದರಂತೆ ವಿಸ್ತರಿಸಿ ಪ್ರಾರಂಭಿಸಲಾಗುವುದು.

95. ರಾಷ್ಟ್ರೀಯ ಅಂಗವಿಕಲರ ಹಣಕಾಸು ಅಭಿವೃದ್ಧಿ ನಿಗಮದಿಂದ ವಿಕಲಚೇತನರಿಗೆ ನೀಡಿರುವ ಸಾಲ ಮತ್ತು 2014ರಿಂದ ಸುಸ್ತಿಯಾಗಿರುವ ಬಡ್ಡಿ ಮೊತ್ತವನ್ನು ಮನ್ನಾ ಮಾಡಲು 4 ಕೋಟಿ ರೂ.ಗಳ ಅನುದಾನ ಮೀಸಲಿರಿಸಲಾಗಿದೆ.

96. ಬುದ್ಧಿ ಮಾಂದ್ಯತೆ, ಸ್ವಲೀನತೆ, ಮೆದುಳಿನ ಪಾರ್ಶ್ವವಾಯು, ಬಹುವಿಧ ಅಂಗವಿಕಲತೆ ಸೇರಿದಂತೆ ವಿಕಲಚೇತನರ ಪಾಲನೆ ಹಾಗೂ ನಿರ್ವಹಣೆಯ ಬಗ್ಗೆ ಪಾಲಕರಿಗೆ, ವೃತ್ತಿಪರರಿಗೆ ತರಬೇತಿ, ಫಿಸಿಯೋಥೆರಪಿ ಹಾಗೂ ಪುನರ್ವಸತಿ ತರಬೇತಿ ಕೋರ್ಸುಗಳನ್ನು ನಡೆಸುವುದು, ಸ್ಪರ್ಶ ಸಂವೇದಿ ಉದ್ಯಾನ ನಿರ್ಮಾಣ ಇತ್ಯಾದಿ ಉದ್ದೇಶಗಳಿಗಾಗಿ 20 ಎಕರೆ ಜಾಗದಲ್ಲಿ ಸರ್ಕಾರ ಹಾಗೂ ಖಾಸಗಿ ಸಂಸ್ಥೆಗಳ ಪಾಲುದಾರಿಕೆಯಲ್ಲಿ ವಿಕಲಚೇತನರ ಕ್ಯಾಂಪಸ್‌ನ್ನು ಪ್ರಾರಂಭಿಸಲಾಗುವುದು.

97. ಬೆಂಗಳೂರಿನ ಇಂದಿರಾನಗರದಲ್ಲಿರುವ ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಕಟ್ಟಡದಲ್ಲಿ ವಿಶೇಷ ಶಿಕ್ಷಕರ ಶಿಕ್ಷಣಕ್ಕಾಗಿ ತರಬೇತಿ ಕೇಂದ್ರವನ್ನು / ವಿಶೇಷ ಬಿ.ಇಡಿ. ಕಾಲೇಜನ್ನು ಸರ್ಕಾರ ಮತ್ತು ಖಾಸಗಿ ಸಂಸ್ಥೆಗಳ ಪಾಲುದಾರಿಕೆಯಲ್ಲಿ ಆರಂಭಿಸಲು ಉದ್ದೇಶಿಸಲಾಗಿದೆ.

98. ಉನ್ನತ ವ್ಯಾಸಂಗಕ್ಕಾಗಿ ಸಮಾಜ ಕಲ್ಯಾಣ ಇಲಾಖೆಯಿಂದ ನೀಡುತ್ತಿರುವ ವಿದ್ಯಾರ್ಥಿ ವೇತನದಂತೆ, ಪಿ.ಹೆಚ್.ಡಿ. ಮಾಡುತ್ತಿರುವ ಹಾಗೂ ವಿದೇಶದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಅಧ್ಯಯನ ಕೈಗೊಳ್ಳುವ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವ ಸಲುವಾಗಿ 1 ಕೋಟಿ ರೂ. ಒದಗಿಸಲಾಗುವುದು.

99. ಲೈಂಗಿಕ ಕಾರ್ಯಕರ್ತೆಯರ ಸ್ಥಿತಿಗತಿಗಳ ಬಗ್ಗೆ ಡಾ. ಜಯಮಾಲ ಅವರ ಅಧ್ಯಕ್ಷತೆಯ ಸಮಿತಿ ಸಲ್ಲಿಸಿದ ವರದಿಯ ಪ್ರಮುಖ ಶಿಫಾರಸ್ಸುಗಳನ್ನು ಆಧರಿಸಿ ಲೈಂಗಿಕ ಕಾರ್ಯಕರ್ತೆಯರ ಜೀವನಕ್ಕೆ ಭದ್ರತೆ ಒದಗಿಸಲು ನಾವು ಬದ್ಧರಾಗಿದ್ದೇವೆ. ಇದಕ್ಕಾಗಿ ವಿವಿಧ ಅಭಿವೃದ್ಧಿ ಇಲಾಖೆಗಳ ಸಹಭಾಗಿತ್ವದಲ್ಲಿ ವಸತಿ, ಕೌಶಲ್ಯಾಭಿವೃದ್ಧಿ, ಸ್ವಯಂ-ಉದ್ಯೋಗ, ಮಾಸಾಶನ, ಆರೋಗ್ಯ ಸೇವೆ, ಆಹಾರ ಭದ್ರತೆ, ಸಾಮಾಜಿಕ ಭದ್ರತೆ ಹಾಗೂ ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ರೂಪಿಸಲಾಗುವುದು.

## ವಾಣಿಜ್ಯ ಮತ್ತು ಕೈಗಾರಿಕೆ

100. ಕರ್ನಾಟಕದಲ್ಲಿ ಕೈಗಾರಿಕಾ ವಲಯದ ಉತ್ಪಾದನಾ ಸಾಮರ್ಥ್ಯವನ್ನು ವೃದ್ಧಿಸುವ ನಿಟ್ಟಿನಲ್ಲಿ ನಾನು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಿದ್ದೇನೆ.

- ಚೀನಾ ದೇಶವು ತನ್ನ ಗೊನ್‌ಶಾವ್ ಹಾಗೂ ಫೊಶಾನ್ ಪ್ರದೇಶಗಳಲ್ಲಿ ಜಾಗತಿಕ ಮಟ್ಟದಲ್ಲಿ ಬೇಡಿಕೆಯಿರುವ ಅನೇಕ ವಸ್ತುಗಳ ಉತ್ಪಾದನೆಯನ್ನು ಬೃಹತ್ ಪ್ರಮಾಣದಲ್ಲಿ ಹಮ್ಮಿಕೊಂಡಿದೆ. ಈ ಕಾರಣದಿಂದ ಜಗತ್ತಿನ ಎಲ್ಲೆಡೆ ಸಾಮಾನ್ಯ ಜನರಿಗೂ ಚೀನಾ ಉತ್ಪಾದಿತ ಪೀಠೋಪಕರಣ, ಸೌರಶಕ್ತಿ ವಸ್ತುಗಳು, ಎಲೆಕ್ಟ್ರಿಕ್ ಲೈಟಿಂಗ್ (Electric Lighting) ವಸ್ತುಗಳು, ಸ್ನಾನಗೃಹ ವಸ್ತುಗಳು ಎಲೆಕ್ಟ್ರಿಕ್ ವಸ್ತುಗಳು ಮತ್ತು ಎಲೆಕ್ಟ್ರಾನಿಕ್ ಆಟಿಕೆಗಳು ಲಭ್ಯವಾಗುತ್ತಿವೆ. ಚೀನಾ ದೇಶವು ಕಳೆದ ಎರಡು ದಶಕಗಳಲ್ಲಿ ಉತ್ಪಾದನಾ ವಲಯದಲ್ಲಿ ಅಗಾಧ ಅಭಿವೃದ್ಧಿ ಸಾಧಿಸಿದ್ದು ನಮ್ಮ ದೇಶದಲ್ಲಿಯೂ ಸಹ ಚೀನಿ ವಸ್ತುಗಳು ಮಾರುಕಟ್ಟೆಗೆ ದಾಳಿಯಿಟ್ಟು ದೇಶದ ಸ್ವಂತ ಉದ್ದಿಮೆಗಳು

ಮುಚ್ಚುವ ಸ್ಥಿತಿ ಬಂದಿದೆ. "Produce or Perish" "ಉತ್ಪಾದಿಸು ಇಲ್ಲವೇ ನಾಶವಾಗು" ಎನ್ನುವ ಉಕ್ತಿಯಂತೆ ನಮ್ಮ ಉತ್ಪಾದನೆಯನ್ನು ನಾವು ಈಗ ಹೆಚ್ಚಿಸಿಕೊಳ್ಳಬೇಕಿದೆ. ಈ ದೃಷ್ಟಿಯಿಂದ ನಾನು ಕರ್ನಾಟಕದಲ್ಲಿ "Compete with China" "ಚೀನಾ ದೇಶದೊಂದಿಗೆ ಸಕಾರಾತ್ಮಕ ಸ್ಪರ್ಧೆ" ಎನ್ನುವ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಯೋಜಿಸಿರುತ್ತೇನೆ. ಈ ಯೋಜನೆ ಅಡಿಯಲ್ಲಿ ಕರ್ನಾಟಕದ ಯಶಸ್ವಿ ಉದ್ಯಮಿಗಳ ನೇತೃತ್ವದಲ್ಲಿ ಪ್ರತಿ ಕಾರ್ಯಕ್ರಮಕ್ಕೂ ಯೋಜನಾ ಗುರಿ ಘಟಕ (Programme Mission Unit) ಸ್ಥಾಪಿಸಲಾಗುವುದು. ಚೀನಾ ದೇಶದ ಉತ್ಪನ್ನಗಳಿಗೆ ತೀವ್ರ ಸ್ಪರ್ಧೆ ನೀಡುವ ನಿಟ್ಟಿನಲ್ಲಿ ಹಳ್ಳಿಗಳ ಮಟ್ಟದಲ್ಲಿ ಬಿಡಿ ಭಾಗಗಳನ್ನು ಉತ್ಪಾದನೆ ಮಾಡಿ ಅವುಗಳನ್ನು ತಾಲ್ಲೂಕು ಮಟ್ಟದಲ್ಲಿ ಜೋಡಣೆ ಮಾಡಿ ಜಿಲ್ಲಾ ಕೇಂದ್ರಗಳಲ್ಲಿ ಅವುಗಳ ಮಾರುಕಟ್ಟೆಗಾಗಿ ಮಾಲ್‌ಗಳನ್ನು ತೆರೆಯಲಾಗುವುದು. ಈ ಉದ್ದೇಶಕ್ಕಾಗಿ ಜಿಲ್ಲೆಗಳಲ್ಲಿ Plug & Play ಕೈಗಾರಿಕಾ ಶೆಡ್‌ಗಳನ್ನು ನಿರ್ಮಿಸಲಾಗುವುದು. ಈ ಯೋಜನೆಗೆ ಪೂರಕವಾಗಿ ಮಾನವ ಸಂಪನ್ಮೂಲ ವೃದ್ಧಿಗೊಳಿಸಲು ವಿವಿಧ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು. ಆಯಾ ಪ್ರದೇಶದ ಸಂಪನ್ಮೂಲ, ವೃತ್ತಿ ಕೌಶಲ್ಯಗಳನ್ನು ಆಧರಿಸಿ ವಿವಿಧ ಜಿಲ್ಲೆಗಳಲ್ಲಿ ಅನುಷ್ಠಾನಕ್ಕೆ ತರಲಿರುವ ಕಾರ್ಯಕ್ರಮಗಳ ಕೆಲವು ಉದಾಹರಣೆಗಳನ್ನು ನೀಡಲು ಬಯಸುತ್ತೇನೆ.

- ಕಲಬುರ್ಗಿ ಜಿಲ್ಲೆಯನ್ನು ಭಾರತದ ಸೋಲಾರ್ ಜಿಲ್ಲೆಯನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಸೌರವಿದ್ಯುತ್‌ನ್ನು ಉತ್ಪಾದಿಸಲು ಅಗತ್ಯವಿರುವ ಸೋಲಾರ್ ಪ್ಯಾನಲ್ (Solar Panel),

ಇನ್ವರ್ಟರ್‌ಗಳು, (Inverter) ಕೆಪ್ಯಾಸಿಟರ್‌ಗಳು (Capacitor) ಮತ್ತು ಲುಮಿನೇಟರ್‌ಗಳನ್ನು ಕಲಬುರ್ಗಿ ಜಿಲ್ಲೆಯಲ್ಲಿಯೇ ಉತ್ಪಾದಿಸಲಾಗುವುದು.

- ಭಾರತದಲ್ಲಿನ ಸ್ಥಳೀಯ ವಿದ್ಯುತ್ ದೀಪ ಉದ್ಯಮವು ಸುಮಾರು 46,000 ಕೋಟಿ ರೂ. ಮೌಲ್ಯದ್ದಾಗಿದೆ. ಹಾಲಿ ಈ ಮಾರುಕಟ್ಟೆಯನ್ನು ಚೀನಾದಿಂದ ಆಮದಾಗುತ್ತಿರುವ LED Light ಗಳು ಆಕ್ರಮಿಸಿಕೊಂಡಿವೆ. ಸ್ಥಳೀಯ ಮಾರುಕಟ್ಟೆಯಲ್ಲಿ ಈ ಉತ್ಪನ್ನಗಳನ್ನು ಖರೀದಿಸಲು ಗ್ರಾಹಕರು ಸಿದ್ಧರಿರುವುದರಿಂದ ಚಿತ್ರದುರ್ಗ ಜಿಲ್ಲೆಯಲ್ಲಿ ಗೃಹೋಪಯೋಗಿ LED Light ಗಳನ್ನು ಉತ್ಪಾದಿಸುವ ಉದ್ಯಮವನ್ನು ಅಭಿವೃದ್ಧಿಪಡಿಸಲಾಗುವುದು.

- ಸ್ನಾನ ಗೃಹ ನೆಲ ಹಾಸುಗಳು (Tiles) ಮತ್ತು ಸ್ಯಾನಿಟರಿ ಉಪಕರಣಗಳ ಭಾರತದ ಮಾರುಕಟ್ಟೆಯ ಮೇಲೆ ಚೀನಾದ ಉತ್ಪನ್ನಗಳು ದಾಳಿಯಿಡುತ್ತಿವೆ. ಈ ಹಿಂದೆ ಸ್ನಾನಗೃಹ ಸಾಧನಗಳ ಮಾರುಕಟ್ಟೆಯು ಭಾರತದಲ್ಲಿಯೇ ಉತ್ಪಾದನೆಯಾಗುವ ವಸ್ತುಗಳಿಗೆ ಸೀಮಿತವಾಗಿತ್ತು. ಚೀನಾದ ಉತ್ಪನ್ನಗಳ ಜೊತೆ ಸ್ಪರ್ಧಿಸಲು ಹಾಸನ ಜಿಲ್ಲೆಯನ್ನು ಸ್ನಾನಗೃಹ ನೆಲಹಾಸು ಮತ್ತು ಸ್ಯಾನಿಟರಿ ಉಪಕರಣಗಳ ಉತ್ಪಾದಕ ಜಿಲ್ಲೆಯಾಗಿ ಅಭಿವೃದ್ಧಿ ಪಡಿಸುವ ಮಹಾತ್ವಾಕಾಂಕ್ಷೆಯನ್ನು ನಮ್ಮ ಸರ್ಕಾರವು ಹೊಂದಿದೆ.

- ಪ್ರಸ್ತುತ ದೇಸಿ ಆಟಿಕೆಗಳನ್ನು ಸಣ್ಣ ಸಣ್ಣ ಉದ್ಯಮಗಳು ತಯಾರಿಸುತ್ತಿವೆ. ಆದರೆ ಇತ್ತೀಚಿನ ದಿನಗಳಲ್ಲಿ ಬ್ಯಾಟರಿ ಮತ್ತು ವಿದ್ಯುತ್ ಚಾಲಿತ ಆಟಿಕೆಗಳು ಮಾರುಕಟ್ಟೆಗೆ ಬಂದಿದ್ದು,

ಅವುಗಳಲ್ಲಿ ICB, Chip, Micro DC Motor ಗಳನ್ನು ಅಳವಡಿಸಿರುತ್ತಾರೆ. ಇಂತಹ ಆಟಿಕೆಗಳಿಗೆ ಜಾಗತಿಕವಾಗಿ ಮಾರುಕಟ್ಟೆ ಇದೆ. ಚೀನಾ ದೇಶದಲ್ಲಿ ಯಾಂತ್ರಿಕ ಆಟಿಕೆಗಳು ತಯಾರಾಗಿ ಇಡೀ ಪ್ರಪಂಚಕ್ಕೆ ಸರಬರಾಜಾಗುತ್ತಿದೆ. ಈ ಹಿನ್ನೆಲೆಯಲ್ಲಿ ಚೀನಾ ಆಟಿಕೆಗಳಿಗೆ ಸವಾಲೊಡ್ಡುವಂತೆ ಕೊಪ್ಪಳ ಜಿಲ್ಲೆಯಲ್ಲಿ, ಆಟಿಕೆ ತಯಾರಿಕಾ ಕ್ಲಸ್ಟರ್‌ಗಳನ್ನು ಹುಟ್ಟುಹಾಕಲು ಯೋಜಿಸಲಾಗಿದೆ.

- ಮೈಸೂರು, ಬೆಂಗಳೂರು ನಡುವೆ ICB ಯನ್ನು ತಯಾರು ಮಾಡುವ ಹಲವು ಕಂಪನಿಗಳು ಹುಟ್ಟಿಕೊಂಡಿವೆ. ICB ಮತ್ತು IC ಚಿಪ್‌ಗಳಿಗೆ ವಿಶ್ವದಾದ್ಯಂತ ಅಗಾಧವಾದ ಬೇಡಿಕೆ ಇದೆ. ಇಡೀ ಪ್ರಪಂಚದಲ್ಲಿ ಶೇ.80ರಷ್ಟು ICB ಚಿಪ್‌ಗಳು ತೈವಾನ್ ದೇಶದಿಂದ ಆಮದು ಆಗುತ್ತಿದೆ. ನಮ್ಮ ದೇಶದಲ್ಲಿ ಇದೇ ರೀತಿಯ ICB ಚಿಪ್‌ಗಳಿಗೆ ಸಾಕಷ್ಟು ಬೇಡಿಕೆ ಇದೆ. ಈ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆಯಲ್ಲಿ ICB ಚಿಪ್‌ಗಳನ್ನು ತಯಾರಿಸುವ ಸಂಸ್ಥೆ ಸ್ಥಾಪಿಸಲು ಯೋಜಿಸಲಾಗಿದೆ.

- ನಮ್ಮ ರಾಜ್ಯದ ಬಳ್ಳಾರಿ ಜಿಲ್ಲೆಯಲ್ಲಿ, ಈಗಾಗಲೇ ವಸ್ತ್ರ ಉದ್ಯಮ ವ್ಯಾಪಕವಾಗಿದೆ. ವಿಶ್ವ ವಾಣಿಜ್ಯ ಸಂಸ್ಥೆಯು ಬಹುವಸ್ತ್ರ ಒಪ್ಪಂದವನ್ನು (WTO Multi Fibre Arrangement) ರದ್ದುಗೊಳಿಸಿದ ನಂತರ ಅನೇಕ ಅವಕಾಶಗಳು ದೊರೆಯುತ್ತಿವೆ. ಈ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ವಸ್ತ್ರ ಉದ್ಯಮಕ್ಕೆ ಒತ್ತು ನೀಡಲಾಗುವುದು.

- ಪ್ರತಿ ವರ್ಷ ಚೀನಾದಿಂದ ಭಾರತಕ್ಕೆ 5 ಲಕ್ಷ ಕೋಟಿ ರೂ.ಗಳಿಗಿಂತ ಹೆಚ್ಚು ಮೊತ್ತದ ಮೊಬೈಲ್ ಫೋನ್‌ಗಳು ಆಮದಾಗುತ್ತಿವೆ. ಹೊಸದಾಗಿ ಬರುತ್ತಿರುವ ಮೊಬೈಲ್ ಫೋನ್‌ಗಳಲ್ಲಿ ಅನೇಕ ರೀತಿಯ Option ಗಳು ಹೆಚ್ಚಾಗುತ್ತಿವೆ. ಹಳೇ ಮೊಬೈಲ್ ಫೋನ್‌ಗಳು ಕೇವಲ ಎರಡು ವರ್ಷದಲ್ಲಿ ಹೊಸ ಮೊಬೈಲ್ ಫೋನ್‌ಗಳಾಗಿ ಬದಲಾವಣೆಗೊಳ್ಳುತ್ತಿವೆ. ಪ್ರತಿ ಹಳೆಯ ಸ್ಮಾರ್ಟ್ ಫೋನ್‌ನ್ನು ಮೂಲ ಬಿಡಿಭಾಗಗಳನ್ನಾಗಿ ಪ್ರತ್ಯೇಕಿಸಿದಲ್ಲಿ, ಪ್ರತಿ ಫೋನ್‌ಗೆ 4000 ರೂ.ಗಳು ದೊರೆಯುತ್ತದೆ. ಒಟ್ಟು 3 ಕೋಟಿ ಫೋನ್‌ಗಳನ್ನು ಬಿಡಿ ಘಟಕಗಳಾಗಿ ಬೇರ್ಪಡಿಸುವ ಅವಕಾಶಗಳು ಇವೆ. ಈ ಅವಕಾಶಗಳನ್ನು ಬಳಸಿಕೊಂಡು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮೊಬೈಲ್ ಫೋನ್ ಬಿಡಿ ಘಟಕಗಳ ಉದ್ಯಮಗಳನ್ನು ಸ್ಥಾಪಿಸಲಾಗುವುದು.

- ಈಗ ಸ್ಪೋರ್ಟ್ಸ್ ಮತ್ತು ಫಿಟ್‌ನೆಸ್ ವಸ್ತುಗಳು ದೇಶದಾದ್ಯಂತ ಎಲ್ಲಾ ರಾಜ್ಯಗಳಿಗೂ ಬೇಕಾಗಿವೆ. ಈ ವಸ್ತುಗಳನ್ನು ತಯಾರು ಮಾಡುವ ಘಟಕಗಳನ್ನು ತುಮಕೂರು ಜಿಲ್ಲೆಯಲ್ಲಿ ಸ್ಥಾಪಿಸಲು ನಾನು ಉದ್ದೇಶಿಸಿರುತ್ತೇನೆ. ಒಟ್ಟು 23 ಕ್ರೀಡೆಗಳಿಗೆ ಬೇಕಾದ ವಸ್ತುಗಳನ್ನು ವಿವಿಧ ರೀತಿಯಲ್ಲಿ ಉತ್ಪಾದಿಸಲು ಕ್ರಮ ಕೈಗೊಳ್ಳಲು ಬಯಸುತ್ತೇನೆ. ಈ ಹಿನ್ನೆಲೆಯಲ್ಲಿ, ಮುಂದಿನ 4 ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ 2000 ಕೋಟಿ ರೂ. ಬಂಡವಾಳ ಹೂಡಿ, ಸ್ಪೋರ್ಟ್ಸ್ ಮತ್ತು ಫಿಟ್‌ನೆಸ್ ವಸ್ತುಗಳ ತಯಾರಿಕೆ ಮಾಡಲು ಉದ್ದೇಶಿಸಿ, 1 ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ ಹೊಂದಿದ್ದೇವೆ.

- ನಮ್ಮ ದೇಶ ಕೃಷಿ ಪ್ರಧಾನ ಕ್ಷೇತ್ರ. ಕಳೆದ ದಶಕದಲ್ಲಿ ಕೃಷಿ ಸಂಸ್ಥೆಗೆ ಹೊಸ ತಂತ್ರಜ್ಞಾನಗಳು ವಿವಿಧ ದೇಶಗಳಿಂದ ನಮ್ಮ ದೇಶಕ್ಕೆ ಬರುತ್ತಿವೆ. ಆದರೆ ನಮ್ಮ ಬೆಳೆಗಳು ಮತ್ತು ನಮ್ಮ ಬೇಸಾಯದ ಕ್ರಮಗಳಿಗೆ ಹೊಂದುವಂತಹ ಕೃಷಿ ಯಂತ್ರೋಪಕರಣಗಳನ್ನು ನಾವೇ ತಯಾರಿಸಿದಲ್ಲಿ, ನಮ್ಮ ರೈತರಿಗೆ ಸಾಕಷ್ಟು ಅನುಕೂಲವಾಗಲಿದೆ. ಈ ಹಿನ್ನೆಲೆಯಲ್ಲಿ ಕೃಷಿಗೆ ಅಗತ್ಯವಾದ ಮತ್ತು ಕೃಷಿಯ ಉತ್ಪನ್ನಗಳನ್ನು ಸಂರಕ್ಷಿಸುವ ಯಂತ್ರಗಳ ಅವಶ್ಯಕತೆ ಇದ್ದು, ಇವುಗಳನ್ನು ಬೀದರ್ ಜಿಲ್ಲೆಯಲ್ಲಿ ವ್ಯಾಪಕವಾಗಿ ಉತ್ಪಾದಿಸಲು ಯೋಜಿಸಿದ್ದೇವೆ. ಈ ಜಿಲ್ಲೆಗೆ ಮುಂದಿನ ನಾಲ್ಕು ವರ್ಷಗಳಲ್ಲಿ ಕೃಷಿ ಉಪಕರಣ ಯಂತ್ರಗಳನ್ನು ತಯಾರಿಸಲು ಮುಂದೆ ಬರುವಂತಹ ಕಂಪನಿಗಳಿಗೆ 2000 ಕೋಟಿ ರೂ. ಬಂಡವಾಳ ಹೂಡಲು ಉದ್ದೇಶಿಸಿದ್ದೇವೆ.
- ಮೇಲಿನ ಯೋಜನೆಗಳನ್ನು ಅನುಷ್ಠಾನಗೊಳಿಸಲು ಆರು ತಿಂಗಳುಗಳಿಂದ ಎರಡು ವರ್ಷದವರೆಗೆ ತರಬೇತಿ ಹೊಂದಿದ ನುರಿತ ಕೆಲಸಗಾರರು ಬೇಕಾಗುತ್ತಾರೆ. ಈ ಹಿನ್ನೆಲೆಯಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಮೊದಲ ಹಂತದಲ್ಲಿ ತರಬೇತಿ ಶಾಲೆಗಳನ್ನು ತೆರೆದು ತರಬೇತಿಯನ್ನು ನೀಡಬೇಕಾಗಿರುತ್ತದೆ.
- ಈ ವರ್ಷ ಮೇಲೆ ಹೇಳಿದ ಏಳು ಜಿಲ್ಲೆಗಳಲ್ಲಿ ಕೈಗಾರಿಕಾ ತರಬೇತಿ ಒದಗಿಸಲು 500 ಕೋಟಿ ರೂ. ಒದಗಿಸಿದೆ. ಮುಂದಿನ ನಾಲ್ಕು ವರ್ಷ ಪ್ರತಿ ಜಿಲ್ಲೆಗೆ 2000 ಕೋಟಿ ರೂ.ಗಳನ್ನು Equity ಷೇರು ಬಂಡವಾಳ ರೂಪದಲ್ಲಿ ಉದ್ಯಮದಲ್ಲಿ ಭಾಗವಹಿಸುವ ಖಾಸಗಿ ಸಂಸ್ಥೆಗಳಿಗೆ ನೀಡಲಾಗುವುದು. ತಮ್ಮ

ಕಡೆಯಿಂದ ಖಾಸಗಿ ಸಂಸ್ಥೆಯವರು ಸುಮಾರು 3000 ಕೋಟಿ ಬಂಡವಾಳ ಹೂಡಬೇಕಾಗಿರುತ್ತದೆ. ಈ ಕ್ರಮದಲ್ಲಿ ಪ್ರತಿ ಜಿಲ್ಲೆಗೆ ರೂ. 5000 ಕೋಟಿ ಬಂಡವಾಳವಿರಲಿದೆ. ಇದರಿಂದ ಬ್ಯಾಂಕ್‌ಗಳ ಮುಖೇನ ಸುಮಾರು ರೂ.15000 ಕೋಟಿ ಸಾಲ ಪಡೆಯಬಹುದಾಗಿರುತ್ತದೆ. ಈ ಕಾರ್ಯಕ್ರಮಗಳಿಂದ ಸರ್ಕಾರದ ಹೂಡಿಕೆಗಳನ್ನು "Fund Manager" ಮುಖಾಂತರ ಹೂಡಿಕೆ ಮಾಡಲಾಗುವುದು. ಇದರಿಂದ ಪ್ರತಿ ಜಿಲ್ಲೆಯಲ್ಲಿ 1 ಲಕ್ಷ ಉದ್ಯೋಗ ಲಭಿಸಲಿದೆ.

- ಈ ಕೈಗಾರಿಕಾ ಕ್ರಾಂತಿಯಿಂದ ಒಟ್ಟು 8 ಲಕ್ಷ ಉದ್ಯೋಗಗಳು ಜಿಲ್ಲಾ ವಲಯದಲ್ಲಿ ಸೃಷ್ಟಿಯಾಗಲಿವೆ. ಮುಂದಿನ ವರ್ಷಗಳಲ್ಲಿ 14000 ಕೋಟಿ ರೂ.ಗಳ ಬಂಡವಾಳವನ್ನು ಕರ್ನಾಟಕ ಸರ್ಕಾರ ಹೂಡಲಿದೆ.

101. ವಿವಿಧ ಕಾಯ್ದೆಗಳ ಅಡಿಯಲ್ಲಿ ನಿಯಮಗಳ ಪಾಲನೆ ಕುರಿತು ಕಾರ್ಮಿಕ, ಕಾರ್ಖಾನೆಗಳು, ಪರಿಸರ, ತೆರಿಗೆ ಜಾರಿ ಇಲಾಖೆಗಳು ನಿಯಮಿತವಾಗಿ ತಪಾಸಣೆ ನಡೆಸುತ್ತವೆ. ಈ ತಪಾಸಣೆಗಳನ್ನು ಪರಿಣಾಮಕಾರಿ ಮಾಡಲು ಹಾಗೂ ಕೈಗಾರಿಕೆಗಳ, ಅದರಲ್ಲೂ ವಿಶೇಷವಾಗಿ ಅತೀ ಸಣ್ಣ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳ ಸುಗಮ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತೆ ಸುಧಾರಣೆಯ ಅಗತ್ಯವಿದೆ. ಈ ನಿಟ್ಟಿನಲ್ಲಿ ಕೈಗಾರಿಕಾ ಸಂಸ್ಥೆಗಳ ಸಹಯೋಗದೊಂದಿಗೆ ಕೇಂದ್ರೀಕೃತ ತಪಾಸಣಾ ವ್ಯವಸ್ಥೆಯನ್ನು ರೂಪಿಸಲು ಉದ್ದೇಶಿಸಿದ್ದೇನೆ. ಇದರಿಂದ ಪಾರದರ್ಶಕತೆ ಉಂಟಾಗಿ ನಿಯಮ ಪಾಲನೆಯಲ್ಲಿ ಸುಧಾರಣೆಯಾಗುವುದಲ್ಲದೇ, ಕೈಗಾರಿಕೆಗಳಲ್ಲಿ ವಿಶ್ವಾಸ ಮೂಡುತ್ತದೆ ಎಂಬ ನಂಬಿಕೆ ನನಗಿದೆ.

102. KIADB ಮತ್ತು KSIIDC ಯಿಂದ ನಿವೇಶನ / ಶೆಡ್‌ಗಳನ್ನು ತಾತ್ಕಾಲಿಕ ದರದಲ್ಲಿ ಹಂಚಿಕೆ ಮಾಡುವುದರಿಂದ ಹೂಡಿಕೆದಾರರು ಹಾಗೂ ಅವರಿಗೆ ಆರ್ಥಿಕ ನೆರವು ನೀಡುವ ಸಂಸ್ಥೆಗಳಿಗೆ ಅನಿಶ್ಚಿತತೆಯ ವಾತಾವರಣ ಉಂಟಾಗುತ್ತದೆ. ಆದ್ದರಿಂದ, ಈ ವ್ಯವಸ್ಥೆಯನ್ನು ಸುಧಾರಿಸಿ KIADB ಮತ್ತು KSIIDC ಗಳು ಕೈಗಾರಿಕಾ ಪ್ರದೇಶ / ವಸಾಹತು ಅಭಿವೃದ್ಧಿ ಪಡಿಸಿದ ಕೂಡಲೇ ಅಂತಿಮ ಹಂಚಿಕೆ ದರ ನಿಗದಿಪಡಿಸಲು ಕ್ರಮಕೈಗೊಳ್ಳಲಾಗುವುದು.

103. ರಾಜ್ಯಕ್ಕೆ ಕೈಗಾರಿಕಾ ಬಂಡವಾಳವನ್ನು ಆಕರ್ಷಿಸಿ ಬೆಳವಣಿಗೆ ಸಾಧಿಸಲು ಸರ್ಕಾರದೊಂದಿಗಿನ ವ್ಯವಹಾರಗಳನ್ನು ಸರಳಗೊಳಿಸುವುದು ಅಗತ್ಯವಾಗಿರುತ್ತದೆ. ಕೈಗಾರಿಕೆಗಳಿಗೆ ಸಂಬಂಧಿಸಿದ ಕಾರ್ಮಿಕ, ಕೈಗಾರಿಕೆ, ನಗರಾಭಿವೃದ್ಧಿ, ಪರಿಸರ ಮತ್ತು ಇತರೆ ಇಲಾಖೆಗಳು ನೀಡುತ್ತಿರುವ ಸೇವೆಗಳನ್ನು ಮರುವಿನ್ಯಾಸಗೊಳಿಸಿ ಕಾಲಮಿತಿಯೊಳಗೆ ಸೇವೆಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು.

104. ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ತೆಂಗಿನ ನಾರಿನ ವಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕುಶಲಕರ್ಮಿಗಳು ಅಲ್ಪ ಪ್ರಮಾಣದ ವೇತನವನ್ನು ಪಡೆಯುತ್ತಿರುತ್ತಾರೆ. ಆದ್ದರಿಂದ, ತೆಂಗಿನ ನಾರಿನ ವಲಯಕ್ಕೆ ಉತ್ತೇಜನ ನೀಡಲು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರತಿ ಕುಶಲಕರ್ಮಿಗೆ ವಾರ್ಷಿಕ 10,000/- ರೂ.ಗಳಂತೆ ಪ್ರೋತ್ಸಾಹ ವೇತನವನ್ನು ನೀಡಲು ಸರ್ಕಾರವು ಉದ್ದೇಶಿಸಿದೆ.

105. ಕರ್ನಾಟಕದಲ್ಲಿ ತೆಂಗಿನ ನಾರಿನ ಉತ್ಪನ್ನಗಳ ತಯಾರಿಕೆಗೆ ಹೆಚ್ಚಿನ ಅವಕಾಶಗಳಿದ್ದು ಹಾಗೂ ಹೇರಳವಾದ ಕಚ್ಚಾ ಸಾಮಗ್ರಿಗಳು ದೊರಕುವುದರಿಂದ, ಈ ವಲಯಕ್ಕೆ ಇನ್ನೂ ಹೆಚ್ಚಿನ ಉತ್ತೇಜನ

ನೀಡಲು, ಸೂಕ್ಷ್ಮ ಮತ್ತು ಸಣ್ಣ ತೆಂಗಿನ ನಾರಿನ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳಿಗೆ ಶೇ.10ರ ದರದಲ್ಲಿ ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ನೀಡಲಾಗುವುದು.

106. ಕೈಗಾರಿಕಾ ಪ್ರದೇಶ ಮತ್ತು ವಸಾಹತುಗಳ ನಿರ್ವಹಣೆ ಮತ್ತು ಉನ್ನತೀಕರಣಗೊಳಿಸಲು ಸುಸ್ಥಿರವಾದ ಸಾಂಸ್ಥಿಕ ನಿರ್ವಹಣಾ ವ್ಯವಸ್ಥೆ ಅಗತ್ಯವಿರುತ್ತದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಅಭಿವೃದ್ಧಿಪಡಿಸಿರುವ ಹಳೆಯ ಕೈಗಾರಿಕಾ ಪ್ರದೇಶ ಮತ್ತು ವಸಾಹತುಗಳನ್ನು ಕೈಗಾರಿಕಾ ಪಟ್ಟಣ ಪ್ರದೇಶಗಳನ್ನಾಗಿ ರಚಿಸಲಾಗುವುದು.

107. ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶಕ್ಕಾಗಿ ಕೃಷಿ ಭೂಮಿಯನ್ನು ಖರೀದಿಸುವ ಪ್ರಕ್ರಿಯೆಯು ದೀರ್ಘ ಸಮಯವನ್ನು ತೆಗೆದುಕೊಳ್ಳುತ್ತಿದೆ. ಈ ಸಮಯವನ್ನು ಕಡಿತಗೊಳಿಸುವ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶದಲ್ಲಿ ಲಭ್ಯವಿರುವ ಸುಮಾರು 100-200 ಎಕರೆ ಒಣ/ಬಂಜರು ಭೂಮಿಯನ್ನು ಗುರುತಿಸಿ, ಕೃಷಿ ಭೂಮಿ ಖರೀದಿ ಪ್ರಕ್ರಿಯೆಯನ್ನು ಸರಳೀಕೃತಗೊಳಿಸಲು ಅಧಿಸೂಚನೆ ಹೊರಡಿಸಲಾಗುವುದು. ಇದರಿಂದ ವಿವಿಧ ಕಡೆ ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳ ಬೆಳವಣಿಗೆಯೊಂದಿಗೆ ಉದ್ಯೋಗಾವಕಾಶವನ್ನು ಸೃಜಿಸಬಹುದಾಗಿರುತ್ತದೆ.

108. ರಾಜ್ಯದಲ್ಲಿನ ಎಲ್ಲಾ ಕಲ್ಲುಗಣಿ ಗುತ್ತಿಗೆದಾರರಿಗೆ ಅಥವಾ ಅವರ ಪ್ರತಿನಿಧಿಗಳಿಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಕಾಯ್ದೆ ಮತ್ತು ನಿಯಮಗಳ, ಗಣಿ ಸುರಕ್ಷಿತ ವಿಧಾನಗಳು (Mines Safety Measures), ಸ್ಫೋಟಕ ವಿಧಾನಗಳು, ಪರಿಸರ ಸಂರಕ್ಷಣೆ ಇತ್ಯಾದಿಗಳ ಕುರಿತು ಅಲ್ಪಾವಧಿ ತರಬೇತಿ ನೀಡುವುದು ಅವಶ್ಯವಿರುತ್ತದೆ. ಈ ಸಂಬಂಧ

"ಗಣಿಗಾರಿಕೆ ಹಾಗೂ ಗಣಿ ಸುರಕ್ಷತ ವಿಧಾನಗಳ ತರಬೇತಿ ಕೋರ್ಸ್"ನ್ನು ಆಯೋಜಿಸಿ ಪ್ರಮಾಣ ಪತ್ರಗಳನ್ನು ನೀಡಲು ಉದ್ದೇಶಿಸಲಾಗಿದೆ. ಈ ತರಬೇತಿಯನ್ನು ಹಾಲಿ ಚಾಲ್ತಿಯಲ್ಲಿರುವ ಕಲ್ಲು ಗಣಿಗುತ್ತಿಗೆದಾರರಿಗೆ ಹಾಗೂ ಹೊಸದಾಗಿ ಪರವಾನಗಿ ಪಡೆಯುವ ಗುತ್ತಿಗೆದಾರರಿಗೆ ಕಡ್ಡಾಯಗೊಳಿಸಲಾಗುವುದು.

109. ಸಾರ್ವಜನಿಕರಿಗೆ ಮತ್ತು ಕಾಮಗಾರಿ ಗುತ್ತಿಗೆದಾರರಿಗೆ ರಾಜ್ಯದಲ್ಲಿ ಚಾಲ್ತಿಯಿರುವ ಕಲ್ಲು ಗಣಿಗುತ್ತಿಗೆ ಮತ್ತು ಕ್ರಷರ್‌ಗಳ ಮಾಹಿತಿಯನ್ನು ತಿಳಿಸುವ App ಪರಿಚಯಿಸುವುದು ಅವಶ್ಯವಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಕಟ್ಟಡ ಕಲ್ಲು, ಜಲ್ಲಿ ಇತ್ಯಾದಿ ಉಪ ಖನಿಜಗಳು ಅಧಿಕೃತ ಕಲ್ಲು ಗಣಿಗಳಿಂದ ಸಗಟು ದರದಲ್ಲಿ ದೊರೆಯುವಂತೆ ಮಾಡಲಾಗುವುದು.

110. ಸಾರ್ವಜನಿಕರ ಗೃಹ ನಿರ್ಮಾಣ ಮತ್ತು ಇತರ ಕಾಮಗಾರಿಗಳಿಗೆ ಅವಶ್ಯವಿರುವ ಗುಣಮಟ್ಟದ ಮರಳು ಮತ್ತು ಜಲ್ಲಿ ಸ್ಪರ್ಧಾತ್ಮಕ ದರದಲ್ಲಿ ಸುಲಭವಾಗಿ ದೊರಕುವಂತೆ ಮಾಡಲು ದಾಸ್ತಾನು ಕೇಂದ್ರಗಳನ್ನು ಪ್ರಾರಂಭಿಸಲಾಗುವುದು.

111. ಜವಳಿ ಹಾಗೂ ಸಿದ್ಧ ಉಡುಪು ವಲಯದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಣೆ ಹಾಗೂ ಉದ್ಯೋಗ ಸೃಷ್ಟಿಗಾಗಿ ಮತ್ತು ಸಿದ್ಧ ಉಡುಪು ವಲಯಕ್ಕೆ ಹೆಚ್ಚು ಒತ್ತು ನೀಡುವ ಸಲುವಾಗಿ ಹೊಸ ಜವಳಿ ನೀತಿಯನ್ನು ಘೋಷಿಸಲಾಗುವುದು.

112. ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಡಿಸೈನ್ ಇವರ ಮೂಲಕ ಅತ್ಯಾಧುನಿಕ ಕೈಮಗ್ಗ ಕೇಂದ್ರವನ್ನು ಸ್ಥಾಪಿಸಿ ನೇಕಾರರಿಗೆ ಹೊಸ ವಿನ್ಯಾಸ ತಂತ್ರಜ್ಞಾನ ವರ್ಗಾವಣೆ ಮಾಡಲಾಗುವುದು.

113. ಸುಮಾರು ಒಂದು ಶತಮಾನದ ಹಿಂದೆ ಸ್ಥಾಪನೆಗೊಂಡಿರುವ ಹಾಸನ ನಗರದಲ್ಲಿರುವ ಕರ್ನಾಟಕ ಇಂಪ್ಲಿಮೆಂಟ್ ಮ್ಯಾನುಫ್ಯಾಕ್ಚರಿಂಗ್ ಕಂಪನಿಯಲ್ಲಿ (KIMCO) ಪ್ರಸ್ತುತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಕಾರ್ಯಾಗಾರವು ನಡೆಯುತ್ತಿದೆ. ಶತಮಾನದ ಹಿನ್ನೆಲೆಯುಳ್ಳ ಈ ಕಂಪೆನಿಯ ಪುನರುಜ್ಜೀವನ ಮತ್ತು ಆಧುನೀಕರಣಕ್ಕಾಗಿ 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

114. ಕರ್ನಾಟಕದಲ್ಲಿ ಕೆಲವು ಮಾದರಿಯ ಪ್ಲಾಸ್ಟಿಕ್ ಸಾಮಗ್ರಿಗಳ ಉತ್ಪಾದನೆ ಮತ್ತು ಮಾರಾಟವನ್ನು ನಿಷೇಧಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪ್ಲಾಸ್ಟಿಕ್ ಹೊರತುಪಡಿಸಿ ಜೈವಿಕವಾಗಿ ಕರಗುವ ವಸ್ತು ಬಳಸಿ ಪ್ಯಾಕಿಂಗ್ ಮಾಡುವ ತಂತ್ರಜ್ಞಾನವನ್ನು ಅಭಿವೃದ್ಧಿ ಪಡಿಸಿ ತರಬೇತಿ ನೀಡಲು ಪರ್ಯಾಯ ಪ್ಯಾಕಿಂಗ್ ತಂತ್ರಜ್ಞಾನ ಅಭಿವೃದ್ಧಿ ಸಂಸ್ಥೆ ತೆರೆಯಲು 5 ಕೋಟಿ ರೂ.ಗಳನ್ನು ಒದಗಿಸಿದ್ದೇನೆ.

## ಸಾರ್ವಜನಿಕ ಉದ್ದಿಮೆಗಳು

115. ಸಾರ್ವಜನಿಕ ಉದ್ದಿಮೆಗಳ ಇಲಾಖೆಯಡಿ ಬಹಳ ವರ್ಷಗಳಿಂದ ಲಾಭದಾಯಕ ಸ್ಥಿತಿಯಲ್ಲಿರುವ ಹಲವಾರು ಸಾರ್ವಜನಿಕ ಉದ್ಯಮಗಳು ಇವೆ. ಇಂತಹ ಉದ್ಯಮಗಳ ಲಾಭಾಂಶವನ್ನು ಸಾರ್ವಜನಿಕರೊಂದಿಗೆ ಹಂಚಿಕೊಳ್ಳಲು ಹಾಗೂ ಜನತೆಗೆ ಇಂತಹ ಕಂಪೆನಿಗಳ ಕುರಿತು ಆಸಕ್ತಿ ಮೂಡಿಸಿ ಅವರ ಭವಿಷ್ಯದ ಅಂಗವಾಗಿ ರೂಪಿಸುವ ನಿಟ್ಟಿನಲ್ಲಿ ಸರ್ಕಾರಿ ಸ್ವಾಮ್ಯದ 3 ಕಂಪೆನಿಗಳನ್ನು ಷೇರು ಮಾರುಕಟ್ಟೆಯ ಲಿಸ್ಟೆಡ್ ಕಂಪೆನಿಗಳ ಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು.

## ಇಂಧನ

116. ರಾಜ್ಯದಲ್ಲಿ 2018-19ನೇ ಸಾಲಿನಲ್ಲಿ ವಿದ್ಯುತ್ ಪ್ರಸರಣ ಜಾಲವನ್ನು ಬಲವರ್ಧನೆಗೊಳಿಸಲು 35 ವಿದ್ಯುತ್ ಉಪಕೇಂದ್ರಗಳನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಮೂಲಕ ಸ್ಥಾಪಿಸಲಾಗುವುದು. 75 ಉಪಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು.

117. ಬೆಂಗಳೂರು ನಗರದಲ್ಲಿ ಎಲ್ಲಾ Overhead ಮಾರ್ಗಗಳನ್ನು ಭೂಗತ ಮಾರ್ಗ (Underground Cable)ಗಳಾಗಿ ಪರಿವರ್ತಿಸಲು ವಿಸ್ತೃತ ಯೋಜನೆಯನ್ನು ತಯಾರಿಸಿ ಯೋಜನೆಯನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುವುದು.

## ವಸತಿ

118. ಈ ಹಿಂದೆ ಬೆಂಗಳೂರು ನಗರದ ಬಡವರಿಗೆ ವಸತಿ ಸೌಲಭ್ಯ ಒದಗಿಸಲು 'ಮುಖ್ಯಮಂತ್ರಿಯವರ ಒಂದು ಲಕ್ಷ ಮನೆಗಳು' ಎಂಬ ಯೋಜನೆಯನ್ನು ಜಾರಿಗೆ ತರಲಾಗಿತ್ತು. ಇದನ್ನು ಮುಂದಿನ ವರ್ಷಗಳಲ್ಲಿ ಎಲ್ಲಾ ನಗರಗಳಿಗೆ ವಿಸ್ತರಿಸಲು ಉದ್ದೇಶಿಸಲಾಗಿದೆ.

119. ಬೆಂಗಳೂರು ನಗರದಲ್ಲಿ ಬಡವರಿಗೆ ಮನೆಗಳನ್ನು ಒದಗಿಸುವಲ್ಲಿ ಇರುವ ತೊಂದರೆಗಳನ್ನು ನಿವಾರಿಸಲು ಆಯ್ದ ಸ್ಥಳಗಳಲ್ಲಿ ಬಹುಮಹಡಿ ಮನೆಗಳನ್ನು (ನೆಲಮಹಡಿ+14) ನಿರ್ಮಿಸಲು ನಮ್ಮ ಸರ್ಕಾರವು ಉದ್ದೇಶಿಸಿದೆ.

120. ರಾಜ್ಯದ ಕೊಳೆಗೇರಿಗಳಲ್ಲಿರುವ ಜನಸಂಖ್ಯೆ 40 ಲಕ್ಷಕ್ಕೂ ಅಧಿಕವಾಗಿದೆಯೆಂದು ಅಂದಾಜಿಸಲಾಗಿದೆ. ಕೊಳೆಗೇರಿ ಪ್ರದೇಶಗಳಲ್ಲಿ ಅಭಿವೃದ್ಧಿಪಡಿಸುವ ಹಕ್ಕನ್ನು ವರ್ಗಾಯಿಸುವ (ಟಿಡಿಆರ್) ಬದಲಿಗೆ ಹೆಚ್ಚುವರಿ ನೆಲಗಟ್ಟು ಪ್ರದೇಶದ ಅನುಪಾತ (ಎಫ್‌ಎಆರ್)

ಒದಗಿಸುವುದರ ಮೂಲಕ ಅವುಗಳನ್ನು ನಗರಪಾಲಿಕೆಗಳ ಪ್ರದೇಶಗಳಲ್ಲಿ ಖಾಸಗಿ ಸಾರ್ವಜನಿಕ ಸಹಭಾಗಿತ್ವದ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಬಗ್ಗೆ ವಿಸ್ತೃತವಾದ ಮಾರ್ಗಸೂಚಿಯನ್ನು 2019-20 ರಿಂದ ಜಾರಿಗೆ ತರಲಾಗುವುದು.

121. ಹಿಂದಿನ ಸರ್ಕಾರದ ಅವಧಿಯಲ್ಲಿ ಸುಮಾರು 14 ಲಕ್ಷ ಮನೆಗಳು ನಿರ್ಮಾಣವಾಗಿರುತ್ತವೆ. ನಮ್ಮ ಮೈತ್ರಿ ಸರ್ಕಾರವು ಇನ್ನಷ್ಟು ಉತ್ಸಾಹದಿಂದ ವಸತಿ ಯೋಜನೆಯನ್ನು ಮುಂದುವರೆಸಲು ಉದ್ದೇಶಿಸಿದ್ದು, ಬೇಡಿಕೆಗೆ ಅನುಗುಣವಾಗಿ ಮನೆಗಳ ನಿರ್ಮಾಣವನ್ನು ಮಾಡಲು ಸಂಕಲ್ಪ ತೊಟ್ಟಿದೆ.

122. ಪ್ರಸ್ತುತ ವಸತಿ ಯೋಜನೆಗಳಲ್ಲಿ ವಿಕಲಚೇತನರಿಗೆ ಶೇ.3 ರಷ್ಟು ಮೀಸಲಾತಿ ಇದ್ದು, ವಿಕಲಚೇತನ ಫಲಾನುಭವಿಗಳಿಗೆ "ಬೇಡಿಕೆಯ ಮೇರೆಗೆ" ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಪಡೆದು ಮನೆ ಹಂಚಿಕೆ ಮಾಡಲು ಉದ್ದೇಶಿಸಿದೆ.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

123. ರಾಜ್ಯ ಸರ್ಕಾರವು 85 LPCD ಯಂತೆ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರನ್ನು ಜೀವನದಿ ಅಥವಾ ಜಲಾಶಯಗಳಿಂದ ಪಡೆದು ಶುದ್ಧೀಕರಿಸಿ ಒದಗಿಸಲು "ಜಲಧಾರೆ" ಎಂಬ ಯೋಜನೆಯನ್ನು ಹಂತ ಹಂತವಾಗಿ ಸುಮಾರು 53,000 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಅನುಷ್ಠಾನ ಮಾಡಲು ನಿರ್ಧರಿಸಿದೆ. ಇದನ್ನು ಐದು ವರ್ಷಗಳಲ್ಲಿ ಅನುಷ್ಠಾನಗೊಳಿಸಿ ರಾಜ್ಯದ ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತವಾದ ಪರಿಹಾರವನ್ನು

ನೀಡಲು ನಮ್ಮ ಸರ್ಕಾರ ಯೋಜಿಸಿದೆ. ಈ ಬೃಹತ್ ಯೋಜನೆಯನ್ನು ಅನುಷ್ಠಾನಗೊಳಿಸಲು DPR ತಯಾರಿಸಲಾಗುವುದು.

124. ಶ್ರೀರಂಗಪಟ್ಟಣ ತಾಲ್ಲೂಕು ವ್ಯಾಪ್ತಿಯ ಮಹದೇವಪುರ, ಚಿಕ್ಕ ಅಂಕನಹಳ್ಳಿ, ಕೆ. ಶೆಟ್ಟಿಹಳ್ಳಿ ಹಾಗೂ ಇತರೆ 16 ಗ್ರಾಮಗಳಿಗೆ 24 ಕೋಟಿ ರೂ. ವೆಚ್ಚದಲ್ಲಿ ಮತ್ತು ಗಾಮನಹಳ್ಳಿ ಹಾಗೂ ಇತರೆ 13 ಗ್ರಾಮಗಳಿಗೆ 18.90 ಕೋಟಿ ರೂ. ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು.

## ಜಲ ಸಂಪನ್ಮೂಲ

125. ಪ್ರಸ್ತುತ ಮೇಕೆದಾಟು ಕುರಿತಂತೆ ಪೂರ್ವ ಕಾರ್ಯಸಾಧ್ಯತಾ ವರದಿ (Pre-feasibility Report) ಪ್ರಸ್ತಾವನೆಗೆ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದ್ದು, ಇದನ್ನು ಚುರುಕುಗೊಳಿಸಿ, ತೀರುವಳಿ ಪಡೆದು ಯೋಜನೆಯನ್ನು ಕಾರ್ಯಗತಗೊಳಿಸಲು ಕ್ರಮ ವಹಿಸಲಾಗುವುದು.

126. ಕೃಷ್ಣರಾಜಸಾಗರ ಆಣೆಕಟ್ಟೆಯ ಬೃಂದಾವನ ಉದ್ಯಾನವನವು ಎಂಭತ್ತರ ದಶಕದಲ್ಲಿ ರಾಷ್ಟ್ರ ಖ್ಯಾತಿ ಗಳಿಸಿತ್ತು. ಇತ್ತೀಚಿನ ವರ್ಷಗಳಲ್ಲಿ ಇದು ಕಳೆಗುಂದಿದೆ. ಇದರ ವೈಭವವನ್ನು ಮರುಕಳಿಸಲು ನಮ್ಮ ಸರ್ಕಾರ ಉದ್ದೇಶಿಸಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅಮೆರಿಕಾದ ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಕೆ.ಆರ್.ಎಸ್.ನ್ನು ಅಭಿವೃದ್ಧಿಪಡಿಸಲಾಗುವುದು. ಈ ಯೋಜನೆಗೆ ಬಂಡವಾಳ ಹೂಡಲು ವಿಶ್ವಮಟ್ಟದ ಉದ್ಯಮಿಗಳು ಉತ್ಸುಕರಾಗಿದ್ದಾರೆ. ಇದರ ವಿವರವಾದ ಕಾರ್ಯಯೋಜನೆ ಸಿದ್ಧಪಡಿಸಲು 5 ಕೋಟಿ ರೂ.ಗಳನ್ನು ಒದಗಿಸಲಾಗುವುದು.

127. ಮಹದಾಯಿ ನದಿ ವಿವಾದದ ನ್ಯಾಯಾಧೀಕರಣ ತೀರ್ಪು ಆಗಸ್ಟ್ 2018ರಲ್ಲಿ ಬರುವ ನಿರೀಕ್ಷೆ ಇದ್ದು, ರಾಜ್ಯಕ್ಕೆ ತನ್ನ ಪಾಲಿನ ನೀರಿನ ಹಂಚಿಕೆಯನ್ನು ಪಡೆಯುವ ವಿಶ್ವಾಸವಿದೆ. ನ್ಯಾಯಾಧೀಕರಣ ತೀರ್ಪಿನ ಅನ್ವಯ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

128. ಕೃಷ್ಣಾ ಮೇಲ್ದಂಡೆ ಯೋಜನೆ 3ನೇ ಹಂತದ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾರ್ಯವನ್ನು ತ್ವರಿತ ಗತಿಯಲ್ಲಿ ಕೈಗೆತ್ತಿಕೊಳ್ಳಲಾಗುವುದು ಹಾಗೂ ಆಲಮಟ್ಟಿ ಜಲಾಶಯದಲ್ಲಿ ಹೆಚ್ಚುವರಿ ನೀರು ಸಂಗ್ರಹಣೆ ಮಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

129. ಪ್ರಸ್ತುತ ಪ್ರಗತಿಯಲ್ಲಿರುವ ಎಲ್ಲಾ ನೀರಾವರಿ ಯೋಜನೆಗಳನ್ನು ಮುಂದಿನ 5 ವರ್ಷಗಳಲ್ಲಿ ಪೂರ್ಣಗೊಳಿಸಲು ಸರ್ಕಾರ ಉದ್ದೇಶಿಸಿದೆ.

## ಸಣ್ಣ ನೀರಾವರಿ

130. ಹೇಮಾವತಿ ನದಿಯಿಂದ ಹಾಸನ ತಾಲ್ಲೂಕು ದುದ್ಧ ಮತ್ತು ಶಾಂತಿಗ್ರಾಮ ಹೋಬಳಿ ವ್ಯಾಪ್ತಿಯಲ್ಲಿ ಬರುವ 160 ಕೆರೆಗಳಿಗೆ ಕುಡಿಯುವ ನೀರಿಗಾಗಿ ಕೆರೆಗಳನ್ನು ತುಂಬಿಸುವ ಯೋಜನೆಯನ್ನು 70 ಕೋಟಿ ರೂ. ವೆಚ್ಚದಲ್ಲಿ ರೂಪಿಸಲಾಗುವುದು.

131. ಮಂಡ್ಯ ಜಿಲ್ಲೆಯ ಲೋಕಪಾವನಿ ನದಿಯಿಂದ ದುದ್ಧ ಹಾಗೂ ಇತರೆ ಕೆರೆಗಳಿಗೆ ನೀರು ತುಂಬಿಸಲು ಹಾಗೂ ಮಂಡ್ಯ ತಾಲ್ಲೂಕಿನ ಗ್ರಾಮಗಳ ಗ್ರಾಮಸ್ಥರಿಗೆ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು 30 ಕೋಟಿ ರೂ.ಗಳ ಅನುದಾನದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ.

132. ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಹಿರೇಕೊಡಿ, ನಾಗರಾಳ, ನೇಜ ಇತ್ಯಾದಿ ಗ್ರಾಮಗಳ ಸುಮಾರು 10,225 ಹೆಕ್ಟೇರ್

ಪ್ರದೇಶದ ಜಮೀನುಗಳ ನೀರಾವರಿ ಸೌಲಭ್ಯಕ್ಕಾಗಿ ಕೃಷ್ಣಾ ನದಿಯಿಂದ 100 ಕೋಟಿ ರೂ.ಗಳ ವೆಚ್ಚದಲ್ಲಿ ಏತ ನೀರಾವರಿ ಯೋಜನೆ ಕೈಗೊಳ್ಳಲು ಉದ್ದೇಶಿಸಲಾಗಿದೆ.

**ಕಂದಾಯ**

133. ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ನಮ್ಮ ಸರ್ಕಾರವು ಬದ್ಧವಾಗಿದೆ. ಬಡಜನರು ವೃದ್ಧಾಪ್ಯದಲ್ಲಿ ತೊಂದರೆ ಅನುಭವಿಸಬಾರದು ಎನ್ನುವುದು ನಮ್ಮ ಆಶಯವಾಗಿದೆ. ಈ ನಿಟ್ಟಿನಲ್ಲಿ ಪ್ರಸ್ತುತ ಸಂಧ್ಯಾ ಸುರಕ್ಷಾ ಯೋಜನೆಯಡಿಯಲ್ಲಿ ಫಲಾನುಭವಿಗಳು ಪಡೆಯುತ್ತಿರುವ 600 ರೂ.ಗಳ ಮಾಸಾಶನವನ್ನು 1000 ರೂ.ಗಳಿಗೆ ಹೆಚ್ಚಿಸಿ, 1ನೇ ನವೆಂಬರ್ 2018ರಿಂದ ಜಾರಿಗೊಳಿಸಲಾಗುವುದು. ಇದರಿಂದಾಗಿ 65 ವರ್ಷ ಮೀರಿದ 32.92 ಲಕ್ಷ ವೃದ್ಧರು ಆರ್ಥಿಕ ಪ್ರಯೋಜನ ಪಡೆಯಲಿದ್ದಾರೆ. ಈ ಮೊತ್ತವನ್ನು ಮುಂದಿನ 5 ವರ್ಷಗಳಲ್ಲಿ ಹಂತಹಂತವಾಗಿ ಹೆಚ್ಚಿಸಲಾಗುವುದು. ಈ ಉದ್ದೇಶಕ್ಕಾಗಿ ಈ ಸಾಲಿನ ಆಯವ್ಯಯದಲ್ಲಿ ಹೆಚ್ಚುವರಿಯಾಗಿ 660 ಕೋಟಿ ರೂ.ಗಳನ್ನು ಒದಗಿಸಲಾಗುವುದು.

134. ರಾಜ್ಯದಲ್ಲಿ ಮರು ಭೂ ಮಾಪನ ಕಾರ್ಯವನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು. ಈ ವರ್ಷ ಐದು ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗುವುದು.

135. ನಾಡಕಛೇರಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಮೊದಲನೆ ಹಂತವಾಗಿ 50 ನಾಡಕಛೇರಿಗಳಿಗೆ ತಲಾ 20 ಲಕ್ಷ ರೂ.ಗಳಂತೆ 10 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು.

## ಮುಜರಾಯಿ

136. ಬ್ರಾಹ್ಮಣ ಸಮುದಾಯದಲ್ಲಿ ಆರ್ಥಿಕವಾಗಿ ಹಿಂದುಳಿದವರ ಅಭಿವೃದ್ಧಿಗಾಗಿ ನೆರವು ನೀಡಬೇಕೆಂದು ಈ ಸಮುದಾಯದ ಬಹಳ ದಿನಗಳ ಬೇಡಿಕೆಯಾಗಿದೆ. ನಮ್ಮ ಸರ್ಕಾರವು ಬ್ರಾಹ್ಮಣ ಸಮುದಾಯದಲ್ಲಿ ಆರ್ಥಿಕವಾಗಿ ಹಿಂದುಳಿದವರ ಅಭಿವೃದ್ಧಿಗಾಗಿ "ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ"ಯನ್ನು ಸ್ಥಾಪಿಸಲಿದ್ದು, ಇದಕ್ಕೆ 25 ಕೋಟಿ ರೂ.ಗಳನ್ನು ಒದಗಿಸಲಿದೆ.

## ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ

137. ರಾಜ್ಯದಲ್ಲಿ ದಿನೇ ದಿನೇ ಹೆಚ್ಚುತ್ತಿರುವ ವಾಯುಮಾಲಿನ್ಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಖನಿಜ ನಿಧಿಯ ಅನುದಾನದಡಿಯಲ್ಲಿ 96 ಕೋಟಿ ರೂ. ವೆಚ್ಚದಲ್ಲಿ 42 ನಿರಂತರ ಪರಿವೇಷ್ಟಕ ವಾಯುಗುಣಮಟ್ಟ ಮಾಪನ ಕೇಂದ್ರಗಳನ್ನು (Continuous Ambient Air Quality Monitoring Stations) ಸ್ಥಾಪಿಸಲು ಉದ್ದೇಶಿಸಲಾಗಿದೆ.

138. ಇತ್ತೀಚಿನ ವರ್ಷಗಳಲ್ಲಿ ಕರ್ನಾಟಕದಲ್ಲಿ ಅರಣ್ಯ ಪ್ರಮಾಣ ಕೊಂಚ ಚೇತರಿಕೆಯಾಗುತ್ತಿದೆ. ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡುವ ನಿಟ್ಟಿನಲ್ಲಿ ರಾಜ್ಯದಲ್ಲಿ ಸಾಮಾಜಿಕ ಅರಣ್ಯ ಬೆಳವಣಿಗೆಗೆ ಹೆಚ್ಚು ಒತ್ತು ನೀಡಲು ನಾನು ನಿರ್ಧರಿಸಿದ್ದೇನೆ. ರಾಜ್ಯದಲ್ಲಿರುವ ಸಣ್ಣ ಪುಟ್ಟ ಬೆಟ್ಟ-ಗುಡ್ಡಗಳು, ಗೋಮಾಳಗಳು ಮತ್ತು ಕೆರೆಗಳ ಸುತ್ತುಮುತ್ತಲಿನ ಸರ್ಕಾರಿ ಜಮೀನುಗಳಲ್ಲಿ ಆಯಾ ಪ್ರದೇಶಕ್ಕೆ ಸೂಕ್ತವಾದ ಮರಗಿಡಗಳನ್ನು ವ್ಯಾಪಕವಾಗಿ ಬೆಳೆಸುವ "ಹಸಿರು ಕರ್ನಾಟಕ" ಯೋಜನೆಯನ್ನು ಆಂದೋಲನದ ಮಾದರಿಯಲ್ಲಿ

ಅನುಷ್ಠಾನಗೊಳಿಸಲಾಗುವುದು. ಶಾಲಾ ಕಾಲೇಜು ವಿದ್ಯಾರ್ಥಿಗಳು, ಪರಿಸರ ಸಂಘಟನೆಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಲಿದ್ದಾರೆ. ಮನೆಗೊಂದು ಮರ, ಊರಿಗೊಂದು ತೋಪು, ತಾಲ್ಲೂಕಿಗೊಂದು ಕಿರು ಅರಣ್ಯ, ಜಿಲ್ಲೆಗೊಂದು ಕಾಡು ಎನ್ನುವುದು "ಹಸಿರು ಕರ್ನಾಟಕ"ದ ಧ್ಯೇಯವಾಗಲಿದೆ. ಈ ನಿಟ್ಟಿನಲ್ಲಿ ಬೃಹತ್ ಪ್ರಮಾಣದಲ್ಲಿ ಬೀಜ ಸಹಿತ ಮಣ್ಣಿನುಂಡೆಗಳ ಬಿತ್ತನೆ ಹಾಗೂ ಸಸಿಗಳನ್ನು ನೆಡಲು ಅನುಕೂಲವಾಗುವಂತೆ ಸರ್ಕಾರ ಮತ್ತು ಸಂಘ ಸಂಸ್ಥೆಗಳು ಹಮ್ಮಿಕೊಳ್ಳುವ ಯೋಜನೆಗೆ ನೆರವು ನೀಡಲು 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

139. ಸಾಮಾನ್ಯವಾಗಿ 750 ಮಿಲಿಮೀಟರ್‌ಗಿಂತ ಹೆಚ್ಚು ಮಳೆ ಬೀಳುವ ಪ್ರದೇಶಗಳಲ್ಲಿ ಮಾನವ ಹಸ್ತಕ್ಷೇಪವಾಗದಂತೆ ಬೆಟ್ಟ ಗುಡ್ಡಗಳಿಗೆ ಕೇವಲ ಬೇಲಿ ಸಂರಕ್ಷಣೆ ಮಾಡಿದರೂ ಸಾಕು, ಅರಣ್ಯ ಪ್ರದೇಶ ತನ್ನಿಂದ ತಾನೇ ವೃದ್ಧಿಯಾಗುತ್ತದೆ ಎನ್ನುವುದು ಅರಣ್ಯ ತಜ್ಞರ ಸಾಮಾನ್ಯ ಅಭಿಪ್ರಾಯ. ಇದಕ್ಕೆ ಬೆಂಬಲವಾಗಿ ನಾನು ರಾಜ್ಯದಲ್ಲಿನ ಇಂತಹ ಪ್ರದೇಶಗಳಲ್ಲಿರುವ ಸರ್ಕಾರಿ ಬೆಟ್ಟ ಗುಡ್ಡದ ಜಮೀನುಗಳಿಗೆ ಬೇಲಿ ಸಂರಕ್ಷಣೆ ಮಾಡಿ ಅರಣ್ಯ ವೃದ್ಧಿಯಾಗಲು ಅನುಕೂಲವಾಗುವಂತೆ 40 ಕೋಟಿ ರೂ.ಗಳನ್ನು ಒದಗಿಸಲಿದ್ದೇನೆ.

## ಸಾರಿಗೆ

140. ಯಾವುದೇ ನಗರದಲ್ಲಿ ಸಾರ್ವಜನಿಕ ಸಾರಿಗೆ ಸೇವೆಯು ಪ್ರಮುಖ ಪಾತ್ರ ವಹಿಸುತ್ತದೆ. ಜನರ ಜೀವನ ಮಟ್ಟವು ಆ ನಗರದ ಸುಗಮ ಸಂಚಾರ ಮತ್ತು ಸಾರಿಗೆ ಸೌಲಭ್ಯದ ಲಭ್ಯತೆಯನ್ನು ಅವಲಂಬಿಸಿರುತ್ತದೆ. ಬೆಂಗಳೂರಿನ ಸಾರಿಗೆ ಸೇವೆಯ ಸಮಗ್ರ ಸುಧಾರಣೆಗಾಗಿ ನನ್ನ ಅಧ್ಯಕ್ಷತೆಯಲ್ಲಿ ಏಕೀಕೃತ ಭೂ ಸಾರಿಗೆ

ಪ್ರಾಧಿಕಾರವನ್ನು ಸ್ಥಾಪಿಸಲು ಉದ್ದೇಶಿಸಿದ್ದೇನೆ. ಈ ಪ್ರಾಧಿಕಾರವು ಭೂ ಸಾರಿಗೆಗೆ ಸಂಬಂಧಿಸಿದ BMRCL, BMTC, BDA, BBMP ಇತ್ಯಾದಿ ಸಂಸ್ಥೆಗಳ ನಡುವೆ ಸಮನ್ವಯ ವಹಿಸಿ ಕೈಗೆಟಕುವ ದರದಲ್ಲಿ ಅಡೆತಡೆಗಳಿಲ್ಲದ ಅನುಕೂಲಕರ ಸಾರಿಗೆ ವ್ಯವಸ್ಥೆಯನ್ನು ರೂಪಿಸಲು ಸಮಗ್ರ ಕಾರ್ಯತಂತ್ರ ಹಾಗೂ ಕ್ರಿಯಾ ಯೋಜನೆಯನ್ನು ರೂಪಿಸುತ್ತದೆ.

141. ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಸಮಸ್ಯೆಯನ್ನು ನಿವಾರಿಸಲು ನಮ್ಮ ಸರ್ಕಾರವು ಸಾರ್ವಜನಿಕ ಸಾರಿಗೆ ಸೇವೆಯನ್ನು ಬಲಪಡಿಸಲು ನಿರ್ಧರಿಸಿದೆ. ನಗರ ಸಾರ್ವಜನಿಕ ಸಾರಿಗೆ ಸಂಸ್ಥೆಯು ಕೇವಲ ಪ್ರಯಾಣ ದರ ಸಂಗ್ರಹದಿಂದ ನಡೆಯಲು ಸಾಧ್ಯವಿಲ್ಲ. ಆದ್ದರಿಂದ ನನ್ನ ಸರ್ಕಾರವು ಈ ನಿಟ್ಟಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ 100 ಕೋಟಿ ರೂ.ಗಳ ನೇರ ಸಹಾಯಧನವನ್ನು ನೀಡಲು ತೀರ್ಮಾನಿಸಿದೆ.

142. ಬೆಂಗಳೂರು ನಗರದಲ್ಲಿ ಏರುತ್ತಿರುವ ವಾಯು ಮಾಲಿನ್ಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆಯನ್ನು ಪ್ರೋತ್ಸಾಹಿಸಲು 4 ಕೋಟಿ ರೂ. ವೆಚ್ಚದಲ್ಲಿ 100 ಚಾರ್ಜಿಂಗ್ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಿದೆ.

143. ಸಾರಿಗೆ ಸಂಸ್ಥೆಗಳು ಸಾರ್ವಜನಿಕರ ಉಪಯೋಗಕ್ಕಾಗಿ 4236 ಹೊಸ ಬಸ್‌ಗಳನ್ನು ಖರೀದಿಸಲು ಉದ್ದೇಶಿಸಿದೆ. ಈ ಪೈಕಿ ಕರ್ನಾಟಕ ಸರ್ಕಾರದ ವಿದ್ಯುತ್ ವಾಹನ ನೀತಿ–2017ರಡಿ ಎಲೆಕ್ಟ್ರಿಕ್ ಬಸ್‌ಗಳನ್ನು ಬಳಸುವ ನಿಟ್ಟಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ 80 ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲಾಗುವುದು.

## ಇ–ಆಡಳಿತ

144. ಸಾರ್ವಜನಿಕರ ಕುಂದು ಕೊರತೆಗಳ ನಿರ್ವಹಣೆಯು ನನ್ನ ಸರ್ಕಾರದ ಪ್ರಥಮ ಆದ್ಯತೆಯಾಗಿದೆ. ಪ್ರಸ್ತುತ ಇರುವ ಎಲ್ಲಾ ಉಪ ವ್ಯವಸ್ಥೆಗಳನ್ನು ಜೋಡಿಸಿ, ಕರ್ನಾಟಕದಲ್ಲಿ ಕ್ರೋಢೀಕೃತ ಕುಂದು ಕೊರತೆ ನಿವಾರಣಾ ವ್ಯವಸ್ಥೆಯನ್ನು ಸೃಜಿಸಲು ನಾನು ಬಯಸುತ್ತೇನೆ. ಇದು ವ್ಯವಸ್ಥೆಯ ಮೇಲೆ ಹೆಚ್ಚಿನ ಮೇಲ್ವಿಚಾರಣೆಯನ್ನು ಹೊಂದಿರುವುದು. ಕ್ರೋಢಿಕೃತ ಕುಂದು ಕೊರತೆ ನಿವಾರಣಾ ವ್ಯವಸ್ಥೆಯು, ಸಿಬ್ಬಂದಿಗಳನ್ನು ಕುಂದು ಕೊರತೆಗಳಿಗೆ ಜವಾಬ್ದಾರರನ್ನಾಗಿ ಮಾಡುತ್ತದೆ. ಎಲ್ಲಾ ಇಲಾಖೆಗಳ ಕುಂದು ಕೊರತೆಗಳನ್ನು ಒಳಗೊಳ್ಳುವ ಏಕೈಕ ವ್ಯವಸ್ಥೆಯು ನಾಗರೀಕರಿಗೆ ತುಂಬಾ ಸಹಕಾರಿ. ಈ ಬಹು ಮಾದರಿ ವ್ಯವಸ್ಥೆಯು ನಾಗರೀಕರು ತಮ್ಮ ಕುಂದು ಕೊರತೆಗಳನ್ನು ಕಾಲ್ ಸೆಂಟರ್, ಮೊಬೈಲ್ ಅನ್ವಯಿಕೆಗಳು, ವೆಬ್ ಅನ್ವಯಿಕೆಗಳು ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ನೊಂದಾಯಿಸಲು ಅನುಮತಿಸುತ್ತದೆ.

145. ನಾನು ಗ್ರಾಮ ಪಂಚಾಯಿತಿ ಮಟ್ಟದವರೆಗೆ ವಿಡಿಯೋ ಸಂವಹನ ಸೌಲಭ್ಯವನ್ನು ನೀಡಲು ಬಯಸುತ್ತೇನೆ. ಇದರಿಂದ ನಾಗರಿಕರು ಬೆಂಗಳೂರಿಗೆ ಪ್ರಯಾಣ ಮಾಡದೆ ನನ್ನೊಂದಿಗೆ ಸಂವಹನ ನಡೆಸಬಹುದಾಗಿರುತ್ತದೆ. ಇಲಾಖೆಗಳ ಅಧಿಕಾರಿಗಳು ಈ ಸೌಲಭ್ಯವನ್ನು ತಮ್ಮ ಪರಿಶೀಲನೆಗೆ ಬಳಕೆ ಮಾಡಬಹುದಾಗಿದೆ.

146. PDS ದತ್ತ ಸಂಚಯವನ್ನು ವಿಸ್ತರಿಸಿ ಸರ್ಕಾರದ ವಿವಿಧ ಕುಟುಂಬ ಆಧಾರಿತ ಸವಲತ್ತುಗಳನ್ನು ಒದಗಿಸಲು ಕುಟುಂಬ ಗುರುತನ್ನು (Family ID) ಸೃಜಿಸಲಾಗುವುದು. ಇದು ವಸತಿ ಸೌಲಭ್ಯ, ಆರೋಗ್ಯ ವಿಮೆ, ವಿದ್ಯಾರ್ಥಿ ವೇತನ, ವಿವಿಧ ಇಲಾಖೆಗಳ

ಕಾರ್ಯಕ್ರಮಗಳು, ವಿಧವಾ ವೇತನ ಮುಂತಾದವುಗಳಿಗೆ ಉಪಯುಕ್ತವಾಗಿದೆ. ಈ ವ್ಯವಸ್ಥೆಯು ನಾಗರಿಕರಿಗೆ ವಿವಿಧ ಕಾರ್ಯಕ್ರಮಗಳ ಸವಲತ್ತು ಅಥವಾ ಸಬ್ಸಿಡಿಗಳನ್ನು ಅರ್ಜಿ ಸಲ್ಲಿಸದೆ ಸ್ವಯಂಚಾಲಿತವಾಗಿ ಪಡೆಯಲು ಸಹಕಾರಿಯಾಗಿದೆ.

## ಕನ್ನಡ ಮತ್ತು ಸಂಸ್ಕೃತಿ

147. ಆದಿ ಶಂಕರಾಚಾರ್ಯರು ನಮ್ಮ ಧಾರ್ಮಿಕ ಪರಂಪರೆಯ ಮೇರು ವ್ಯಕ್ತಿಗಳಾಗಿದ್ದಾರೆ. ಇವರ ಗೌರವಾರ್ಥ ರಾಜ್ಯಾದ್ಯಂತ ಆದಿ ಶಂಕರಾಚಾರ್ಯರ ಜಯಂತಿಯನ್ನು ಆಚರಿಸಲಾಗುವುದು.

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ

148. ಡಾ॥ ರಾಜ್‌ಕುಮಾರ್ ಸ್ಮರಣಾರ್ಥ ಶ್ರೀ ಕಂಠೀರವ ಸ್ಟುಡಿಯೋ ಆವರಣದಲ್ಲಿ ಸುಸಜ್ಜಿತವಾದ ಯೋಗ ಕೇಂದ್ರ ಸ್ಥಾಪಿಸಲಾಗುವುದು.

149. ಚಲನಚಿತ್ರ ಉದ್ಯಮವು ಬೃಹತ್ ಪ್ರಮಾಣದಲ್ಲಿ ಬೆಳೆಯುತ್ತಿದೆ. ಚಲನಚಿತ್ರ ನಿರ್ಮಾಣಕ್ಕೆ ಸಂಬಂಧಿಸಿದಂತೆ ಚಿತ್ರದ ತಯಾರಿಕೆ ಬಗ್ಗೆ, ನಿರ್ದೇಶನ, ಛಾಯಾಚಿತ್ರ, ಧ್ವನಿ, ಸಂಕಲನ ಇತ್ಯಾದಿ ವಿಷಯಗಳಲ್ಲಿ ತರಬೇತಿ ನೀಡಿದಲ್ಲಿ ಚಿತ್ರೋದ್ಯಮಕ್ಕೆ ಸಾಕಷ್ಟು ಅನುಕೂಲವಾಗುತ್ತದೆ. ಈ ಹಿನ್ನೆಲೆಯಲ್ಲಿ ರಾಮನಗರದಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಚಲನಚಿತ್ರ ವಿಶ್ವವಿದ್ಯಾನಿಲಯವನ್ನು ತೆರೆಯಲು 30 ಕೋಟಿ ರೂ.ಗಳ ಬಂಡವಾಳ ನೀಡಲು ಉದ್ದೇಶಿಸಿರುತ್ತೇನೆ. ಇದಲ್ಲದೆ, ರಾಮನಗರದ ಫಿಲ್ಮ್‌ಸಿಟಿಯಲ್ಲಿ ಛಾಯಾಚಿತ್ರ, ಸಂಕಲನ, ಸೌಂಡ್ ರೆಕಾರ್ಡಿಂಗ್ ಮಾಡುವ ಸಂಸ್ಥೆ, ಅನಿಮೇಷನ್ ಸ್ಟುಡಿಯೋಗಳು, ಕಂಪ್ಯೂಟರ್ ಗ್ರಾಫಿಕ್ ಸ್ಟುಡಿಯೋಗಳು ಚಲನಚಿತ್ರ ರಂಗಕ್ಕೆ ಸೇವೆ ಸಲ್ಲಿಸುವ ಉದ್ಯಮಗಳಿಗೆ ಪ್ರೋತ್ಸಾಹ ನೀಡಲು 40 ಕೋಟಿ ರೂ.ಗಳ

ಬಂಡವಾಳ ಹೂಡಿಕೆ ಮಾಡಲು ಇಚ್ಛಿಸಿರುತ್ತೇನೆ. ಇದಲ್ಲದೆ, ಹೊರದೇಶದಿಂದ ಚಿತ್ರ ನಿರ್ಮಾಣಕ್ಕಾಗಿ ಬರುವ ಕಲಾವಿದರು ಮತ್ತು ತಂತ್ರಜ್ಞರಿಗೆ ವಸತಿ ಹಾಗೂ ಇನ್ನಿತರೆ ಅವಶ್ಯಕ ಮೂಲಭೂತ ಸೌಲಭ್ಯಗಳ ನಿರ್ಮಾಣಕ್ಕಾಗಿ 20 ಕೋಟಿ ರೂ.ಗಳನ್ನು ನೀಡುತ್ತೇನೆ.

## ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ

150. ಹೆಸರಾಂತ ಶಿಕ್ಷಣ ತಜ್ಞ ಹಾಗೂ ವಿಜ್ಞಾನ ಪ್ರೋತ್ಸಾಹಕರಾದ ಪದ್ಮಭೂಷಣ ಡಾ|| ಎಚ್. ನರಸಿಂಹಯ್ಯರವರ ಸ್ಮರಣಾರ್ಥ ಅಂತರರಾಷ್ಟ್ರೀಯ ವಿಜ್ಞಾನ ಕೇಂದ್ರವನ್ನು ಅವರ ಹುಟ್ಟೂರಾದ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಹೊಸೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿದೆ. ಈ ಕೇಂದ್ರವನ್ನು ಮಕ್ಕಳಿಗೆ ಸ್ವಯಂ-ಪರಿಶೋಧನೆಯ ಮೂಲಕ ಸೀಮಾರಹಿತವಾದ ಜ್ಞಾನವನ್ನು ಹೊಂದಲು ಸಹಕರಿಸುವ ನೋಡಲ್ ಸಂಸ್ಥೆಯಾಗಿ ಅಭಿವೃದ್ಧಿಪಡಿಸಲಾಗುವುದು. ಮಕ್ಕಳು ಎಲ್ಲಾ ಆಯಾಮಗಳಲ್ಲಿಯೂ ವಿಜ್ಞಾನವನ್ನು ಗಮನಿಸುವಂತೆ ಹಾಗೂ ವಿಜ್ಞಾನವನ್ನು ಅವರ ಜೀವನದ ಪ್ರಮುಖ ಭಾಗವಾಗಿ ಅಳವಡಿಸುವುದು ಈ ಕೇಂದ್ರದ ಮುಖ್ಯ ಧ್ಯೇಯೋದ್ದೇಶವಾಗಿದೆ. ಈ ಕೇಂದ್ರವನ್ನು ಖಾಸಗಿ ಸಹಭಾಗಿತ್ವದೊಂದಿಗೆ ನಿರ್ವಹಿಸಲು ಉದ್ದೇಶಿಸಿದ್ದು, ಆಸಕ್ತ ಖಾಸಗಿ ಸಂಸ್ಥೆಗಳನ್ನು ಭಾಗೀದಾರಿಕೆಗಾಗಿ ಆಹ್ವಾನಿಸಲಾಗುವುದು.

## ಲೋಕೋಪಯೋಗಿ

151. ಹಾಸನ ನಗರವು ತೀವ್ರವಾಗಿ ಬೆಳವಣಿಗೆಯಾಗುತ್ತಿದ್ದು, ಸುಗಮ ಸಂಚಾರಕ್ಕಾಗಿ ಹಾಸನ ನಗರದ ಸುತ್ತ 30 ಕೋಟಿ ರೂ. ವೆಚ್ಚದಲ್ಲಿ ವರ್ತುಲ ರಸ್ತೆ ನಿರ್ಮಿಸಲಾಗುವುದು.

# ನಗರಾಭಿವೃದ್ಧಿ

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

152. ಇಂದಿನ ಬೆಂಗಳೂರು ನಗರ ವಿಶ್ವಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ, ಟೆಲಿಕಾಮ್, ಇ-ಕಾಮರ್ಸ್ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಇತ್ಯಾದಿ ಕ್ಷೇತ್ರಗಳಲ್ಲಿ ಹೆಸರು ಮಾಡಿದೆ. ಭಾರತದ ಐದನೆಯ ಅತಿ ದೊಡ್ಡ ನಗರ ಕೂಡ ಆಗಿದೆ. ಇಷ್ಟೆಲ್ಲಾ ಸಾಧನೆ ಇದ್ದರೂ ಸಹ ಬೆಂಗಳೂರಿನ ಸಂಚಾರಿ ವ್ಯವಸ್ಥೆ ನಗರದ ಬೆಳವಣಿಗೆಗೆ ಸಮನಾಗಿ ಬೆಳೆದಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಬೆಂಗಳೂರಲ್ಲಿ ಉತ್ತಮ ಸಾರಿಗೆ ಸಂಪರ್ಕವನ್ನು ಏರ್ಪಡಿಸಲು ಒಂದಕ್ಕೊಂದು ಸಂಪರ್ಕ ಹೊಂದಿರುವ ಆರು ಎಲಿವೇಟೆಡ್ ಕಾರಿಡಾರ್‌ಗಳನ್ನು ಮುಂದಿನ ನಾಲ್ಕು ವರ್ಷಗಳಲ್ಲಿ ಹೈಬ್ರೀಡ್ ಅನ್ಯೂಟಿ ಪ್ರಕಾರದಲ್ಲಿ 15,825 ಕೋಟಿ ರೂ.ಗಳಲ್ಲಿ ನಿರ್ಮಿಸಲು ಯೋಜಿಸಿದೆ. ಈ ಯೋಜನೆ ಸಂಪೂರ್ಣವಾಗಿ ಎಲಿವೇಟೆಡ್ ಕಾರಿಡಾರ್ ಆಗಿರುವುದರಿಂದ ಹಾಗೂ ಬೆಂಗಳೂರು ಮೆಟ್ರೋ ಯೋಜನೆಯನ್ನು ಗಮನದಲ್ಲಿರಿಸಿಕೊಂಡು ನಿರ್ಮಿಸಲಾಗುವುದರಿಂದ ಬೆಂಗಳೂರಿನ ಸಂಪರ್ಕ ವ್ಯವಸ್ಥೆಗೆ ಇದು ಅತ್ಯುತ್ತಮ ಕೊಡುಗೆಯಾಗಿರುತ್ತದೆ. ಈ ಯೋಜನೆಯನ್ನು KRDCL ಮುಖಾಂತರ ಹೈಬ್ರಿಡ್ ಅನ್ಯೂಟಿ ಮುಖಾಂತರ ಕೈಗೆತ್ತಿಕೊಳ್ಳಲಾಗುವುದು. ಈ ಯೋಜನೆಗಾಗಿ ಪ್ರಸಕ್ತ ಸಾಲಿನಲ್ಲಿ 1000 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

## ಬೆಂಗಳೂರು ಮೆಟ್ರೋ ರೈಲು ನಿಗಮ

153. ಬೆಂಗಳೂರಿನ 'ನಮ್ಮ ಮೆಟ್ರೋ' ರೈಲು ಯೋಜನೆ ಹಂತ-3ರ ವ್ಯಾಪ್ತಿಯಲ್ಲಿ 2018-19ರ ಆಯವ್ಯಯದಲ್ಲಿನ ಹೊಸ ಯೋಜನೆಗಳಾದ

ಜೆ.ಪಿ.ನಗರದಿಂದ ಕೆ.ಆರ್.ಪುರಂ ವರೆಗೆ 42.75 ಕಿ.ಮೀ.ಗಳು, ಟೋಲ್‌ಗೇಟ್‌ನಿಂದ ಕಡಬಗೆರೆವರೆಗೆ 12.5 ಕಿ.ಮೀ.ಗಳು, ಗೊಟ್ಟಿಗೆರೆಯಿಂದ ಬಸವಪುರವರೆಗೆ 3.07 ಕಿ.ಮೀ.ಗಳು, ಆರ್.ಕೆ. ಹೆಗ್ಡೆ ನಗರದಿಂದ ಏರೋಸ್ಪೇಸ್ ಪಾರ್ಕ್‌ವರೆಗೆ 18.95 ಕಿ.ಮೀ.ಗಳು, ಕೋಗಿಲು ಕ್ರಾಸ್‌ನಿಂದ ರಾಜಾನುಕುಂಟೆವರೆಗೆ 10.6 ಕಿ.ಮೀ.ಗಳು ಮತ್ತು ಇಬ್ಬಲೂರುನಿಂದ ಕರ್ಮಲ್‌ರಾಮ್‌ವರೆಗೆ 6.67 ಕಿ.ಮೀ.ಗಳು, ಒಟ್ಟು 95 ಕಿ.ಮೀ.ಗಳ ಉದ್ದದ ಮಾರ್ಗಗಳ ಅಧ್ಯಯನ ನಡೆಸಲಾಗುತ್ತಿದೆ.

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ**

154. ಬೆಳ್ಳಂದೂರು ಕೆರೆಯ ಸರ್ವಾಂಗೀಣ ಪುನಶ್ಚೇತನಕ್ಕಾಗಿ 50 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಹಾಗೂ ಮುಂದಿನ ದಿನಗಳಲ್ಲಿ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಸಹಭಾಗಿತ್ವದೊಂದಿಗೆ ಬೆಳ್ಳಂದೂರು ಕೆರೆಯ ನೀರನ್ನು ಬೆಂಗಳೂರು ಗ್ರಾಮಾಂತರ ಪ್ರದೇಶಗಳ ಕೃಷಿ ಚಟುವಟಿಕೆಗಳ ಹನಿ ನೀರಾವರಿಗೆ ಒದಗಿಸಲು ಕ್ರಮಕೈಗೊಳ್ಳಲಾಗುವುದು.

155. ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 5000 ನಿವೇಶನ ಹಂಚಲಾಗಿದ್ದು, ಇನ್ನೂ 5000 ನಿವೇಶನ ಹಂಚಿಕೆ ಮಾಡುವ ಕಾರ್ಯಕ್ರಮ ಪ್ರಗತಿಯಲ್ಲಿದೆ. ಭೂಮಾಲೀಕರಿಗೆ ಮೊದಲನೇ ಹಂತದಲ್ಲಿ 2157 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಎರಡನೇ ಹಂತದಲ್ಲಿ 3000 ನಿವೇಶನವನ್ನು ಹಂಚಿಕೆ ಮಾಡಲಾಗುವುದು.

156. ಸರ್ಕಾರವು ಬೆಂಗಳೂರು ನಗರದ ಹೊರವಲಯದಲ್ಲಿ ಫೆರಿಫೆರಲ್ ರಿಂಗ್ ರಸ್ತೆಯನ್ನು ನಿರ್ಮಿಸಲು ಉದ್ದೇಶಿಸಿರುತ್ತದೆ. 65

ಕಿ.ಮೀ ಉದ್ದದ ರಸ್ತೆಯನ್ನು PRR ನಿರ್ಮಿಸಲು ಭೂಸ್ವಾಧೀನ ವೆಚ್ಚ ಸೇರಿದಂತೆ ಅಂದಾಜು ಮೊತ್ತ 11,950 ಕೋಟಿ ರೂ.ಗಳಾಗುತ್ತದೆ. ಸದರಿ ಕಾಮಗಾರಿಯನ್ನು Special Purpose Vehicle (SPV) ಮುಖಾಂತರ ಅನುಷ್ಠಾನಗೊಳಿಸಲು ಸರ್ಕಾರದ ಅನುಮೋದನೆ–ಯಾಗಿದ್ದು, ಪ್ರಸ್ತುತ Special Purpose Vehicle (SPV) ಕಾರ್ಯೋನ್ಮುಖವಾಗಿರುತ್ತದೆ. PRRಗೆ ಬೇಕಾಗಿರುವ ಆರ್ಥಿಕ ಸಂಪನ್ಮೂಲ ಕ್ರೋಢೀಕರಿಸುವ ಪ್ರಕ್ರಿಯೆ ಚಾಲನೆಯಲ್ಲಿದ್ದು, ಕಾಮಗಾರಿಯನ್ನು ಕೈಗೊಳ್ಳಲಾಗುವುದು.

**ಪೌರಾಡಳಿತ**

157. ನಗರ ಪ್ರದೇಶದಲ್ಲಿ ವಾಹನ ಸಂಚಾರದ ಪ್ರಮಾಣ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಆಗುವ ತೊಂದರೆ ಹಾಗೂ ವಾಹನ ದಟ್ಟಣೆಯನ್ನು ತಪ್ಪಿಸಲು ಮೊದಲ ಹಂತದಲ್ಲಿ 5 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಬಹುಮಹಡಿ ವಾಹನ ನಿಲುಗಡೆ ಸೌಲಭ್ಯ ಕಲ್ಪಿಸಲು ಉದ್ದೇಶಿಸಿದೆ.

158. ನಾಗರಿಕರಿಗೆ ಉತ್ತಮ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಸ್ಯಾಟಲೈಟ್ ಇಮೇಜ್ ಬಳಸುವ ಮೂಲಕ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಎಲ್ಲಾ ಆಸ್ತಿಗಳನ್ನು ಜಿಐಎಸ್ ಆಧಾರಿತ ಮ್ಯಾಪಿಂಗ್ ಮಾಡಲು ಉದ್ದೇಶಿಸಿದೆ.

159. ರಾಜ್ಯದ 10 ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಮೊದಲ ಹಂತದಲ್ಲಿ ನೀರು ಸರಬರಾಜು ಮತ್ತು ಒಳಚರಂಡಿ ಜಾಲದ ಮ್ಯಾಪಿಂಗ್ ಮಾಡಲು ಉದ್ದೇಶಿಸಿದೆ.

160. ಹಾಸನ ನಗರದ ಚನ್ನಪಟ್ಟಣ ಕೆರೆಯಲ್ಲಿರುವ ವಿಹಾರ ಧಾಮದ ಸುತ್ತಲಿನ ರಸ್ತೆಗಳ ಅಭಿವೃದ್ಧಿ, ಸೇತುವೆ ನಿರ್ಮಾಣ, ದೋಣಿ ವಿಹಾರ, ಕಾರಂಜಿ ನಿರ್ಮಾಣ, ಮಕ್ಕಳ ಉದ್ಯಾನವನ, ಪುಟಾಣಿ ರೈಲು ಅಳವಡಿಕೆ ಇತ್ಯಾದಿಗಳಿಗಾಗಿ 36 ಕೋಟಿ ರೂ. ಒದಗಿಸಲಾಗಿದೆ.

161. ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿರುವ ಸಕ್ಕರೆ ನಗರಿ ಮಂಡ್ಯ ವೇಗವಾಗಿ ಬೆಳೆಯುತ್ತಿರುವ ಜಿಲ್ಲಾ ಕೇಂದ್ರವಾಗಿದೆ. ಮಂಡ್ಯ ನಗರದ ಸರ್ವತೋಮುಖ ಅಭಿವೃದ್ಧಿಗಾಗಿ 50 ಕೋಟಿ ರೂ.ಗಳ ವಿಶೇಷ ಪ್ಯಾಕೇಜ್ ಒದಗಿಸಲಾಗುವುದು.

162. ಪ್ಲಾಸ್ಟಿಕ್ ತ್ಯಾಜ್ಯ ಪ್ರಪಂಚದ ಅತಿ ಭೀಕರ ಸಾರ್ವಜನಿಕ ಆರೋಗ್ಯ ಪಿಡುಗಾಗಿದೆ. ಕೇಂದ್ರ ಸರ್ಕಾರವು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳನ್ನು 2016ರಲ್ಲಿ ಜಾರಿಗೊಳಿಸಿದೆ. ಈ ನಿಯಮಗಳ ಅನ್ವಯ ಸ್ಥಳೀಯ ಸಂಸ್ಥೆಗಳು ಪ್ಲಾಸ್ಟಿಕ್ ಉಪಯೋಗಿಸಿ ಪ್ಯಾಕಿಂಗ್ ಮಾಡುವ ಎಲ್ಲಾ ಉತ್ಪನ್ನಗಳ ಮೇಲೆ ಶುಲ್ಕವನ್ನು ವಿಧಿಸಬಹುದಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳು ಅವುಗಳ ಪ್ರದೇಶ ವ್ಯಾಪ್ತಿಯಲ್ಲಿ ಮಾರಾಟವಾಗುವ ಪ್ಲಾಸ್ಟಿಕ್‌ನಿಂದ ಪ್ಯಾಕ್ ಮಾಡಿದ ವಸ್ತುಗಳ ಮೇಲೆ ಎಂ.ಆರ್.ಪಿ ಆಧಾರದಲ್ಲಿ ಶೇ.3 ರಷ್ಟು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ಶುಲ್ಕ ವಿಧಿಸಲು ನಮ್ಮ ಸರ್ಕಾರವು ನಿರ್ದೇಶನ ನೀಡಲಿದೆ. ಈ ರೀತಿ ಸಂಗ್ರಹವಾದ ಶುಲ್ಕದ ಮೊತ್ತವನ್ನು ಪ್ಲಾಸ್ಟಿಕ್ ಸಂಸ್ಕರಣೆಗಾಗಿ ಬಳಸಿ ಪರಿಸರ ಸಂರಕ್ಷಣೆ ಮಾಡಲಾಗುವುದು.

**ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ**

163. ಬೆಂಗಳೂರು ನಗರದ ಕೊಳಚೆ ನೀರಿನಲ್ಲಿ ಹೆಚ್ಚು ರಾಸಾಯನಿಕ ಅಂಶಗಳು ಕಂಡುಬರುತ್ತಿವೆ. ಈ ಕೊಳಚೆ ನೀರು ನದಿಗೆ ಸೇರಿದಾಗ

ಅಲ್ಲಿಯೂ ಕೂಡ ನದಿ ನೀರನ್ನು ಕಲುಷಿತಗೊಳಿಸುತ್ತಿವೆ. ಇದನ್ನು ನಿವಾರಿಸಲು ನಗರದ ಹಲವೆಡೆ ರಾಸಾಯನಿಕ ತ್ಯಾಜ್ಯ ವಸ್ತುಗಳ ಶುದ್ಧಿಕರಣ ಘಟಕಗಳನ್ನು (Chemical effluent Treatment Plant) ನಿರ್ಮಿಸಲಾಗುತ್ತಿದೆ. ಈ ಚಟುವಟಿಕೆಯ ಭಾಗವಾಗಿ ಪೀಣ್ಯ ಕೈಗಾರಿಕಾ ವಲಯದಲ್ಲಿ ರಾಸಾಯನಿಕ ತ್ಯಾಜ್ಯವಸ್ತುಗಳ ಶುದ್ಧಿಕರಣ ಘಟಕವನ್ನು ನಿರ್ಮಿಸಲು 10 ಕೋಟಿ ರೂ.ಗಳನ್ನು ಒದಗಿಸಲಾಗುವುದು.

**ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ**

164. ಐತಿಹಾಸಿಕ ಮೈಸೂರು ನಗರ ಹಾಗೂ ಮಾರ್ಗ ಮಧ್ಯದ 92 ಹಳ್ಳಿಗಳ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಹಳೇ ಉಂಡವಾಡಿ ಬಳಿ ಕಾವೇರಿ ನದಿಯಿಂದ ನಗರಕ್ಕೆ ಹೆಚ್ಚುವರಿಯಾಗಿ 300 MLD ನೀರನ್ನು ಸರಬರಾಜು ಮಾಡುವ ಯೋಜನೆಯನ್ನು 50 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಿದೆ.

**ಕಾನೂನು**

165. ಕರ್ನಾಟಕ ರಾಜ್ಯದ ನ್ಯಾಯಾಂಗ ಪರಂಪರೆಯನ್ನು ಜನಸಾಮಾನ್ಯರಿಗೆ ಪರಿಚಯಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ರಾಜ್ಯದ ಇತಿಹಾಸದಲ್ಲಿನ ನ್ಯಾಯಾಂಗ ದಾಖಲೆ ಪತ್ರಗಳು, ಮೈಸೂರು ಮತ್ತು ಬ್ರಿಟಿಷ್ ಸಾಮ್ರಾಜ್ಯದ ನಡುವೆ ಆಗಿರುವ ಒಪ್ಪಂದ ಪತ್ರಗಳು ಇತ್ಯಾದಿ ಅಮೂಲ್ಯ ದಾಖಲೆಗಳು ಮತ್ತು ಚಿತ್ರಗಳನ್ನುಳ್ಳ ಮ್ಯೂಸಿಯಂ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ 1 ಕೋಟಿ ರೂ. ಅನುದಾನ ಒದಗಿಸಲಾಗಿದೆ.

166. ಬೆಂಗಳೂರಿನ ಬಾರ್ ಕೌನ್ಸಿಲ್‌ನವರು ನ್ಯಾಯಾಂಗ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಹಲವಾರು ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನ್ಯಾಯಾಂಗ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಚಟುವಟಿಕೆಗಳಿಗೆ ಉತ್ತೇಜನ ನೀಡಲು 5 ಕೋಟಿ ರೂ.ಗಳ ಆರ್ಥಿಕ ನೆರವನ್ನು ಒದಗಿಸಲಾಗುವುದು.

**ಆರ್ಥಿಕ**

167. ರೈತ ಬಾಂಧವರು ಕೃಷಿ ಚಟುವಟಿಕೆಗಳಿಗಾಗಿ ಮಾಡಿರುವ ಎಲ್ಲಾ ಬಗೆಯ ಬೆಳೆ ಸಾಲವನ್ನು ನಮ್ಮ ಪಕ್ಷದ ಪೂರ್ಣ ಸರ್ಕಾರ ರಚನೆಯಾದ 24 ಗಂಟೆಗಳಲ್ಲಿಯೇ ಮನ್ನಾ ಮಾಡಲು ನಾನು ಸಂಕಲ್ಪ ತೊಟ್ಟಿದ್ದೆ. ಆದರೆ ನಾಡಿನ ಜನತೆ ಏಕಪಕ್ಷದ ಸರ್ಕಾರ ರಚನೆಗೆ ಬೇಕಾಗಿರುವ ಆಶೀರ್ವಾದ ಮಾಡಲಿಲ್ಲವಾದರೂ ಮೈತ್ರಿ ಸರ್ಕಾರ ರಚಿಸಿ, ಆ ಕೂಟದ ಮುಖ್ಯಮಂತ್ರಿಯಾಗಿ ಕೆಲಸ ಮಾಡುವ ಸದಾವಕಾಶವನ್ನು ನನಗೆ ಒದಗಿಸಿದೆ. ಈ ಹಿನ್ನೆಲೆಯಲ್ಲಿ ರೈತರ ಬೆಳೆ ಸಾಲದ ಬಗ್ಗೆ ಸರ್ಕಾರಿ ಅಧಿಕಾರಿಗಳೊಂದಿಗೆ, ರಾಷ್ಟ್ರೀಕೃತ ಬ್ಯಾಂಕ್, ಸಹಕಾರಿ ಕ್ಷೇತ್ರದ ಅಧಿಕಾರಿಗಳು ಹಾಗೂ ರೈತ ಸಮೂದಾಯದೊಂದಿಗೆ ಚರ್ಚೆ ಮಾಡಿದ್ದೇನೆ. ಈ ಚರ್ಚೆಯ ಫಲಶೃತಿಯಾಗಿ ಮೊದಲ ಹಂತದಲ್ಲಿ ದಿನಾಂಕ 31–12–2017ರವರೆಗೆ ರೈತರು ಮಾಡಿದ ಎಲ್ಲಾ ಸುಸ್ತಿ ಬೆಳೆ ಸಾಲವನ್ನು ಒಂದೇ ಹಂತದಲ್ಲಿ ಮನ್ನಾ ಮಾಡಲು ತೀರ್ಮಾನಿಸಿರುತ್ತೇನೆ. ಇದಲ್ಲದೆ ಸಕಾಲದಲ್ಲಿ ಸಾಲ ಮರುಪಾವತಿ ಮಾಡಿರುವ ರೈತರಿಗೂ ಸಹ ಅನುಕೂಲ ಮಾಡಿಕೊಡಲು ಸುಸ್ತಿದಾರರಲ್ಲದ ರೈತರ ಸಾಲ ಖಾತೆಗಳಿಗೆ ಉತ್ತೇಜನಕಾರಿಯಾಗಿ ಪ್ರತಿ ಖಾತೆಗೆ ಅವರು ಮರುಪಾವತಿ

ಮಾಡಿರುವ ಸಾಲದ ಮೊತ್ತ ಅಥವಾ 25,000 ರೂ.ಗಳಲ್ಲಿ ಯಾವುದು ಕಡಿಮೆಯೋ ಅದನ್ನು ತುಂಬಲು ನಾನು ನಿರ್ಧರಿಸಿದ್ದೇನೆ.

168. ಕೃಷಿಕರ ಬೆಳೆ ಸಾಲ ಮನ್ನಾ ವಿಷಯವನ್ನು ಪೂರ್ಣವಾಗಿ ಪರಿಶೀಲಿಸಿದಾಗ ದೊಡ್ಡ ಭೂ ಹಿಡುವಳಿ ಹೊಂದಿರುವ ರೈತರ ಸಾಲಗಳು 40 ಲಕ್ಷ ಮೀರಿದಂತಹ ಪ್ರಸಂಗಗಳು ಸಹ ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಹೆಚ್ಚಿನ ಮೊತ್ತದ ಬೆಳೆ ಸಾಲವನ್ನು ಮನ್ನಾ ಮಾಡುವುದು ಸರಿಯಾದ ಕ್ರಮವಲ್ಲ ಎನ್ನುವ ರೈತ ಸಮುದಾಯದ ಅಭಿಪ್ರಾಯದ ಹಿನ್ನೆಲೆಯಲ್ಲಿ ಸಾಲದ ಮೊತ್ತವನ್ನು ಪ್ರತಿ ರೈತ ಕುಟುಂಬಕ್ಕೆ 2 ಲಕ್ಷ ರೂ.ಗಳಿಗೆ ಮಿತಿಗೊಳಿಸಲು ನಾನು ತೀರ್ಮಾನಿಸಿದ್ದೇನೆ. ಈ ಬೆಳೆ ಸಾಲ ಮನ್ನಾ ಯೋಜನೆಯಿಂದ ಸುಮಾರು 34,000 ಕೋಟಿ ರೂ.ಗಳ ಮೊತ್ತದ ಪ್ರಯೋಜನ ರೈತರಿಗೆ ದೊರೆಯಲಿದೆ. ಸರ್ಕಾರಿ ಅಧಿಕಾರಿಗಳು ಮತ್ತು ಸಹಕಾರಿ ಕ್ಷೇತ್ರದ ಅಧಿಕಾರಿಗಳ ಕುಟುಂಬಗಳು ಹಾಗೂ ಕಳೆದ 3 ವರ್ಷಗಳಲ್ಲಿ ಆದಾಯ ತೆರಿಗೆ ಕಟ್ಟಿರುವಂತಹ ರೈತರುಗಳು ಹಾಗೂ ಇತರೆ ಅನರ್ಹ ಕೃಷಿ ಸಾಲಗಾರರು ಈ ಸಾಲ ಮನ್ನಾ ಯೋಜನೆಯಿಂದ ಹೊರಗೆ ಇರುತ್ತಾರೆ.

169. ರೈತರಿಗೆ ಹೊಸ ಸಾಲ ಪಡೆಯಲು ಅನುಕೂಲವಾಗುವಂತೆ ಸರ್ಕಾರವು ಅವರ ಸುಸ್ತಿ ಖಾತೆಯಲ್ಲಿರುವ ಬಾಕಿಯನ್ನು ಮನ್ನಾ ಮಾಡಿ ಋಣಮುಕ್ತ ಪತ್ರವನ್ನು ನೀಡಲು ಕ್ರಮ ಕೈಗೊಳ್ಳಲಿದೆ. ಈ ಉದ್ದೇಶಕ್ಕಾಗಿ 2018-19ರ ಆಯವ್ಯಯದಲ್ಲಿ 6500 ಕೋಟಿ ರೂ. ನಿಗದಿಪಡಿಸಿರುತ್ತೇನೆ. ಇದಲ್ಲದೆ ಹಿಂದಿನ ಸರ್ಕಾರವು ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರು ಮಾಡಿದ ಸುಮಾರು 8,165 ಕೋಟಿ ರೂ. ಸಾಲ ಮನ್ನಾ ಮಾಡಿ ಅದರಲ್ಲಿ 4,165 ಕೋಟಿ ರೂ.ಗಳನ್ನು ಹಿಂದಿನ

ವರ್ಷ ಬಿಡುಗಡೆ ಮಾಡಿದೆ. ಉಳಿದ 4,000 ಕೋಟಿ ರೂ.ಗಳನ್ನು ಸಹ ಪಾವತಿ ಮಾಡಲು ಈ ಸಾಲಿನ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ.

## ತೆರಿಗೆ ಪ್ರಸ್ತಾವನೆಗಳು

### ವಾಣಿಜ್ಯ ತೆರಿಗೆಗಳು

### ಸರಕು ಮತ್ತು ಸೇವಾ ತೆರಿಗೆ

170. ಅತ್ಯಾಧುನಿಕ ಸ್ವಯಂಚಾಲಿತ ಸರಕು ಮತ್ತು ಸೇವಾ ತೆರಿಗೆ ಸಹಾಯ ಪೀಠವನ್ನು ವಾಣಿಜ್ಯ ತೆರಿಗೆಗಳ ಆಯುಕ್ತರ ಕಛೇರಿಯಲ್ಲಿ ಸ್ಥಾಪಿಸಲಾಗಿದ್ದು, ಇಂತಹುದೇ ಸಹಾಯ ಪೀಠಗಳನ್ನು ಎಲ್ಲಾ ವಿಭಾಗೀಯ ಕಛೇರಿಗಳಲ್ಲಿ ಸ್ಥಾಪಿಸಲಾಗುವುದು. ಸರಕು ಮತ್ತು ಸೇವಾ ತೆರಿಗೆಯ ಅನುಷ್ಠಾನದಲ್ಲಿನ ಸವಾಲುಗಳ ನಿವಾರಣೆಗಾಗಿ ನಮ್ಮ ಅಧಿಕಾರಿಗಳನ್ನು ಸಜ್ಜುಗೊಳಿಸಲು ಸಾಮರ್ಥ್ಯ ವರ್ಧನೆಯ ಕಾರ್ಯಕ್ರಮಗಳನ್ನು ಆಯೋಜಿಸುವುದು ಈ ಕ್ಷಣದ ಅವಶ್ಯಕತೆಯಾಗಿದೆ. ಸರ್ಕಾರವು ಸರಕು ಮತ್ತು ಸೇವಾ ತೆರಿಗೆ ಅನುಷ್ಠಾನದಲ್ಲಿ ಅನುಭವ ಹೊಂದಿರುವ ಇತರ ದೇಶಗಳಲ್ಲಿ ನಮ್ಮ ಅಧಿಕಾರಿಗಳಿಗೆ ಸೂಕ್ತ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು ಸಹ ಉದ್ದೇಶಿಸಿದೆ.

### ಮೌಲ್ಯವರ್ಧಿತ ತೆರಿಗೆ

### ಸುಧಾರಣಾ ಮತ್ತು ಆಡಳಿತಾತ್ಮಕ ಕ್ರಮಗಳು:

171. 1956ರ ಕೇಂದ್ರ ಮಾರಾಟ ತೆರಿಗೆ ಕಾಯ್ದೆಯಡಿಯಲ್ಲಿ ತೆರಿಗೆ ಬಾಕಿಯನ್ನು ಕಡಿತಗೊಳಿಸಲು, 30ನೇ ಜೂನ್ 2018 ರ ಒಳಗೆ

ಪೂರ್ಣಗೊಳಿಸಲಾದ ಕರನಿರ್ಧಾರಣೆ / ಮರು ಕರನಿರ್ಧಾರಣೆಗೆ ಸಂಬಂಧಿಸಿದಂತೆ ವಾಣಿಜ್ಯೋದ್ಯಮಗಳು ತಮ್ಮ ಕೇಂದ್ರ ಮಾರಾಟ ತೆರಿಗೆ ಬಾದ್ಯತೆಗಳನ್ನು ತೀರುವಳಿ ಮಾಡಲು ಅನುಕೂಲವಾಗುವಂತೆ, ದಿನಾಂಕ 30ನೇ ಅಕ್ಟೋಬರ್ 2018 ರ ಒಳಗಾಗಿ ಪೂರ್ತಿಯಾಗಿ ತೆರಿಗೆ ಮೊತ್ತ ಪಾವತಿಸುವವರಿಗೆ, ಶೇ.100ರಷ್ಟು ದಂಡ ಮತ್ತು ಬಡ್ಡಿಯನ್ನು ಮನ್ನಾ ಮಾಡಲು ಒಂದು ಕರಸಮಾಧಾನ ಯೋಜನೆಯನ್ನು ಜಾರಿಗೆ ತರಲು ನಾನು ಪ್ರಸ್ತಾಪಿಸುತ್ತೇನೆ.

172. ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣವು ಮೇಲ್ಮನವಿಯ ವಿಲೇವಾರಿ ಮಾಡಲು ಇರುವ ಅವಧಿಯನ್ನು ತಡೆಯಾಜ್ಞೆ ಜಾರಿಗೆ ಬಂದ ದಿನದಿಂದ ಪ್ರಸ್ತುತ ಇರುವ 365 ದಿನಗಳ ಬದಲಾಗಿ ಮೂರು ವರ್ಷಗಳಿಗೆ ವಿಸ್ತರಿಸಲು ನಾನು ಪ್ರಸ್ತಾಪಿಸುತ್ತೇನೆ.

**ಮಾರಾಟತೆರಿಗೆ**

**ಅಧಿಕ ಸಂಪನ್ಮೂಲ ಕ್ರೋಢೀಕರಣ ಕ್ರಮ:**

173. ರಾಜ್ಯದ ಅಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಸಂಪನ್ಮೂಲ ಕ್ರೋಢೀಕರಣಕ್ಕೆ ಅನುವಾಗುವಂತೆ, ಪೆಟ್ರೋಲ್ ಮೇಲಿನ ತೆರಿಗೆ ದರವನ್ನು ಪ್ರಸ್ತುತ ಶೇ.30 ರಿಂದ 32ಕ್ಕೆ ಮತ್ತು ಡೀಸಲ್ ಮೇಲಿನ ತೆರಿಗೆ ದರವನ್ನು ಪ್ರಸ್ತುತ ಶೇ.19 ರಿಂದ 21ಕ್ಕೆ ಏರಿಸಲು ಪ್ರಸ್ತಾಪಿಸುತ್ತೇನೆ. ಈ ಉಪಕ್ರಮದಿಂದ ಲೀಟರ್ ಒಂದಕ್ಕೆ ಪೆಟ್ರೋಲ್ ಮೇಲಿನ ಬೆಲೆಯಲ್ಲಿ ರೂ.1.14 ಮತ್ತು ಡೀಸಲ್ ಮೇಲಿನ ಬೆಲೆಯಲ್ಲಿ ರೂ.1.12 ರಷ್ಟು ಅಲ್ಪ ಪ್ರಮಾಣದ ಹೆಚ್ಚಳವಾಗುತ್ತದೆ. ಆದಾಗ್ಯೂ ನೆರೆ

ರಾಜ್ಯಗಳಿಗೆ ಹೋಲಿಸಿದಾಗ ಪೆಟ್ರೋಲ್ ಮತ್ತು ಡೀಸಲ್ ಬೆಲೆಗಳು ಕರ್ನಾಟಕದಲ್ಲಿ ಕಡಿಮೆಯಿರುತ್ತವೆ.

**ಅಬಕಾರಿ**

174. ಅಬಕಾರಿ ಇಲಾಖೆಗೆ 2018–19 ನೇ ಸಾಲಿಗೆ 18,750 ಕೋಟಿ ರೂ. ರಾಜಸ್ವ ಸಂಗ್ರಹಣೆ ಗುರಿ ನಿಗದಿಪಡಿಸಲಾಗಿತ್ತು. ಜೂನ್–2018 ರ ಅಂತ್ಯಕ್ಕೆ 4,674 ಕೋಟಿ ರೂ.ಗಳ ರಾಜಸ್ವ ಸಂಗ್ರಹವಾಗಿರುತ್ತದೆ.

175. ಮದ್ಯದ ಎಲ್ಲಾ 18 ಘೋಷಿತ ಬೆಲೆ ಸ್ಲಾಬ್‌ಗಳ ಮೇಲಿನ ಹೆಚ್ಚುವರಿ ಅಬಕಾರಿ ಸುಂಕದ ದರಗಳನ್ನು ಅನುಬಂಧ–ಅ ರಲ್ಲಿರುವಂತೆ ಹಾಲಿ ಇರುವ ದರಗಳ ಮೇಲೆ ಶೇಕಡ 4 ರಷ್ಟು ಹೆಚ್ಚಿಸಲು ಪ್ರಸ್ತಾಪಿಸುತ್ತೇನೆ.

176. ಇದರೊಂದಿಗೆ ಮತ್ತು ಪರಿಣಾಮಕಾರಿಯಾದ ಜಾರಿ ಮತ್ತು ನಿಯಂತ್ರಣಾ ಕ್ರಮಗಳ ಮೂಲಕ ಇಲಾಖೆಯು 2018–19ನೇ ಆರ್ಥಿಕ ವರ್ಷಕ್ಕೆ 19,750 ಕೋಟಿ ರೂ. ಪರಿಷ್ಕೃತ ರಾಜಸ್ವ ಸಂಗ್ರಹಣೆ ಗುರಿಯನ್ನು ಸಾಧಿಸಲಿದೆ.

**ಸಾರಿಗೆ**

177. 2018–19ರ ಸಾಲಿಗೆ 6,656 ಕೋಟಿ ರೂ. ಮೋಟಾರು ವಾಹನ ತೆರಿಗೆಯನ್ನು ನಿಗದಿಪಡಿಸಿದ್ದು, ಈ ಗುರಿ ತಲುಪುತ್ತೇವೆಂಬ ಆಶಯ ಹೊಂದಲಾಗಿದೆ.

178. ಮೋಟಾರು ವಾಹನ ತೆರಿಗೆಯನ್ನು ಈ ಸಾಲಿನಲ್ಲಿ ಈ ಕೆಳಕಂಡಂತೆ ಹೆಚ್ಚಳ ಮಾಡುವ ಬಗ್ಗೆ ಪ್ರಸ್ತಾಪಿಸಿದೆ. ಖಾಸಗಿ ಸೇವಾ ವಾಹನ ತೆರಿಗೆಯನ್ನು ಪ್ರತಿ ಚದರ ಮೀಟರ್‌ಗೆ ಶೇಕಡ 50 ರಂತೆ

ಹೆಚ್ಚು ಹೆಚ್ಚಳ ಮಾಡಲಾಗುವುದು. ಅಂದರೆ ಈಗಿರುವ ರೂ.1100/–, ರೂ.1200/–, ರೂ.1300/– & ರೂ.1500/– ಗಳನ್ನು ಕ್ರಮವಾಗಿ ರೂ.1650/–, ರೂ.1800/–, ರೂ.1950/– & ರೂ.2250/ ಗಳಿಗೆ ಏರಿಕೆ ಮಾಡಲಾಗುವುದು (ಅನುಬಂಧ–ಆ).

**ಇಂಧನ**

179. ವಿದ್ಯುತ್ ಬಳಕೆ ಮೇಲಿನ ತೆರಿಗೆಯನ್ನು ಚಾಲ್ತಿಯಲ್ಲಿರುವ ಶೇಕಡ 6 ರಿಂದ ಶೇಕಡ 9ಕ್ಕೆ ಹೆಚ್ಚಿಸಲಾಗುವುದು. ಹಾಗೆಯೇ, ಸ್ವಂತ ಬಳಕೆಯ ವಿದ್ಯುತ್ (Taxation on Captive Consumption) ಮೇಲಿನ ತೆರಿಗೆ ದರವನ್ನು ಪ್ರತಿ ಯೂನಿಟ್ ದರ 10 ಪೈಸೆಯಿಂದ 20 ಪೈಸೆಗೆ ಹೆಚ್ಚಿಸಲಾಗುವುದು.

**ಆಯವ್ಯಯ ಅಂದಾಜುಗಳು 2018–19**

**ಸನ್ಮಾನ್ಯ ಸಭಾಧ್ಯಕ್ಷರೇ,**

180. 2018–19ನೇ ಸಾಲಿನಲ್ಲಿ ಒಟ್ಟು ಜಮೆಗಳು 2,13,734 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದರಲ್ಲಿ 1,66,396 ಕೋಟಿ ರೂ. ರಾಜಸ್ವ ಜಮೆಗಳು ಹಾಗೂ 47,134 ಕೋಟಿ ರೂ.ಗಳ ಸಾಲ ಸೇರಿದಂತೆ 47,338 ಕೋಟಿ ರೂ.ಗಳ ಬಂಡವಾಳ ಜಮೆಗಳು ಒಳಗೊಂಡಿರುತ್ತದೆ. 1,66,290 ಕೋಟಿ ರೂ.ಗಳ ರಾಜಸ್ವ ವೆಚ್ಚ, 41,063 ಕೋಟಿ ರೂ.ಗಳ ಬಂಡವಾಳ ಹಾಗೂ ಸಾಲದ ಮರುಪಾವತಿ 11,136 ಕೋಟಿ ರೂ.ಗಳ ವೆಚ್ಚವನ್ನು ಒಳಗೊಂಡು, ಒಟ್ಟು ವೆಚ್ಚವು 2,18,488 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

181. ರಾಜಸ್ವ ಹೆಚ್ಚುವರಿಯನ್ನು 106 ಕೋಟಿ ರೂ.ಗಳೆಂದು ಅಂದಾಜು ಮಾಡಲಾಗಿದೆ. ವಿತ್ತೀಯ ಕೊರತೆಯು 40,753 ಕೋಟಿ ರೂ.ಗಳಾಗುತ್ತದೆಂದು ನಿರೀಕ್ಷಿಸಲಾಗಿದ್ದು, ಅದು ರಾಜ್ಯದ ಆಂತರಿಕ ಉತ್ಪನ್ನದ ಶೇ.2.89 ರಷ್ಟಾಗಿರುತ್ತದೆ. 2018-19ರ ಕೊನೆಯಲ್ಲಿ 2,92,220 ಕೋಟಿ ರೂ.ಗಳ ಒಟ್ಟು ಹೊಣೆಗಾರಿಕೆಗಳು ರಾಜ್ಯದ ಆಂತರಿಕ ಉತ್ಪನ್ನದ ಶೇ.20.75 ರಷ್ಟಾಗುತ್ತದೆಂದು ಅಂದಾಜು ಮಾಡಲಾಗಿದೆ. ಇದು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮದಡಿ 2018-19ನೇ ವರ್ಷಕ್ಕೆ ನಿಗದಿಪಡಿಸಿರುವ ಶೇ.25 ರ ಮಿತಿಯೊಳಗಿರುತ್ತದೆ.

182. ಆದ್ದರಿಂದ, ಎಲ್ಲಾ ಮೂರು ವಿತ್ತೀಯ ಪರಿಮಾಣಗಳು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಅಧಿನಿಯಮವು ನಿಗದಿಪಡಿಸಿರುವ ಮಿತಿಯೊಳಗಿರುತ್ತದೆ ಹಾಗೂ ಇದು ರಾಜ್ಯದ ವಿತ್ತೀಯ ಶಿಸ್ತನ್ನು ಪ್ರತಿಬಿಂಬಿಸುತ್ತದೆ.

**ಸಂಪನ್ಮೂಲಗಳ ಕ್ರೋಢೀಕರಣ**

183. 2018-19ನೇ ಸಾಲಿನ ರಾಜ್ಯದ ಒಟ್ಟು ಸ್ವಂತ ತೆರಿಗೆ ರಾಜಸ್ವವನ್ನು ಜಿ.ಎಸ್.ಟಿ. ನಷ್ಟ ಪರಿಹಾರ ಸೇರಿದಂತೆ 2017-18ನೇ ಸಾಲಿನ ಪರಿಷ್ಕೃತ ಅಂದಾಜು ಮೀರಿ ಶೇ.16.25 ರ ಹೆಚ್ಚಳದೊಂದಿಗೆ 1,06,621 ಕೋಟಿ ರೂ.ಗಳಾಗುತ್ತದೆಂದು ಅಂದಾಜು ಮಾಡಲಾಗಿದೆ.

184. ತೆರಿಗೆಯೇತರ ರಾಜಸ್ವಗಳಿಂದ 8,181 ಕೋಟಿ ರೂ.ಗಳನ್ನು ಸಂಗ್ರಹಿಸಬಹುದೆಂದು ನಿರೀಕ್ಷಿಸಲಾಗಿದೆ. ಕೇಂದ್ರ ತೆರಿಗೆಯ ಪಾಲಿನ ರೂಪದಲ್ಲಿ 36,215 ಕೋಟಿ ರೂ.ಗಳನ್ನು ಹಾಗೂ 15,379 ಕೋಟಿ

ರೂ.ಗಳನ್ನು ಕೇಂದ್ರ ಸರ್ಕಾರದಿಂದ ಸಹಾಯಾನುದಾನ ರೂಪದಲ್ಲಿ ರಾಜ್ಯ ಸರ್ಕಾರವು ನಿರೀಕ್ಷಿಸಿದೆ. ಈ ರಾಜಸ್ವ ಜಮೆಗಳಿಗೆ ಪೂರಕವಾಗಿ 47,134 ಕೋಟಿ ರೂ.ಗಳ ಒಟ್ಟು ಸಾಲಗಳು, 75 ಕೋಟಿ ರೂ.ಗಳ ಋಣೇತರ ಸ್ವೀಕೃತಿಗಳು ಮತ್ತು 129 ಕೋಟಿ ರೂ.ಗಳ ಸಾಲಗಳ ವಸೂಲು ಮೊತ್ತವನ್ನು ಅಂದಾಜಿಸಲಾಗಿದೆ.

185. ರಾಜ್ಯದ ಒಡೆತನದ ವಿವಿಧ ಮಂಡಳಿಗಳು, ನಿಗಮಗಳು ಮತ್ತು ಸ್ಥಳೀಯ ಸಂಸ್ಥೆಗಳ ಆಂತರಿಕ ಸಂಪನ್ಮೂಲ ಸೃಜನೆಯ ಮೂಲಕ ಹಾಗೂ ತಮ್ಮ ಹಣಕಾಸು ಸಾಮರ್ಥ್ಯ ಮತ್ತು ಸ್ವಂತ ರಾಜಸ್ವಗಳ ಆಧಾರದ ಮೇಲೆ ಮಾಡಿದ ಸಾಲಗಳ ಮೂಲಕ 16,760 ಕೋಟಿ ರೂ.ಗಳನ್ನು ಕ್ರೋಢೀಕರಿಸಲಾಗುತ್ತದೆಂದು ನಿರೀಕ್ಷಿಸಲಾಗಿದೆ.

**ಸನ್ಮಾನ್ಯ ಸಭಾಧ್ಯಕ್ಷರೇ,**

186. ಈ ಆಯವ್ಯಯ ಪತ್ರವು ನಮ್ಮ ಸರ್ಕಾರದ ಆದ್ಯತೆಗಳನ್ನು ಬಿಂಬಿಸುತ್ತದೆ. ನಮ್ಮ ಆಶಯಗಳನ್ನು ಅಭಿವ್ಯಕ್ತಗೊಳಿಸುತ್ತದೆ. ಇವುಗಳ ಅನುಷ್ಠಾನಕ್ಕೆ ಅಗತ್ಯವಾದ ಸಹಕಾರವನ್ನು ನಾನು ಈ ಸದನದ ಗೌರವಾನ್ವಿತ ಸದಸ್ಯರಿಂದ ಅಪೇಕ್ಷಿಸುತ್ತೇನೆ.

187. ಈಗ ಆಯವ್ಯಯವನ್ನು ಗೌರವಾನ್ವಿತ ಸದನದ ಪರಿಗಣನೆಗಾಗಿ ಮಂಡಿಸುತ್ತಿದ್ದೇನೆ ಹಾಗೂ ಆಯವ್ಯಯ ಅಂದಾಜಿನನ್ವಯ 2018–19ನೇ ಸಾಲಿನ 31ನೇ ಮಾರ್ಚ್ 2019ರವರೆಗಿನ ವೆಚ್ಚಕ್ಕಾಗಿ ಅನುಮೋದನೆಯನ್ನು ಕೋರುತ್ತಿದ್ದೇನೆ.

**ಜೈ ಹಿಂದ್**

**ಜೈ ಕರ್ನಾಟಕ**

# ಆಯವ್ಯಯ ವಿಹಂಗಮ ನೋಟ

## ಆಯವ್ಯಯ ವಿಹಂಗಮ ನೋಟ

*ಕೋಟಿ ರೂಗಳಲ್ಲಿ*

| | | ಬಜೆಟ್ ಅಂದಾಜು | ಪರಿಷ್ಕೃತ ಅಂದಾಜು | ಬಜೆಟ್ ಅಂದಾಜು |
|---|---|---|---|---|
| | | 2017-18 | 2017-18 | 2018-19 |
| | ಪ್ರಾರಂಭ ಶಿಲ್ಕು | -176.04 | 100.06 | -151.30 |
| ಎ | ರಾಜಸ್ವ ಲೆಕ್ಕ | | | |
| I | ಜಮೆ | | | |
| | ರಾಜ್ಯ ತೆರಿಗೆ * | 89956.56 | 91717.58 | 106620.80 |
| | ಕೇಂದ್ರ ತೆರಿಗೆಯಲ್ಲಿ ಪಾಲು # | 31908.05 | 31751.99 | 36215.28 |
| | ಕೇಂದ್ರ ಸರ್ಕಾರದ ಅನುದಾನಗಳು | 16082.31 | 15735.62 | 15378.64 |
| | ತೆರಿಗೆಯೇತರ ರಾಜಸ್ವ | 6944.62 | 6827.71 | 8180.94 |
| | **ಒಟ್ಟು–ಎ (I)** | **144891.54** | **146032.90** | **166395.66** |
| II | ವೆಚ್ಚ | | | |
| | ಸಾಮಾಜಿಕ ಸೇವೆ | 55887.39 | 57908.64 | 70226.24 |
| | ಆರ್ಥಿಕ ಸೇವೆ | 43681.14 | 44577.16 | 44151.81 |
| | ಸಾಮಾನ್ಯ ಸೇವೆ | 37999.10 | 36031.59 | 45744.34 |
| | ಸಹಾಯಾನುದಾನ ಮತ್ತು ಅಂಶದಾನ | 7187.37 | 7131.67 | 6167.21 |
| | **ಒಟ್ಟು–ಎ (II)** | **144755.00** | **145649.06** | **166289.60** |
| ಎ | ರಾಜಸ್ವ ಲೆಕ್ಕ ಹೆಚ್ಚುವರಿ/ಕೊರತೆ | ***136.54*** | ***383.84*** | ***106.06*** |

(*) 2017–18 ರ ಪರಿಷ್ಕೃತ ಅಂದಾಜು ಹಾಗೂ 2018–19ರ ಆಯವ್ಯಯದಲ್ಲಿ ರಾಜ್ಯಕ್ಕೆ ಬರಬೇಕಾದ ಜಿ.ಎಸ್.ಟಿ ನಷ್ಟ ಪರಿಹಾರವು ಕ್ರಮವಾಗಿ ರೂ. 6130 ಕೋಟಿ ಹಾಗೂ ರೂ. 10800 ಕೋಟಿಗಳನ್ನು ಒಳಗೊಂಡಿರುತ್ತದೆ.

(#) ಜಿ.ಎಸ್.ಟಿ ನಷ್ಟ ಪರಿಹಾರ ಹೊರತುಪಡಿಸಿ

*ಕೋಟಿ ರೂಗಳಲ್ಲಿ*

| | | ಬಜೆಟ್ ಅಂದಾಜು 2017-18 | ಪರಿಷ್ಕೃತ ಅಂದಾಜು 2017-18 | ಬಜೆಟ್ ಅಂದಾಜು 2018-19 |
|---|---|---|---|---|
| ಬಿ | ಬಂಡವಾಳ ಲೆಕ್ಕ | | | |
| I | ಜಮೆ: | | | |
| | ಕೇಂದ್ರ ಸರ್ಕಾರದಿಂದ ಸಾಲ | 1670.74 | 1670.74 | 2203.43 |
| | ಬಹಿರಂಗ ಮಾರುಕಟ್ಟೆ ಸಾಲ | 34716.51 | 34171.51 | 43731.00 |
| | ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಗಳಿಂದ ಸಾಲ | 705.00 | 1250.00 | 1200.00 |
| | ವಿವಿಧ ಬಂಡವಾಳ ಜಮೆಗಳು | 75.00 | 75.00 | 75.00 |
| | ಸಾಲಗಳು ಮತ್ತು ಮುಂಗಡಗಳ ವಸೂಲಿ | 60.20 | 62.54 | 129.10 |
| | ಸಾರ್ವಜನಿಕ ಲೆಕ್ಕ | 513869.86 | 516676.03 | 514992.86 |
| | **ಒಟ್ಟು–ಬಿ (I)** | **551097.31** | **553905.82** | **562331.39** |
| | | | | |
| II | ಬಟವಾಡೆ: | | | |
| | ಬಂಡವಾಳ ವೆಚ್ಚ | 32033.04 | 31230.66 | 35245.92 |
| | ಕೇಂದ್ರ ಸರ್ಕಾರದ ಸಾಲಗಳ ಮರುಸಂದಾಯ | 1083.22 | 1083.22 | 1394.43 |
| | ಮಾರುಕಟ್ಟೆ ಸಾಲಗಳ ಮರುಪಾವತಿ | 4750.17 | 4750.17 | 7417.17 |
| | ಎಲ್‌ಐಸಿ, ಜಿಐಸಿ. ಎನ್‌ಎಸ್‌ಎಸ್‌ಎಫ್, ಎನ್‌ಸಿಡಿಸಿ ಮತ್ತು ಆರ್,ಐ,ಡಿ,ಎಫ್ ಸಾಲಗಳ ಮರುಸಂದಾಯ | 2342.26 | 2342.26 | 2324.24 |
| | ಸಾಲಗಳ ಮತ್ತು ಮುಂಗಡಗಳ ಬಟವಾಡೆ | 1597.40 | 4623.77 | 5816.76 |
| | ಸಾರ್ವಜನಿಕ ಲೆಕ್ಕ | 509623.76 | 510510.94 | 510666.68 |
| | **ಒಟ್ಟು–ಬಿ (II)** | **551429.85** | **554541.02** | **562865.20** |
| | *ಮುಕ್ತಾಯ ಶಿಲ್ಕು* | **-372.04** | **-151.30** | **-579.05** |

## ಅನುಬಂಧ – ಅ
## (ಕಂಡಿಕೆ–175)
## ಮದ್ಯದ ಮೇಲಿನ ಪ್ರಸ್ತುತ ಮತ್ತು ಪ್ರಸ್ತಾವಿತ ಹೆಚ್ಚುವರಿ ಅಬಕಾರಿ ಸುಂಕದ ದರಗಳು

| ಕ್ರಮ ಸಂಖ್ಯೆ | ಘೋಷಿತ ಬೆಲೆ (ಪ್ರತಿ ರಟ್ಟಿನ ಪೆಟ್ಟಿಗೆ) | ಪ್ರಸ್ತುತ ಹೆಚ್ಚುವರಿ ಅಬಕಾರಿ ಸಲುಂಕ (ಪ್ರತಿ ಬಲ್ಕ್ ಲೀ.ಗೆ) | ಪ್ರಸ್ತಾವಿತ ಹೆಚ್ಚುವರಿ ಅಬಕಾರಿ ಸುಂಕ (ಪ್ರತಿ ಬಲ್ಕ್ ಲೀ.ಗೆ) |
|---|---|---|---|
| 1 | 0 – 449 | 138 | 144 |
| 2 | 450 – 499 | 189 | 197 |
| 3 | 500 – 549 | 249 | 259 |
| 4 | 550 – 599 | 321 | 334 |
| 5 | 600 – 699 | 417 | 434 |
| 6 | 700 – 799 | 510 | 530 |
| 7 | 800 – 899 | 543 | 565 |
| 8 | 900 – 999 | 586 | 609 |
| 9 | 1000 – 1099 | 613 | 638 |
| 10 | 1100 – 1199 | 688 | 716 |
| 11 | 1200 – 1299 | 801 | 833 |
| 12 | 1300 – 1399 | 932 | 969 |
| 13 | 1400 – 1799 | 1008 | 1048 |
| 14 | 1800 – 2199 | 1125 | 1170 |
| 15 | 2200 – 4924 | 1285 | 1336 |
| 16 | 4925 – 7650 | 1501 | 1561 |
| 17 | 7651 – 15000 | 2160 | 2246 |
| 18 | 15001 and above | 3240 | 3370 |

**ಅನುಬಂಧ–ಆ**
**(ಕಂಡಿಕೆ 178)**

SCHEDULE
PART-A
[See Section 3(1)]

| **Item No.** | **Class of Vehicle** | **Quarterly tax for vehicles fitted with pneumatic tyres.** |
|---|---|---|
| 8(A) | Omni Buses and Private Service Vehicles held under lease agreement with industrial undertakings or companies for the purpose of providing transport conveyance to their employees from residence to factories/companies *vice versa* and such industrial undertakings or companies being holder of permit of such vehicles. | |
| | a) Having floor area exceeding 5 sq. mtrs., but not exceeding 6 sq. mtrs., for every sq. Metre | 1650 |
| | b) Having floor area exceeding 6 sq. mtrs., but not exceeding 9 sq. mtrs., for every sq. Metre | 1800 |
| | c) Having floor area exceeding 9 sq. mtrs., but not exceeding 12 sq. mtrs., for every sq. Metre | 1950 |
| | d) Having floor area exceeding 12 sq. mtrs., for every sq. Metre | 2250 |

**ಜಮೆ –ರೂಪಾಯಿ ಎಷ್ಟು ಭಾಗ ಯಾವುದರಿಂದ (2018–19 ಆಯವ್ಯಯ ಅಂದಾಜು)**

(ಪೈಸೆ)



**ವೆಚ್ಚ–2018–19 ಆಯವಯ್ಯ ಅಂದಾಜು -ರೂಪಾಯಿ ಯಾವ ಭಾಗ ಎಷ್ಟೆಷ್ಟು (ಪೈಸೆಗಳಲ್ಲಿ)**




ರಾಜ್ಯದ ಸ್ವಂತ ತೆರಿಗೆಗಳ ವಿವರಗಳು–೨೦೧೮–೧೯ ಆಯವ್ಯಯ ಅಂದಾಜುಗಳು
(ರೂ.ಕೋಟಿಗಳಲ್ಲಿ)
ಇತರೆ, 2894.38, 3%
ಮೋಟಾರು ವಾಹನಗಳು, 6656.42, 6%
ಸ್ಟ್ಯಾಂಪುಗಳು ಮತ್ತು ನೋಂದಣಿ ಶುಲ್ಕ, 10400, 10%
ವಾಣಿಜ್ಯ ತೆರಿಗೆಗಳು 66920(*) 63%
ರಾಜ್ಯ ಅಬಕಾರಿ, 19750, 18%
(* ಜಿ.ಎಸ್.ಟಿ. ನಷ್ಟ ಪರಿಹಾರ ಒಳಗೊಂಡಿದೆ)

**ಒಟ್ಟಾರೆ ಹಂಚಿಕೆ(ಒಟ್ಟು ಅಭಿಯಾಚನೆ+ಐ.ಇ.ಬಿ.ಆರ್.)2018–19(ರೂ.ಕೋಟಿಗಳಲ್ಲಿ)**

**(ಒಟ್ಟಾರೆ ಹಂಚಿಕೆಯ ಶೇಕಡವಾರು)**



**ಪರಿವಿಡಿ**


| | |
|---|---|
| ಸನ್ಮಾನ್ಯ ಸಭಾಧ್ಯಕ್ಷರೇ, | 1 |
| ರಾಜ್ಯದ ಅರ್ಥ ವ್ಯವಸ್ಥೆ | 4 |
| 4ನೇ ಹಣಕಾಸು ಆಯೋಗ | 4 |
| ರಾಜ್ಯದ ಹಣಕಾಸು ಪರಿಸ್ಥಿತಿ | 5 |
| ಪ್ರಗತಿಯ ಹಿನ್ನೋಟ | 6 |
| ಕೃಷಿ | 15 |
| ತೋಟಗಾರಿಕೆ | 21 |
| ರೇಷ್ಮೆ | 23 |
| ಪಶು ಸಂಗೋಪನೆ | 24 |
| ಮೀನುಗಾರಿಕೆ | 25 |
| ಸಹಕಾರ | 25 |
| ಕೌಶಲ್ಯಾಭಿವೃದ್ಧಿ | 26 |
| ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ | 27 |
| ಉನ್ನತ ಶಿಕ್ಷಣ | 28 |
| ಆರೋಗ್ಯ ಮತ್ತು ಕುಟುಂಬ ಕಲ್ಯಾಣ | 32 |
| ವೈದ್ಯಕೀಯ ಶಿಕ್ಷಣ | 33 |
| ಪ್ರವಾಸೋದ್ಯಮ | 34 |
| ಸಮಾಜ ಕಲ್ಯಾಣ | 37 |
| ಆಹಾರ ಮತ್ತು ನಾಗರೀಕ ಸರಬರಾಜು | 41 |
| ಮಹಿಳಾ ಮತ್ತೆ ಮಕ್ಕಳ ಕಲ್ಯಾಣ | 41 |
| ವಾಣಿಜ್ಯ ಮತ್ತು ಕೈಗಾರಿಕೆ | 44 |
| ಸಾರ್ವಜನಿಕ ಉದ್ದಿಮೆಗಳು | 54 |
| ಇಂಧನ | 55 |
| ವಸತಿ | 55 |
| ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | 56 |
| ಜಲ ಸಂಪನ್ಮೂಲ | 57 |
| ಸಣ್ಣ ನೀರಾವರಿ | 58 |
| ಕಂದಾಯ | 59 |
| ಮುಜರಾಯಿ | 60 |
| ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ | 60 |
| ಸಾರಿಗೆ | 61 |
| ಇ–ಆಡಳಿತ | 63 |
| ಕನ್ನಡ ಮತ್ತು ಸಂಸ್ಕೃತಿ | 64 |
| ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ | 64 |
| ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 65 |
| ವಾಣಿಜ್ಯ ತೆರಿಗೆ | 65 |
| ಲೋಕೋಪಯೋಗಿ | 65 |
| ನಗರಾಭಿವೃದ್ಧಿ | 66 |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | 66 |
| ಬೆಂಗಳೂರು ಮೆಟ್ರೋ ರೈಲು ನಿಗಮ | 66 |
| ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ | 67 |
| ಪೌರಾಡಳಿತ | 68 |
| ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 69 |
| ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ | 70 |
| ಕಾನೂನು | 70 |
| ಆರ್ಥಿಕ | 71 |
| ಆಯವ್ಯಯ ಅಂದಾಜುಗಳು 2018–19 | 87 |

## ಟಿಪ್ಪಣಿ

## ಟಿಪ್ಪಣಿ

# ಟಿಪ್ಪಣಿ

## ಟಿಪ್ಪಣಿ

**ಟಿಪ್ಪಣಿ**

## ಟಿಪ್ಪಣಿ

# ಟಿಪ್ಪಣಿ

**ಟಿಪ್ಪಣಿ**